ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೦

# ಪಟ್ಟಿ – ೧೦

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೊಂಬತ್ತನೇ ಅಧಿವೇಶನ

ಶುಕ್ರವಾರ, ದಿನಾಂಕ: ೧೦ನೇ ಜುಲೈ, ೨೦೧೫

---

## ಸಮೂಹ – V

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೫. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

### ಅನಾವಶ್ಯಕವಾಗಿ ಅನುದಾನ ಬಳಸಿಕೊಳ್ಳದೆ ಇರುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೪೪ (೧೧೫೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿ ೨೦೧೫ನೇ ಮಾರ್ಚ್ ೩೧ಕ್ಕೆ ವಿವಿಧ ಇಲಾಖೆಗಳಿಂದ ಖಜಾನೆಗೆ ಒಪ್ಪಿಸಬೇಕಾದ ವಿವಿಧ ರೀತಿಯ

ಬಿಲ್‌ಗಳನ್ನು ಜಿಲ್ಲಾ ಪಂಚಾಯತ್ ಅಧಿಕಾರಿ ರುಜು ಮಾಡಿ ಖಜಾನೆಗೆ ಸರಿಯಾದ ಸಮಯಕ್ಕೆ ಒಪ್ಪಿಸದೇ ಸರ್ಕಾರ ನೀಡಿರುವ ಅನುದಾನ ವಾಪಸ್ಸಾಗಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಎಷ್ಟು ಅನುದಾನ ಸರಿಯಾದ ಸಮಯದಲ್ಲಿ ಖಜಾನೆಗೆ ಬಿಲ್ ಪೂರೈಸದೇ ವಾಪಸ್ಸಾಗಿರುತ್ತವೆ; (ಇಲಾಖಾವಾರು ವಿವರ ನೀಡುವುದು)

(ಇ) ಈ ರೀತಿ ಸರ್ಕಾರದ ಹಣ ವಾಪಸ್ಸಾಗಲು ಕಾರಣರಾದ ಅಧಿಕಾರಿ ಯಾರು; ಇವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

## ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಲ್ಲಿ ಆಗಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೪೫ (೧೧೫೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಅಡಿಯಲ್ಲಿ ಕಳೆದ ಐದು ವರ್ಷಗಳಿಂದ ಎಷ್ಟು ರಸ್ತೆಗಳನ್ನು ನಿರ್ಮಾಣ ಮಾಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಇದಕ್ಕಾಗಿ ಖರ್ಚು ಮಾಡಲಾಗಿರುವ ಹಣ ಎಷ್ಟು;

(ಇ) ಈಗಾಗಲೇ ಸದರಿ ಯೋಜನೆಯಡಿಯಲ್ಲಿ ಮಾಡಿರುವ ರಸ್ತೆಗಳ ಕಾಮಗಾರಿ ಗುಣಮಟ್ಟ ತೀರಾ ಕಳಪೆಯಾಗಿರುತ್ತದೆಂದು ಸಾರ್ವಜನಿಕರು ಅನೇಕ ಕಡೆ ಪ್ರತಿಭಟನೆ ಮಾಡಿರುತ್ತಾರೆ; ಈ ಬಗ್ಗೆ ಕಳಪೆ ಕಾಮಗಾರಿ ಮಾಡಿದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ?

## ಉತ್ತರ ಕನ್ನಡ ಜಿಲ್ಲೆಯಲ್ಲಿ ನಿರ್ಮಿತಿ ಕೇಂದ್ರದಿಂದ ಕಳಪೆ ಶೌಚಾಲಯ ನಿರ್ಮಾಣ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೪೬ (೧೧೮೭) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಉತ್ತರ ಕನ್ನಡ ಜಿಲ್ಲೆಯಲ್ಲಿ ನಿರ್ಮಿತಿ ಕೇಂದ್ರದಿಂದ ಇಲ್ಲಿಯವರಿಗೆ ಮಾಡಿರುವ ಕಾಮಗಾರಿಗಳು ಎಷ್ಟು; (ವಿವರ ನೀಡುವುದು)

(ಆ) ಕಾರವಾರ ತಾಲ್ಲೂಕಿನ ತೋಡೂರಿನ ಸೀಬರ್ಡ್ ನಿರಾಶ್ರೀತರ ಪುನರ್ವಸತಿ ಕೇಂದ್ರ ಸುತ್ತಮುತ್ತಲು ನಿರ್ಮಿತಿ ಕೇಂದ್ರದಿಂದ ನಿರ್ಮಿಸಿರುವ ಎಲ್ಲಾ ಶೌಚಾಲಯಗಳ ಕಾಮಗಾರಿ ಕಳಪೆ ಮಟ್ಟದ್ದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಇ) ಜಿಲ್ಲೆಯ ನಿರ್ಮಿತಿ ಕೇಂದ್ರದವರು ಉಪ ಗುತ್ತಿಗೆದಾರರಿಂದ ತರಾತುರಿಯಲ್ಲಿ ಕಳಪೆ ಕಾಮಗಾರಿ ಮಾಡಿಸುತ್ತಿರುವ ಹಾಗೂ ಶೌಚಾಲಯ ನಿರ್ಮಿಸುವ ಮುನ್ನ ಸ್ಥಳಿಯರನ್ನು ಅಧಿಕಾರಿಗಳು ಗಣನೆಗೆ ತೆಗೆದುಕೊಳ್ಳದೇ ಊರ ಜನರನ್ನು ಸಂಪರ್ಕಿಸದೇ, ಶೌಚಾಲಯಕ್ಕೆ ಅಗತ್ಯವಿರುವವರ ಪಟ್ಟಿ ತಯಾರಿಸಿ ಸರ್ಕಾರಿ ಹಣವನ್ನು ದುರುಪಯೋಗ ಪಡಿಸಿಕೊಳ್ಳುತ್ತಿರುವ ಬಗ್ಗೆ ಲೋಕಾಯುಕ್ತರಿಗೆ ದೂರು ನೀಡುತ್ತೇವೆಂದು ಜನ ಪ್ರತಿಭಟಿಸಿರುವ ಬಗ್ಗೆ ಸೂಕ್ತ ತನಿಖೆ ಆಗಿರುತ್ತದೆಯೇ; (ವಿವರ ನೀಡುವುದು)

(ಈ) ಈ ಅವ್ಯವಹಾರ ಹಾಗೂ ಕಳಪೆ ಕಾಮಗಾರಿಗೆ ಕಾರಣಕರ್ತನಾಗಿರುವ ನಿರ್ಮಿತಿ ಕೇಂದ್ರದ ಅಧಿಕಾರಿ ಯಾರು; ಅವರ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ; ಇಲ್ಲದಿದ್ದಲ್ಲಿ, ಕ್ರಮಕೈಗೊಳ್ಳಲಾಗುವುದು ಯಾವಾಗ; ಜಿಲ್ಲೆಯ ನಿರ್ಮಿತಿ ಕೇಂದ್ರದ ಹಿತದೃಷ್ಠಿಯಿಂದ ಬೇರೆ ಅಧಿಕಾರಿಯನ್ನು ಸರ್ಕಾರ ಕೂಡಲೇ ನೇಮಿಸುವುದೇ? (ವಿವರ ನೀಡುವುದು)

## ಆಯೋಗದ ಕಾರ್ಯ ವೈಖರಿ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೯೪೭ (೧೨೫೧) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಕ್ಕಳ ಆಯೋಗ ಯಾವ ವರ್ಷದಿಂದ ಕಾರ್ಯನಿರ್ವಹಿಸುತ್ತಿದೆ;

(ಆ) ಈ ಆಯೋಗದ ಕಾರ್ಯವೈಖರಿಯೇನು; ವಿವರಿಸುವುದು;

(ಇ) ಆಯೋಗವು ಅಸ್ತಿತ್ವಕ್ಕೆ ಬಂದಾಗಿನಿಂದ ಮಕ್ಕಳಿಗೆ ಸಂಬಂಧಿಸಿದ ಯಾವ ಯಾವ ಸಮಸ್ಯೆಗಳಿಗೆ ಗಮನ ಹರಿಸಿ ಸರ್ಕಾರಕ್ಕೆ ಸಲಹೆಗಳನ್ನು ನೀಡಿದೆ ಮತ್ತು ಯಾವ ಸಲಹೆಗಳನ್ನು ಸರ್ಕಾರವು ಅಳವಡಿಸಿಕೊಂಡಿದೆ;

(ಈ) ಆಯೋಗದ ಸದಸ್ಯರ ಆಯ್ಕೆ ಪ್ರಕ್ರಿಯೆ/ಮಾನದಂಡವನ್ನು ವಿವರಿಸಿ;

(ಉ) ಪ್ರತೀ ವರ್ಷ ಆಯೋಗಕ್ಕೆ ಸರ್ಕಾರ ಮೀಸಲಿಡುವ ಹಣವೆಷ್ಟು ಮತ್ತು ಇಲಾಖೆಯಿಂದ ಖರ್ಚಾಗಿರುವ ಹಣದ ವಿವರ ನೀಡುವುದು?

## ಮಕ್ಕಳ ಕಲ್ಯಾಣ ಸಮಿತಿಗಳು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೯೪೮ (೧೨೫೦) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩ನೇ ಸಾಲಿನಿಂದ ೨೦೧೫ನೇ ಸಾಲಿನವರೆಗೆ ರಾಜ್ಯದ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗಳೆದುರು ಬಂದ ಪ್ರಕರಣಗಳ ಸಂಖ್ಯೆ ಎಷ್ಟು;

(ಆ) ೨೦೧೩ನೇ ಸಾಲಿನಿಂದ ೨೦೧೫ನೇ ಸಾಲಿನವರೆಗೆ ಇತ್ಯರ್ಥವಾದ ಮತ್ತು ಇತ್ಯರ್ಥವಾಗದೆ ಉಳಿದ ಪ್ರಕರಣಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಸದರಿ ಸಾಲಿನಿಂದ ಪುನರ್ವಸತಿಗೊಂಡ ಮಕ್ಕಳ ಸಂಖ್ಯೆ ಎಷ್ಟು;

(ಈ) ಮಕ್ಕಳ ಕಲ್ಯಾಣ ಸಮಿತಿಗಳು ಕೇಂದ್ರದ ಕಾಯ್ದೆಯನ್ವಯ ನಿರ್ಮಾಣವಾಗಿರುವುದರಿಂದ ರಾಜ್ಯ ಸರ್ಕಾರವು ಈ ಸಮಿತಿಯ ಕಾರ್ಯ ನಿರ್ವಹಣೆಗೆ ಎಂತಹ ಸೌಲಭ್ಯಗಳನ್ನು ನೀಡುತ್ತಿದೆ?

## ಕಸದ ರಾಶಿಗೆ ಪೌಷ್ಠಿಕಾಂಶ ಮಾತ್ರೆಗಳು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೯೪೯ (೧೧೫೪) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಕ್ತ ಹೀನತೆ ತಡೆಗಟ್ಟಲು ಗರ್ಭಿಣಿಯರಿಗೆ, ಕಿಶೋರಿ ಮತ್ತು ಮಕ್ಕಳಿಗೆ ಐಸಿಡಿಎಸ್ ಮತ್ತಿತರೆ ಯೋಜನೆಗಳಡಿ ಸರ್ಕಾರ ಒದಗಿಸಿದ್ದ ಲಕ್ಷಾಂತರ ಮೌಲ್ಯದ ಪೌಷ್ಠಿಕಾಂಶಯುಕ್ತ ಮಾತ್ರೆಗಳು ಕೋಲಾರ ಜಿಲ್ಲೆ, ಚಿಂತಾಮಣಿ ತಾಲ್ಲೂಕಿನ ನಲ್ಲಗುಟ್ಲಹಳ್ಳಿ ಗ್ರಾಮದ ಹೊರವಲಯದ ಬೆಟ್ಟದ ಬಳಿ ಸುರಿದಿರುವ ವಿಷಯ ಬೆಳಕಿಗೆ ಬಂದಿರುವುದು ನಿಜವೇ;

(ಆ) ಬಡವರ ಆರೋಗ್ಯ ಸುಧಾರಣೆಗೆ ಮಾಡಬೇಕಾದ ಮಾತ್ರೆಗಳು ಮಣ್ಣು ಪಾಲಾಗಿರುವುದರ ಹಿಂದೆ, ಯಾರ ನಿರ್ಲಕ್ಷತನವಿದೆ; ಈ ಬಗ್ಗೆ ಸರ್ಕಾರ ತನಿಖೆ ನಡೆಸಿದೆಯೇ; ನಡೆಸಿದ್ದಲ್ಲಿ ಕೈಗೊಂಡಿರುವ ಕ್ರಮಗಳೇನು?

## ಪ್ರವಾಸಿ ತಾಣಗಳಲ್ಲಿ ಶಾಲಾ ಮಕ್ಕಳಿಗೆ ಮೂಲಭೂತ ಸೌಲಭ್ಯಗಳ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೯೫೦ (೧೨೦೨) ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರವಾಸಿ ತಾಣಗಳಲ್ಲಿ ಶಾಲಾ ಮಕ್ಕಳು ಶೈಕ್ಷಣಿಕ ಪ್ರವಾಸ ಕೈಗೊಂಡ ಸಂದರ್ಭದಲ್ಲಿ ಸಾಮೂಹಿಕ ವಸತಿ, ಸ್ನಾನದ ಗೃಹಗಳು, ಶೌಚಾಲಯಗಳ ಸೌಲಭ್ಯಗಳು ಇಲ್ಲದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿಯ ಮೂಲಭೂತ ಸೌಕರ್ಯಗಳ ನಿರ್ಮಾಣಕ್ಕೆ ಸರ್ಕಾರದ ಯೋಜನೆಗಳೇನು ?

## ಮದ್ದೂರು ತಾಲ್ಲೂಕು, ಕೊಕ್ಕರೆ ಬೆಳ್ಳೂರು ಹಾಗೂ ಇತರೆ ಗ್ರಾಮಗಳಿಗೆ ಕುಡಿಯುವ ನೀರಿನ ಸರಬರಾಜು ಯೋಜನೆಯ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೫೧ (೧೨೦೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮದ್ದೂರು ತಾಲ್ಲೂಕು ಕೊಕ್ಕರೆ ಬೆಳ್ಳೂರು ಮತ್ತು ಇತರೆ ೩೩ ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆಯನ್ನು ದಿನಾಂಕ: ೩೦.೧೦.೨೦೦೮ರಲ್ಲಿ ಪ್ರಾರಂಭಿಸಿ ದಿನಾಂಕ: ೩೦.೦೯.೨೦೦೯ರೊಳಗಾಗಿ ಪೂರ್ಣಗೊಳಿಸಲು ಆದೇಶಿಸಲಾಗಿದೆಯೇ ; ಸದರಿ ಯೋಜನೆಯು ಇದುವರೆವಿಗೂ ಪೂರ್ಣಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಕಾಮಗಾರಿಯ ವಿಳಂಬಕ್ಕೆ ಕಾರಣಕರ್ತರು ಯಾರು ; ಸದರಿಯವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಪೂರ್ಣ ವಿವರ ನೀಡುವುದು)

(ಇ) ಸದರಿ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು? (ವಿವರ ನೀಡುವುದು)

## ಮೈಸೂರು ಅಂಭಾವಿಲಾಸ ಅರಮನೆಯಲ್ಲಿ ಅವ್ಯವಹಾರದ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೫೨ (೧೧೫೬) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಅಂಭಾವಿಲಾಸ ಅರಮನೆ ಸ್ವರ್ಣಲೇಪನ ಕಾಮಗಾರಿಯ ಟೆಂಡರ್‌ನಲ್ಲಿ ಲೋಪವಾಗಿರುವುದು ಹಾಗೂ ಇದಕ್ಕೆ ಸಂಬಂಧಪಟ್ಟ ಕಡತವು ನಾಪತ್ತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರವು ಈ ಬಗ್ಗೆ ಕೈಗೊಂಡ ಕ್ರಮದ ಬಗ್ಗೆ ಪೂರ್ಣ ಮಾಹಿತಿ ನೀಡುವುದು?

## ಜೀತದಾಳುಗಳಿಗೆ ಪುನರ್ವಸತಿ ಕಲ್ಪಿಸುವ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೫೩ (೧೧೮೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜೀತ ವಿಮುಕ್ತ ಪುನರ್ವಸತಿ ಯೋಜನೆಯಡಿಯಲ್ಲಿ ಕಳೆದ ೨ ವರ್ಷಗಳಲ್ಲಿ ಜೀತದಾಳುಗಳ ಸಮಿಕ್ಷೆ ಮಾಡಲಾಗಿದೆಯೇ;

(ಆ) ಮಾಡಿದ್ದಲ್ಲಿ, ಜೀತದಾಳುಗಳ ಸಂಖ್ಯೆ ಎಷ್ಟು; ಇದರಲ್ಲಿ ಮಹಿಳೆ, ಪುರುಷರು ಹಾಗೂ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಜೀತದಾಳುಗಳು ಯಾವ ಯಾವ ರಾಜ್ಯದವರು; (ಪೂರ್ಣ ಮಾಹಿತಿ ನೀಡುವುದು)

(ಈ) ಜೀತಾದಾಳು ನೇಮಿಸಿಕೊಂಡಿರುವ ಮಾಲೀಕರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಜೀತಾದಾಳುಗಳಿಗೆ ಪುರ್ನವಸತಿ ಕಲ್ಪಿಸಲಾಗಿದೆಯೇ; ಹಾಗಿದ್ದಲ್ಲಿ, ಯಾವ ರೀತಿ ಕಲ್ಪಿಸಲಾಗಿದೆ;

(ಊ) ಜೀತ ವಿಮುಕ್ತಿ ರಾಜ್ಯವನ್ನಾಗಿ ಮಾಡಲು ಸರ್ಕಾರ ಕ್ರಮವಹಿಸಿದೆಯೇ;

(ಋ) ಕ್ರಮವಹಿಸಿದ್ದರೆ, ಯಾವ ರೀತಿ ಕ್ರಮವಹಿಸಿದೆ? (ವಿವರ ನೀಡುವುದು)

## ಶೇ.೩ರ ಅನುದಾನದಲ್ಲಿ ಅನುದಾನಕ್ಕೆ ಒಳಪಟ್ಟ ಶಿಕ್ಷಕರ ಕುರಿತು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೯೫೪ (೧೨೦೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಶೇ.೦೩ರ ಅನುದಾನದಡಿಯಲ್ಲಿ ಅನುದಾನಕ್ಕೊಳಪಟ್ಟು ಕಾರ್ಯನಿರ್ವಹಿಸುತ್ತಿರುವ ಪದವಿ ಪೂರ್ವ ಉಪನ್ಯಾಸಕರ ಸಂಖ್ಯೆ ಎಷ್ಟು ; ಪದವಿ ಪೂರ್ವ ಉಪನ್ಯಾಸಕರ ಹೆಸರು, ಬೋಧಿಸುತ್ತಿರುವ ವಿಷಯ, ಸೇವೆಗೆ ಸೇರಿದ ದಿನಾಂಕ, ಅನುದಾನಕ್ಕೆ ಒಳಪಟ್ಟ ವರ್ಷ ಹಾಗೂ ದಿನಾಂಕ ಸಹಿತ ಕಾರ್ಯನಿರ್ವಹಿಸುತ್ತಿರುವ ಕಾಲೇಜುಗಳ ಸಂಪೂರ್ಣ ವಿವರ ನೀಡುವುದು ?

## ಬೀದರ್ ಜಿಲ್ಲೆಯಲ್ಲಿ ECO-BRP-CRPಗಳ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೯೫೫ (೧೧೫೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿನ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಬರುವ ECO-BRP-CRPಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವರ ಕಾರ್ಯವ್ಯಾಪ್ತಿ ಏನು; ಹಾಗೂ ಕಾರ್ಯವ್ಯಾಪ್ತಿಯನ್ನು ಮೀರಿ ಕೆಲಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) BRP-CRPಗಳು ಅಧಿಕಾರ ದುರುಪಯೋಗ ಪಡಿಸಿಕೊಂಡು ಸರ್ಕಾರಿ, ಅನುದಾನಿತ, ಖಾಸಗಿ ಶಾಲೆಗಳಲ್ಲಿ ಅಧಿಕಾರ ದುರುಪಯೋಗ ಪಡೆಸಿಕೊಂಡ BRP-CRP-ECO ಗಳೆಷ್ಟು; (ವಿವರ ಒದಗಿಸುವುದು)

(ಈ) ೨೦೧೩–೧೪, ೨೦೧೪–೧೫ನೇ ಸಾಲಿನ ECO-BRP-CRPಗಳ ದೈನಂದಿನ ದಿನಚರಿಯ ಪ್ರತಿಯೊಂದಿಗೆ ತಾಲ್ಲೂಕುವಾರು ಪದನಾಮದೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು?

## ಅಂಗವಿಕಲರ ಸೌಲಭ್ಯಗಳು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೯೫೬ (೧೧೫೯) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಒಟ್ಟು ಎಷ್ಟು ಅಂಗವಿಕಲರುಗಳಿದ್ದಾರೆ; ಅವರ ಸಂಪೂರ್ಣ ವಿಳಾಸವನ್ನೊಳಗೊಂಡ ವಿವರ ಒದಗಿಸುವುದು; (ಸರ್ಕಾರದಿಂದ ಅಂಗವಿಕಲರಿಗೆ ದೊರೆಯುವ ಸೌಲಭ್ಯಗಳ ಪಟ್ಟಿಯ ಮಾಹಿತಿ ನೀಡುವುದು)

(ಆ) ಸರ್ಕಾರದಿಂದ ಯಾವ ಯಾವ ಸೌಲಭ್ಯಗಳನ್ನು ಫಲಾನುಭವಿಗಳಿಗೆ ನೀಡಲಾಗಿದೆ; ನೀಡಿದ್ದಲ್ಲಿ ಅವರ ಸಂಪೂರ್ಣ ವಿವರ ತಾಲ್ಲೂಕುವಾರು ನೀಡುವುದು?

## ಕಂದಗೂಳ ಗ್ರಾಮದಲ್ಲಿ ಜಮೀನಿಗೆ ಹೋಗಲು ರಸ್ತೆ ನಿರ್ಮಾಣ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೯೫೭ (೧೧೬೧) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಔರಾದ ತಾಲ್ಲೂಕಿನ ಜಂಬಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಕಂದಗೂಳ ಗ್ರಾಮದಲ್ಲಿ ಜಮೀನಿಗೆ ಹೋಗಲು ರಸ್ತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಕಂದಗೂಳ ಗ್ರಾಮದಲ್ಲಿ ಹನುಮಾನ ದೇವಸ್ಥಾನದಿಂದ ಸರ್ವೆ ನಂ. ೨೫ರ ಕಲ್ಲಗೊಂಡ ಬಿನ್ ಮಲ್ಲಗೊಂಡ ಮೇತ್ರೆ ಇವರ ಜಮೀನಿನವರೆಗೆ ಹೋಗಲು ಸಾರ್ವಜನಿಕ ರಸ್ತೆ ನಿರ್ಮಾಣ ಮಾಡುವುದರಿಂದ ಕೆಲವು ಸರ್ವೆ ನಂಬರಿನ ಜಮೀನುದಾರರಿಗೆ ಹೋಗಲು ಅನುಕೂಲವಾಗುವುದಿಲ್ಲವೇ;

(ಇ) ಮಳೆಗಾಲದಲ್ಲಿ ಜನರಿಗೆ, ದನಕರುಗಳಿಗೆ, ಬಂಡಿಗೆ, ವಾಹನಗಳಿಗೆ ಬೆಳೆದ ದವಸ ಧಾನ್ಯಗಳನ್ನು ತರಲು ಸುಗ್ಗಿ ಕಾಲದಲ್ಲಿ ಈ ಸಾರ್ವಜನಿಕ ರಸ್ತೆ ಮಾಡುವುದರಿಂದ ಸುಮಾರು ೫೦೦ ಎಕರೆ ಮೇಲ್ಪಟ್ಟು ಉಳುಮೆ ಮಾಡುವ ರೈತರಿಗೆ ಅನುಕೂಲವಾಗುವುದೇ;

(ಈ) ಹಾಗಿದ್ದಲ್ಲಿ, ಈ ರಸ್ತೆ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು; ಸಂಪೂರ್ಣ ಮಾಹಿತಿ ನೀಡುವುದು?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ನೀಡುವ ಅನುದಾನದ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) –**

೯೫೮ (೧೧೬೨) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಯಾವ ಯಾವ ಕಾರ್ಯಕ್ರಮಗಳಿಗೆ ಅನುದಾನ ನೀಡುತ್ತದೆ, ಅನುದಾನ ನೀಡಲು ಇರುವ ಮಾನದಂಡಗಳೇನು; ಕಳೆದ ಮೂರು ವರ್ಷಗಳ ಅವಧಿಯಲ್ಲಿ ನೀಡಲಾದ ಅನುದಾನ, ಕಾರ್ಯಕ್ರಮಗಳ ವಿವರ, ಅನುದಾನ ಪಡೆದ ವ್ಯಕ್ತಿ, ಸಂಸ್ಥೆ, ಒದಗಿಸಲಾದ ಅನುದಾನ ಮೊತ್ತದ ಸಂಪೂರ್ಣ ಪ್ರತ್ಯೇಕ ಮಾಹಿತಿ ಒದಗಿಸುವುದು;

(ಆ) ಕಾರ್ಯಕ್ರಮ ನಡೆಸದೇ ಇರುವ, ಚಿಕ್ಕ ಕಾರ್ಯಕ್ರಮಗಳಿಗೆ ದೊಡ್ಡ ಮೊತ್ತದ ಅನುದಾನ ಪಡೆಯುತ್ತಿರುವ ವ್ಯಕ್ತಿ, ಸಂಸ್ಥೆಗಳ ಕುರಿತು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ, ಇಂತಹ ಪ್ರಕರಣಗಳಲ್ಲಿ ಸರ್ಕಾರ ಕೈಗೊಂಡ ಕ್ರಮ ಏನು? (ಪ್ರಕರಣವಾರು ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಭಜನಾ ಮಂಡಳಿಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೯೫೯ (೧೧೬೬) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಎಷ್ಟು ಭಜನಾ ಮಂಡಳಿಗಳು ಭಜನಾ ಉಪಕರಣಗಳನ್ನು ಕೋರಿ ಅರ್ಜಿ ಸಲ್ಲಿಸಿರುತ್ತಾರೆ; (ಹೆಸರು ಸಮೇತ ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಸರ್ಕಾರ ಕೀರ್ತನಕಾರರಿಗೆ, ಭಜನಾ ಮಂಡಳಿಗೆ ಯಾವ ಯಾವ ಉಪಕರಣವನ್ನು ಒದಗಿಸುತ್ತಿದೆ;

(ಇ) ನೂರಾರು ಭಜನಾ ಮಂಡಳಿಯವರು ಅರ್ಜಿ ಸಲ್ಲಿಸಿದ್ದರೂ ಅವುಗಳನ್ನು ಪರಿಗಣಿಸದೆ ವಿಲೆ ಇಟ್ಟಿರುವ ಅರ್ಜಿಗಳೆಷ್ಟು? (ತಾಲ್ಲೂಕುವಾರು ಅರ್ಜಿದಾರರ ಹೆಸರು ಸಮೇತ ವಿವರ ಒದಗಿಸುವುದು)

## ರಾಜ್ಯದಲ್ಲಿ ಒಟ್ಟು ಗ್ರಾಮಪಂಚಾಯಿತಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೯೬೦ (೧೧೬೫) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳೆಷ್ಟು; ಯಾವ ಯಾವ ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕಿನಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳಿವೆ; ಈ ಪ್ರತಿಯೊಂದು ಗ್ರಾಮ ಪಂಚಾಯಿತಿಗಳಿಗೆ ಸರ್ಕಾರದ ಯಾವ ಯಾವ ಇಲಾಖೆಯಿಂದ ೨೦೧೩ ರಿಂದ ೨೦೧೫ರವರೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಮಾಹಿತಿ ಒದಗಿಸುವುದು?

## ಉದ್ಯೋಗ ಖಾತ್ರಿ ಯೋಜನೆಯ ಅವ್ಯವಹಾರ ಕುರಿತು

**ಶ್ರೀ ವಿ.ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) –**

೯೬೧ (೧೧೬೮) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮೀಣ ಭಾಗದ ಬಡವರಿಗೆ ಉದ್ಯೋಗ ಒದಗಿಸುವ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಅವ್ಯವಹಾರ, ಅಕ್ರಮವಾಗಿರುವುದು ಬೆಳಕಿಗೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ಒಂದೂವರೆ ವರ್ಷಗಳಿಂದ ಯಾವ ಯಾವ ಜಿಲ್ಲೆಗಳಲ್ಲಿ ಅವ್ಯವಹಾರ ಪ್ರಕರಣಗಳು ದಾಖಲಾಗಿವೆ; ಇವುಗಳ ತನಿಖೆ ವಿಚಾರಣೆಯನ್ನು ಕೈಗೆತ್ತಿಕೊಳ್ಳಲಾಗಿದೆಯೇ; ಇವುಗಳಲ್ಲಿ ಸಾಬೀತಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು;

(ಇ) ನರೇಗಾ ಅಕ್ರಮಕ್ಕೆ ಸಂಬಂಧಪಟ್ಟಂತೆ ಈಗಾಗಲೇ ಯಾವ ಜಿಲ್ಲೆಯಿಂದ ಎಷ್ಟು ವಸೂಲಿ ಮಾಡಲಾಗಿದೆ; ವಸೂಲಿಗೆ ಬಾಕಿ ಇರುವ ಪ್ರಕರಣಗಳೆಷ್ಟು;

(ಈ) ಈ ಅವ್ಯವಹಾರ ಅಕ್ರಮಗಳು ಬೆಳಕಿಗೆ ಬಂದಿದ್ದು ಹೇಗೆ, ಅವ್ಯವಹಾರದ ಸ್ವರೂಪ; (ವಿವರಗಳನ್ನು ಒದಗಿಸುವುದು)

(ಉ) ಇವುಗಳಲ್ಲಿ ಕಾಮಗಾರಿ ನಡೆಸದೇ ಹಣ ಮಂಜೂರಾತಿ ಹಾಗೂ ಕಾಮಗಾರಿ ಮೊತ್ತಕ್ಕಿಂತ ಹೆಚ್ಚು ಹಣ ಬಳಕೆ ಮಾಡಿರುವ ಪ್ರಕರಣಗಳೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

**ವಿ.ಟಿ.ಯು ವ್ಯಾಪ್ತಿಯ ಸ್ವಾಯತ್ತ ತಾಂತ್ರಿಕ ಕಾಲೇಜುಗಳ ಕುರಿತು**

**ಶ್ರೀ ವಿ.ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೯೬೨ (೧೧೬೯) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಿ.ಟಿ.ಯು ವ್ಯಾಪ್ತಿಯ ಹಾಗೂ ಸ್ವಾಯತ್ತ ತಾಂತ್ರಿಕ ಕಾಲೇಜುಗಳೆಷ್ಟು; ಜಿಲ್ಲಾವಾರು ಕಾಲೇಜುಗಳ ಹೆಸರು ವಿವರ ಒದಗಿಸುವುದು; ಇವುಗಳಲ್ಲಿ ಧಾರ್ಮಿಕ, ಹಾಗೂ ಭಾಷಾ ಅಲ್ಪಸಂಖ್ಯಾತರವಾರು ಮಾಹಿತಿ ನೀಡುವುದು

(ಆ) ಸದರಿ ಕಾಲೇಜುಗಳ ಪರೀಕ್ಷೆ ಹಾಗೂ ಅಂಕ ನೀಡುವಿಕೆ ಶ್ರೇಣಿ (ಗ್ರೇಡಿಂಗ್) ವ್ಯವಸ್ಥೆಯಲ್ಲಿ ಬದಲಾವಣೆಗಳಿರುವುದು ನಿಜವೇ;

(ಇ) ಈ ವ್ಯತ್ಯಾಸಕ್ಕೆ ಕಾರಣಗಳೇನು; ಇದರಿಂದಾಗಿ ಶ್ರೇಣಿ ಮತ್ತು ಅಂಕಗಳ ವ್ಯತ್ಯಾಸದಿಂದ ಇಂಜಿನಿಯರ್‌ಗಳ ಹುದ್ದೆಯ ನೇಮಕದಲ್ಲಿ ಕೆಲವರಿಗೆ ಅನ್ಯಾಯವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ, ವಿ.ಟಿ.ಯು ಹಾಗೂ ಸ್ವಾಯುತ್ತ ಕಾಲೇಜುಗಳ ಪರೀಕ್ಷೆ ಮೌಲ್ಯಮಾಪನದ ಪಾರದರ್ಶಕತೆ ಬಗ್ಗೆ ಸರ್ಕಾರದ ನಿಲುವೇನು ಸ್ಪಷ್ಟಪಡಿಸುವುದು;

(ಉ) ಅಂಕಗಳಿಗೆ ಗ್ರೇಡ್ ವಿಧಾನ ನೀಡುವ ಕುರಿತು ಈ ಹಿಂದಿನಿಂದಲೂ ಗೊಂದಲಗಳಿರುವುದು ನಿಜವೇ; ಈ ಸಮಸ್ಯೆಯನ್ನು ಸರ್ಕಾರ ಯಾವ ರೀತಿ ನಿವಾರಿಸುತ್ತದೆ; ಅಲ್ಲದೇ ಅರ್ಹರ ಆಯ್ಕೆಗೆ ಯಾವ ಮಾನದಂಡ ಅನುಸರಿಸಲಿದೆ? (ವಿವರ ಒದಗಿಸುವುದು)

## ಗ್ರಾಮ ಪಂಚಾಯತಿಗಳಲ್ಲಿನ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಅಧಿಕಾರಿಗಳ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೯೬೩ (೧೧೮೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯ್ತಿಗಳ ಸಂಖ್ಯೆ ಎಷ್ಟು; ಜಿಲ್ಲಾವಾರು ವಿವರ ಒದಗಿಸುವುದು; ಸದರಿ ಗ್ರಾಮ ಪಂಚಾಯತಿಗಳಿಗೆ ನೀಡುತ್ತಿರುವ ಸರ್ಕಾರದ ಅನುದಾನವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಗ್ರಾಮ ಪಂಚಾಯ್ತಿಗಳಿಂದ ಇಲಾಖೆಗೆ ಬರುವ ಕಂದಾಯ ಮೂಲವೆಷ್ಟು; ಇದನ್ನು ಯಾವ ಉದ್ದೇಶಕ್ಕೆ ಬಳಕೆ ಮಾಡಿಕೊಳ್ಳಲಾಗುತ್ತದೆ.

(ಇ) ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಕಾರ್ಯದರ್ಶಿ ಹಾಗೂ ಪಿಡಿಓಗಳನ್ನು ನೇಮಕ ಮಾಡಲಾಗಿದೆಯೆ; ಪಿಡಿಓಗಳು ಇಲ್ಲದ ಕಡೆ ಆ ಜವಾಬ್ದಾರಿಗಳನ್ನು ಯಾರಿಗೆ ವಹಿಸಲಾಗಿರುತ್ತದೆ; ಇನ್ನು ಎಷ್ಟು ಪಂಚಾಯತಿಗಳಿಗೆ ಪಿಡಿಓಗಳ ಕೊರತೆಯಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಖಾಲಿ ಇರುವ ಕಾರ್ಯದರ್ಶಿ ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಭರ್ತಿಗೆ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ; ಅದೇ ರೀತಿ ಈ ಪಿಡಿಓಗಳಿಗೆ ಸ್ಮಾರ್ಟ್‌ಪೋರ್ಟ್ ಲ್ಯಾಪ್ ಟ್ಯಾಪ್ ಕೊಡುವ ಯೋಜನೆಯನ್ನು ಸರ್ಕಾರ ಅನುಷ್ಠಾನಗೊಳಿಸಿದೆಯೇ; ಇದು ಯಾವಾಗಿನಿಂದ ಜಾರಿಗೆ ಬಂದಿರುತ್ತದೆ;

(ಉ) ಇದರಿಂದ ಸರ್ಕಾರಕ್ಕೆ ಆಗಿರುವ ಖರ್ಚು ಎಷ್ಟು; ಯಾವ ಉದ್ದೇಶಕ್ಕೆ ಇದನ್ನು ವಿತರಣೆ ಮಾಡಲಾಗಿದೆ? (ವಿವರ ನೀಡುವುದು)

## ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನ ಗ್ರಾಮೀಣ ಜನಸೇವಾ ಸಂಸ್ಥೆ ಆನವಟ್ಟಿ ಇದರ ಆಡಳಿತ ಮಂಡಳಿಯ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೯೬೪ (೧೨೩೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನಲ್ಲಿ ಇರುವಂತಹ ಗ್ರಾಮೀಣ ಜನಸೇವಾ ಸಂಸ್ಥೆ ಆನವಟ್ಟಿ ಇದು ಯಾವ ಸಾಲಿನಲ್ಲಿ ಪ್ರಾರಂಭವಾಗಿದೆ; ೨೦೦೦ ದಿಂದ ಇಲ್ಲಿಯವರೆಗೆ ಈ ಆಡಳಿತ

ಮಂಡಳಿಯ ಸದಸ್ಯರು ಯಾರು ಯಾರು; ಅವರ ಹೆಸರು ಮತ್ತು ವಿಳಾಸವೇನು; (ಸಂಪೂರ್ಣ ಮಾಹಿತಿಯೊಂದಿಗೆ ವಿವರ ಒದಗಿಸುವುದು)

(ಆ) ಸದರಿ ಸಂಸ್ಥೆಯವರು ಕಾನೂನುಬಾಹಿರವಾಗಿ ಸಂಸ್ಥೆಯ ಹಣ ಹಾಗೂ ಆಸ್ತಿಯನ್ನು ದುರುಪಯೋಗಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಅವರ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ;

(ಇ) ಸರ್ಕಾರಿ ನೌಕರಿ ಮಾಡುತ್ತಿರುವಂತಹ ಯಾರಾದರೂ ಪದಾಧಿಕಾರಿಗಳು ಈ ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರಾಗಿದ್ದಾರೆಯೇ; ಹಾಗಿದ್ದಲ್ಲಿ, ಸರ್ಕಾರಿ ಪ್ರಾಥಮಿಕ ಶಾಲೆ ಹುರಳಿ ತಾಲ್ಲೂಕು ಸೊರಬ ಇಲ್ಲಿ ಶಿಕ್ಷಕಿ ಒಬ್ಬರು ಕೃಷಿಕರೆಂದು ಸದರಿ ಸಂಸ್ಥೆಯನ್ನು ಅವರ ಹೆಸರಿಗೆ ಅವರ ಪತಿಯಿಂದ ಸೇಲ್‌ಡೀಡ್ ಮಾಡಿರುವುದು ನಿಜವೇ; ನಿಜವಿದ್ದಲ್ಲಿ, ಇದು ಕಾನೂನು ಬಾಹಿರವಾದಂತೆ ಆಗುವುದಿಲ್ಲವೆ; ಹಾಗಿದ್ದರೆ ಸರ್ಕಾರ ಈ ಕುರಿತು ತಕ್ಷಣ ಕ್ರಮ ಕೈಗೊಳ್ಳವುದೇ?

## ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆಯಡಿ ಸರ್ಕಾರಿ ಶಾಲೆಗಳನ್ನು ಮೊದಲ ಆದ್ಯತೆ ಮೇಲೆ ನೆರೆಹೊರೆ ಶಾಲೆಗಳೆಂದು ಘೋಷಿಸುವ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೯೬೫ (೧೨೩೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇಶದಾದ್ಯಂತ ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆಗೆ ನಿಯಮಾವಳಿಗಳನ್ನು ಯಾವಾಗ ರೂಪಿಸಲಾಯಿತು;

(ಆ) ಈ ನಿಯಮಾವಳಿಗಳನ್ವಯ ನೆರೆಹೊರೆ ಶಾಲೆಗಳೆಂದು ಯಾವ ಯಾವ ಶಾಲೆಗಳನ್ನು ಘೋಷಿಸಲಾಗುತ್ತಿದೆ;

(ಇ) ಸರ್ಕಾರಿ ಶಾಲೆಗಳನ್ನು ನೆರೆಹೊರೆ ಶಾಲೆಗಳಲ್ಲಿ ಮೊದಲ ಆದ್ಯತೆಯ ಮೇಲೆ ಘೋಷಿಸಿ ಅಲ್ಲಿ ಸ್ಥಳಗಳು ಭರ್ತಿಯಾದ ನಂತರ ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಿಗೆ ಮಕ್ಕಳನ್ನು ಆಯ್ಕೆ ಮಾಡುವ ವಿಧಾನ ರಾಜ್ಯದಲ್ಲಿ ಜಾರಿಯಲ್ಲಿದೆಯೇ;

(ಈ) ಸರ್ಕಾರಿ ಶಾಲೆಗಳು ಮಕ್ಕಳ ಕೊರತೆಯಿಂದಾಗಿ ಮುಚ್ಚಲು ಕಾರಣಗಳೇನು;

(ಉ) ತಮಿಳುನಾಡು ಹಾಗೂ ಕೇರಳ ಮತ್ತು ಇತರೆ ನೆರೆಹೊರೆ ರಾಜ್ಯಗಳು ಅನುಸರಿಸುತ್ತಿರುವ ಮಾದರಿಯಂತೆ ಮೊದಲು ಸರ್ಕಾರಿ ನಂತರ ಅನುದಾನಿತ ತದನಂತರ ಅನುದಾನರಹಿತ ಶಾಲೆಗಳಿಗೆ ಮಕ್ಕಳನ್ನು ಆಯ್ಕೆ ಮಾಡುವಂತೆ ಸರ್ಕಾರವು ಯಾವುದಾದರೂ ಆದೇಶ ಹೊರಡಿಸಿದೆಯೇ;

(ಊ) ಆದೇಶ ಹೊರಡಿಸಿರದಿದ್ದಲ್ಲಿ ಈ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ?

## ಅನುದಾನ ರಹಿತ ಖಾಸಗಿ ಪದವಿ ಪೂರ್ವ ಕಾಲೇಜುಗಳ ಮೂಲಭೂತ ಸೌಕರ್ಯಗಳ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೯೬೬ (೧೨೩೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳ ಅವಧಿಯಲ್ಲಿ ಸರ್ಕಾರದಿಂದ ಅನುಮತಿ ನೀಡಲಾದ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ವರ್ಷಾವಾರು, ಸಂಖ್ಯೆವಾರು ಅವುಗಳ ವಿವರ ನೀಡುವುದು)

(ಆ) ಈ ಎಲ್ಲ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳು ಅಗತ್ಯ ಮೂಲಭೂತ ಸೌಕರ್ಯಗಳನ್ನು ಹೊಂದಿವೆಯೇ;

(ಇ) ಸರಿಯಾದ ಮೂಲಭೂತ ಸೌಕರ್ಯಗಳನ್ನು ಹೊಂದದೆ ಇರುವಂತಹ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ಮತ್ತು ಅವುಗಳು ಯಾವುವು;

(ಈ) ಸರ್ಕಾರದ ನಿಯಮವಾನುಸಾರ, ಅವಶ್ಯ ಮೂಲಭೂತ ಸೌಕರ್ಯಗಳನ್ನು ಹೊಂದದೆ ಇರುವ ಆಡಳಿತ ಮಂಡಳಿಗಳಿಗೆ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಸರ್ಕಾರ ಅನುಮತಿ ನೀಡಿ ನಾಯಿಕೊಡೆಗಳಂತೆ ಕಾಲೇಜುಗಳು ಬೆಳೆಯುಲು ಕಾರಣವಾಗಿದ್ದು, ಅಂತಹ ಸಂಸ್ಥೆಗಳು ಶಿಕ್ಷಣದ ವ್ಯಾಪಾರೀಕರಣ ಮಾಡುತ್ತಾ ಜನರಿಂದ ಸಾಕಷ್ಟು ಹಣ ವಸೂಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ನಿಯಮಾನುಸಾರ ಮೂಲಭೂತ ಸೌಕರ್ಯಗಳನ್ನು ಹೊಂದದೆ ಇರುವ ಇಂತಹ ಶಿಕ್ಷಣ ಸಂಸ್ಥೆಗಳ ವಿರುದ್ಧ ಸರ್ಕಾರ ಅಗತ್ಯ ಶಿಸ್ತು ಕ್ರಮ ಕೈಗೊಳ್ಳುವುದೇ?

## ಕುಮಾರ ನಾಯಕ್ ವರದಿ ಜಾರಿಗೊಳಿಸುವ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೯೬೭ (೧೧೭೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರೌಢ ಶಾಲಾ ಶಿಕ್ಷಕರ ಹಾಗೂ ಉಪನ್ಯಾಸಕರ ವೇತನ ತಾರತಮ್ಯ ಸರಿಪಡಿಸುವ ಕುರಿತು ಕುಮಾರ ನಾಯಕ್ ನೇತೃತ್ವದ ಸಮಿತಿ ವರದಿಯನ್ನು ಸರ್ಕಾರಕ್ಕೆ ಯಾವಾಗ ಸಲ್ಲಿಸಿದೆ;

(ಆ) ಈ ವರದಿಯ ಅನುಷ್ಠಾನ ಕುರಿತು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಯಾವ ದಿನಾಂಕದಂದು ಸಭೆ ನಡೆಸಲಾಯಿತು;

(ಇ) ಈ ಸಭೆಯ ನಂತರ ಕುಮಾರ ನಾಯಕ್ ವರದಿಯನ್ನು ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಈ ಕುರಿತು ಯಾವಾಗ ಸರ್ಕಾರ ಆದೇಶ ಹೊರಡಿಸಲಿದೆ?

## ಪ್ರವಾಸಿತಾಣಗಳ ಅಭಿವೃದ್ಧಿ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೬೮ (೧೧೭೧) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

೨೦೧೩–೧೪, ೨೦೧೪–೧೫ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ವಿವಿಧ ಪ್ರವಾಸಿ ಕೇಂದ್ರ ಹಾಗೂ ಕೇಂದ್ರ ದೇವಸ್ಥಾನಗಳಲ್ಲಿ ಮೂಲ ಸೌಕರ್ಯ ಒದಗಿಸಲು ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ? (ವಿವರ ಒದಗಿಸುವುದು)

## ಸ್ತ್ರೀ ಶಕ್ತಿಭವನ ನಿರ್ಮಾಣ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೬೯ (೧೧೭೨) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಸ್ತ್ರೀ ಶಕ್ತಿಭವನ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ತಾಲ್ಲೂಕುಗಳಲ್ಲಿ ನಿರ್ಮಿಸಲಾಗುವುದು ;

(ಆ) ಇದಕ್ಕಾಗಿ ಮೀಸಲಿಟ್ಟಿರುವ ಮತ್ತು ಬಿಡುಗಡೆ ಮಾಡಿರುವ ಅನುದಾನ ಎಷ್ಟು;

(ಇ) ಬೆಳಗಾವಿ ಜಿಲ್ಲೆಯ ಯಾವ ಯಾವ ಮತಕ್ಷೇತ್ರಗಳಲ್ಲಿ ಸ್ತ್ರೀ ಶಕ್ತಿಭವನ ಕಟ್ಟಡ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## "ಆರ್.ಎಂ.ಎಸ್.ಎ ಒಪ್ಪಂದದ ಬಗ್ಗೆ"

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –**

೯೭೦ (೧೧೭೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸರ್ಕಾರವು, ಕೇಂದ್ರ ಸರ್ಕಾರದೊಂದಿಗೆ ಆರ್.ಎಂ.ಎಸ್.ಎ. ಬಗ್ಗೆ ಒಪ್ಪಂದಕ್ಕೆ ಒಪ್ಪಗೆಯನ್ನು ಸೂಚಿಸಿರುವುದು ನಿಜವೇ; ಈ ಯೋಜನೆಯಂತೆ ಯಾವ ರೀತಿಯ ಬೋಧನಾ ಪರಿವರ್ತನೆಯನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದಲ್ಲಿ ಜಾರಿಗೆ ತರಬೇಕಾಗಿದೆ;

(ಆ) ಈ ಒಡಂಬಡಿಕೆಯ ನಂತರದಲ್ಲಿ ೧ನೇ ತರಗತಿಯಿಂದ ೧೨ನೇ ತರಗತಿಯವರೆಗೆ ಜಾರಿ ಮಾಡುವ ಯಾವ ಯಾವ ಹಂತದ ಶಿಕ್ಷಕರಿಗೆ ನಿರ್ದಿಷ್ಟ ಪಡಿಸಿರುವ ವಿದ್ಯಾರ್ಹತೆಯ ವಿವರ ನೀಡುವುದು;

(ಇ) ಈ ಹಿನ್ನಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಪದವಿಪೂರ್ಣ ಶಿಕ್ಷಣ ಇಲಾಖೆಯುಲ್ಲಿ ಯಾವ ಸೂಕ್ತ ಬದಲಾವಣೆಯನ್ನು ಮತ್ತು ಪುನರ್ ವಿಂಗಡಣೆಯನ್ನು ಜಾರಿಗೊಳಿಸಬೇಕಾಗಿದೆ; (ವಿವರ ನೀಡುವುದು)

(ಈ) ಈ ಒಪ್ಪಂದ ಪೂರ್ಣ ಪ್ರಮಾಣದ ಜಾರಿಗೆ ಕಾಲಮಿತಿ ಇದೆಯೇ; ಇಲ್ಲಿಯವರೆಗೂ ಯಾವ ಯಾವ ಅಂಶಗಳನ್ನು ಜಾರಿಗೊಳಿಸಲಾಗಿದೆ; ಇನ್ನೂ ಜಾರಿಗೊಳಿಸಬೇಕಾದ ಅಂಶಗಳೇನು? (ವಿವರ ನೀಡುವುದು)

## ಆರ್.ಟಿ.ಇ ಮುಖಾಂತರ ವಿದ್ಯಾರ್ಥಿಗಳ ನೊಂದಾಯಿಸುತ್ತಿರುವ ಕುರಿತು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೭೧ (೧೧೭೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಆರ್.ಟಿ.ಇ ಯೋಜನೆಯಡಿ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಿದ ಒಟ್ಟು ವಿದ್ಯಾರ್ಥಿಗಳ ಸಂಖ್ಯೆಯೆಷ್ಟು; ಪ್ರವೇಶಾವಕಾಶ ಸಿಗದೆ ವಂಚಿತರಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಆರ್.ಟಿ.ಇ ಅಡಿ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಿದವರಿಗೆ ಶಾಲೆಗಳ ವ್ಯಾಪ್ತಿಯಲ್ಲಿದ್ದರೂ ಸಹ ಪ್ರವೇಶಾವಕಾಶ ಸಿಗದೆ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಅಂತಹ ಮಕ್ಕಳನ್ನು ಗುರುತಿಸಿ ಸರ್ಕಾರ ನ್ಯಾಯಯುತವಾಗಿ ಪ್ರವೇಶಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಂಡಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಆರ್.ಟಿ.ಇ ಯೋಜನೆಯಡಿ ಆಯ್ಕೆಗೊಂಡಿರುವ ಮಕ್ಕಳ ಪೋಷಕರಿಂದ ಪ್ರವೇಶಾವಕಾಶ ನೀಡಲು ಖಾಸಗಿ ಶಾಲೆಗಳಿಂದ ಹಣ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಕಳೆದ ಮೂರು ವರ್ಷಗಳಲ್ಲಿ ಆರ್.ಟಿ.ಇ ಯೋಜನೆಯಡಿ ವಿದ್ಯಾಭ್ಯಾಸ ಮಾಡುತ್ತಿರುವ ಪ್ರತಿ ಮಗುವಿಗೆ ಸರ್ಕಾರ ವೆಚ್ಚ ಮಾಡುತ್ತಿರುವ ಹಣವೆಷ್ಟು? (ಜಿಲ್ಲಾವಾರು ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

## ಹೊಸದಾಗಿ ರಚನೆಯಾದ ಗ್ರಾಮ ಪಂಚಾಯಿತಿಗಳ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೭೨ (೧೨೪೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸದಾಗಿ ಸೃಷ್ಠಿಸಲಾದ ೪೩೯ ಗ್ರಾಮ ಪಂಚಾಯತಿಗಳ ಪೈಕಿ ಎಷ್ಟು ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡವಿರುವುದಿಲ್ಲ; (ವಿವರ ನೀಡುವುದು)

(ಆ) ಸ್ವಂತ ಕಟ್ಟಡವಿಲ್ಲದ ಗ್ರಾಮ ಪಂಚಾಯಿತಿಗಳಿಗೆ ಎಷ್ಟು ದಿನಗಳಲ್ಲಿ ಸರ್ಕಾರದಿಂದ ಸ್ವಂತ ಕಟ್ಟಡ ನಿರ್ಮಿಸಿಕೊಡಲಾಗುವುದು;

(ಇ) ಹೊಸ ಗ್ರಾಮ ಪಂಚಾಯಿತಿಗಳಿಗೆ ಪೂರ್ಣ ಪ್ರಮಾಣದ ಸಿಬ್ಬಂದಿಗಳು ಇರುವರೆ;

(ಈ) ಇಲ್ಲದೇ ಇದ್ದಲ್ಲಿ, ಸರ್ಕಾರದಿಂದ ಯಾವಾಗ ನೇಮಕ ಮಾಡಲಾಗುವುದು;

(ಉ) ಕಟ್ಟಡವಿಲ್ಲದೆ, ಸಿಬ್ಬಂದಿಯಿಲ್ಲದೆ ಗ್ರಾಮ ಪಂಚಾಯತ್ ಆಡಳಿತಕ್ಕೆ ಸಮಸ್ಯೆಯುಂಟಾಗುವುದಿಲ್ಲವೇ ?

## ಗ್ರಾಮೀಣಾಭಿವೃದ್ಧಿ ಅಧಿಕಾರಿ ನೇಮಕಾತಿಯ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೭೩ (೧೨೪೫) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಹೋಬಳಿ ಮಟ್ಟದಲ್ಲಿ ಗ್ರಾಮೀಣಾಭಿವೃದ್ಧಿ ಅಧಿಕಾರಿಯನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ತೀರ್ಮಾನಿಸಿದೆಯೆ;

(ಆ) ಹಾಗಿದ್ದಲ್ಲಿ, ಈ ಹುದ್ದೆಯನ್ನು ಭರ್ತಿಮಾಡುವ ವಿಧಾನವೇನು; (ನೇರ ನೇಮಕಾತಿ ಅಥವಾ ಪದೋನ್ನತಿ ಮೂಲಕವೋ)

(ಇ) ಈ ಹುದ್ದೆಗಳನ್ನು ಸರ್ಕಾರ ಯಾವಾಗ ಭರ್ತಿ ಮಾಡುವುದು?

## ಅರಸೀಕೆರೆ ತಾಲ್ಲೂಕಿನ ವೀರಾಪುರ ಗ್ರಾಮದ ಕುಡಿಯುವ ನೀರು ಸಮಸ್ಯೆ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೭೪ (೧೧೭೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆ ಅರಸೀಕೆರೆ ತಾಲ್ಲೂಕಿನ ವೀರಾಪುರ ಗ್ರಾಮದಲ್ಲಿ ಒಂದು ವರ್ಷದಿಂದ ಕುಡಿಯುವ ನೀರಿನ ತೀವ್ರ ಸಮಸ್ಯೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ವೀರಾಪುರದಲ್ಲಿ ಕುಡಿಯುವ ನೀರಿಗೆ ಇರುವ ಬೋರವೆಲ್ ಅಥವಾ ತೆರೆದ ಬಾವಿಗಳೆಷ್ಟು;

(ಇ) ತಳಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದ ವೀರಾಪುರ ಗ್ರಾಮಕ್ಕೆ ಕನಿಷ್ಟ ಕುಡಿಯುವ ನೀರಿನ ವ್ಯವಸ್ಥೆ ಮಾಡಲು ವಿಫಲರಾಗಿರುವುದಕ್ಕೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಭ್ರಷ್ಟಾಚಾರದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು) –**

೯೭೫ (೧೧೮೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆಯುತ್ತಿದ್ದು; ಇದರಿಂದ ಗ್ರಾಮೀಣ ಭಾಗದ ಜನರು ಸವಲತ್ತುಗಳಿಂದ ವಂಚಿತವಾಗಿರುವುದು ನಿಜವಲ್ಲವೇ;

(ಆ) ಈ ಇಲಾಖೆಯ ಅಧಿಕಾರಿಗಳು ನಿಯಮಬಾಹಿರವಾಗಿ ಸರ್ಕಾರದ ಅನುದಾನವನ್ನು ಎಷ್ಟು ವರ್ಷಗಳಿಂದ ಖಾಸಗಿ ಅಕೌಂಟ್‌ಗಳಲ್ಲಿ ಡಿಪಾಸಿಟ್ ಮಾಡಿಕೊಂಡಿರುವ ಪ್ರಕರಣಗಳು ಬೆಳಕಿಗೆ ಬಂದಿವೆ;

(ಇ) ಈ ಹಣವನ್ನು ಯಾವ ಯಾವ ಕಾಮಗಾರಿಗಳಿಗಾಗಿ ವಿನಿಯೋಗಿಸಬೇಕಾಗಿತ್ತು;

(ಈ) ಯಾವ ಯಾವ ಅಧಿಕಾರಿಗಳು, ಎಷ್ಟೆಷ್ಟು ಹಣವನ್ನು ಸರ್ಕಾರಿ ಅಕೌಂಟ್ ನಲ್ಲಿಡದೆ, ಖಾಸಗಿ ಬ್ಯಾಂಕ್‌ನಲ್ಲಿ ಠೇವಣಿ ಮಾಡಿರುತ್ತಾರೆ; ಇದರಿಂದ ಪ್ರತಿ ಅಧಿಕಾರಿಗಳು ಮಾಡಿಕೊಂಡಿರುವ ಲಾಭವೆಷ್ಟು; ಹಾಗೂ ಸರ್ಕಾರಕ್ಕಾಗಿರುವ ನಷ್ಟವೆಷ್ಟು;

(ಉ) ಇಂತಹ ಭ್ರಷ್ಟ ಅಧಿಕಾರಿಗಳ ಮೇಲೆ ಸರ್ಕಾರ ಈವರೆಗೆ ಕೈಗೊಂಡಿರುವ ಕ್ರಮಗಳು ಯಾವುವು; ಹಾಗೂ ಸರ್ಕಾರಕ್ಕೆ ಮಾಡಿರುವ ನಷ್ಟವನ್ನು ಸಂಬಂಧಿಸಿದವರಿಂದ ವಸೂಲಿ ಮಾಡಲಾಗಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು?

## ಕನ್ನಡ ಚಲನಚಿತ್ರರಂಗದ ಬೇಡಿಕೆಗಳು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೯೭೬ (೧೧೮೩) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಮುಂದಿರುವ ಕನ್ನಡ ಚಲನಚಿತ್ರರಂಗದ ಬೇಡಿಕೆ, ಅಭಿವೃದ್ಧಿ ಪ್ರಸ್ತಾವಗಳು ಯಾವುವು;

(ಆ) ಈ ವಿಷಯುಗಳಲ್ಲಿ ಸರ್ಕಾರ ಹಮ್ಮಿಕೊಂಡಿರುವ ಮತ್ತು ತೆಗೆದುಕೊಂಡಿರುವ ಕ್ರಮಗಳು ಯಾವುವು ?

## ನಗರಗಳಲ್ಲಿ ಮೂಲ ಸೌಕರ್ಯ ಅಭಿವೃದ್ಧಿ ಪಡಿಸಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೭೭ (೧೧೮೫) ಮೂಲ ಸೌಲಭ್ಯ ಅಭಿವೃದ್ಧಿ, ವಾತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಜಿಲ್ಲಾ ಮತ್ತು ನಗರ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಬೆಂಗಳೂರು ಸೇರಿದಂತೆ ಪ್ರಮುಖ ನಗರಗಳಲ್ಲಿರುವ ಸಾರ್ವಜನಿಕ ಶೌಚಾಲಯಗಳು ಎಷ್ಟು; (ನಗರವಾರು ಸಂಪೂರ್ಣ ವಿವರ ನೀಡುವುದು)

(ಇ) ನಗರ ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಅಗತ್ಯಕ್ಕೆ ತಕ್ಕಂತೆ ಸಾರ್ವಜನಿಕ ಶೌಚಾಲಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

(ಈ) ರಾಜ್ಯದ ಪ್ರಮುಖ ನಗರ ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಸುಸಜ್ಜಿತ ಸಾರ್ವಜನಿಕ ಶೌಚಾಲಯ ಮತ್ತು ಸ್ನಾನ ಗೃಹ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ವಸತಿ ಯೋಜನೆಯಲ್ಲಿ ಅನುದಾನ ತಡೆಹಿಡಿದಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೭೮ (೧೨೩೮) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಮಂಜೂರಾದ ಬಸವ ವಸತಿ, ಅಂಬೇಡ್ಕರ್, ಇಂದಿರಾ ಆವಾಸ್ ಮನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ವಸತಿ ಯೋಜನೆಯ ಅನುಷ್ಠಾನ ವಿಸ್ತೀರ್ಣ ಮಿತಿ ಘಟಕ ವೆಚ್ಚ, ವಿನಾಯಿತಿ ನೀಡುವ ಸಂಬಂಧ ಹೊರಡಿಸಲಾದ ಆದೇಶ, ಸುತ್ತೋಲೆ, ಮಾರ್ಗ ಸೂಚಿಗಳು ಯಾವುವು; (೨೦೧೦ರ ನಂತರ ಆದೇಶಗಳ ಪ್ರತಿ ಒದಗಿಸುವುದು) .

(ಇ) ಕಳೆದ ೩ ವರ್ಷಗಳಲ್ಲಿ ಮಂಜೂರಾದ ಮನೆಗಳಲ್ಲಿ BLOCK, NOT OK ಆದ ಮನೆಗಳ ಸಂಖ್ಯೆ ಎಷ್ಟು; ಬಿಲ್ಡಿಂಗ್, ಹಂತವಾರು ಪೋಟೊ ಇಲ್ಲದ, ಇನ್ನಿತರ ಕಾರಣ ನೀಡಿ ಅನುದಾನ ತಡೆಹಿಡಿಯಲಾದ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ವಿಧಾನ ಸಭೆವಾರು, ವರ್ಷವಾರು ವಿವರ ನೀಡುವುದು)

(ಈ) ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಮಿತಿಯ ಶಿಫಾರಸ್ಸಿನಂತೆ ವಸತಿಯೋಜನೆಯ ಘಟಕ ವೆಚ್ಚವನ್ನು ೧೦ ಲಕ್ಷಗಳಿಗೆ ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮ ಏನು? (ಪ್ರಸ್ತಾವನೆಯ ಹಂತದ ವಿವರ ನೀಡುವುದು)

## ವಿಕಲಚೇತನರ ಪುನರ್ವಸತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೭೯ (೧೨೩೯) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ವಿಕಲಚೇತನರ ಸಂಖ್ಯೆ ಎಷ್ಟು; (ಜಿಲ್ಲಾವಾರು–ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ವಿಕಲಚೇತನರ ಕಲ್ಯಾಣಕ್ಕಾಗಿ ಇರುವ ಕಾರ್ಯಕ್ರಮಗಳು ಯಾವುವು; ಅವುಗಳನ್ನು ಅನುಷ್ಠಾನ ಮಾಡುತ್ತಿರುವ ಇಲಾಖೆಗಳು ಯಾವುವು;

(ಇ) ತಾಲ್ಲೂಕು ಹಾಗೂ ಗ್ರಾಮ ಪಂಚಾಯತ್ ಮಟ್ಟದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಿಕಲಚೇತನರ ಪುನರ್ವಸತಿ ಕಾರ್ಯಕರ್ತರೆಷ್ಟು; ಅವರಿಗೆ ಪ್ರಸಕ್ತ ನೀಡುತ್ತಿರುವ ವೇತನ/ಭತ್ಯೆ/ಗೌರವಧನ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಪುನರ್‌ವಸತಿ ಕಾರ್ಯಕರ್ತರಿಗೆ ನೀಡುತ್ತಿರುವ ವೇತನ ಅತೀ ಕಡಿಮೆ ಆಗಿರುವುದು ಮತ್ತು ಆ ಕಾರಣದಿಂದಾಗಿ ಸದರಿ ಕೆಲಸಕ್ಕೆ ಯಾರು ಮುಂದೆ ಬರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಪುನರ್ವಸತಿ ಕಾರ್ಯಕರ್ತರಿಗೆ ಉತ್ತಮ ಸೌಲಭ್ಯ ಮತ್ತು ಅವರ ಗೌರವ ಧನ ಪರಿಷ್ಕರಿಸಿ ಹೆಚ್ಚಿಸುವುದಾಗಿ ಸರ್ಕಾರವು ಯಾವ ಕ್ರಮ ಕೈಗೊಳ್ಳಲಿದೆ? (ವಿವರ ನೀಡುವುದು)

## PDO ಗಳಿಗೆ ವಿತರಿಸಿರುವ "ಲ್ಯಾಪ್‌ಟಾಪ್"ಗಳ ಬಗ್ಗೆ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೮೦ (೧೨೪೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ವಿತರಿಸಿರುವ "ಲ್ಯಾಪ್-ಟಾಪ್"ಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಯಾವ ಯೋಜನೆಯಲ್ಲಿ ಲ್ಯಾಪ್‌ಟಾಪ್ ವಿತರಿಸಲಾಗಿದೆ; ಒಟ್ಟು ಎಷ್ಟು ಅನುದಾನ ವೆಚ್ಚ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಯಾವ ಗುಣ ಮಟ್ಟದ, ಯಾವ ಗುಣ ವಿಶೇಷದ ಲ್ಯಾಪ್‌ಟಾಪ್ ವಿತರಿಸಲಾಗಿದೆ; ಯಾವ ಯಾವ ಜಿಲ್ಲೆಗೆ ಯಾವ ಸಂಸ್ಥೆಯವರು ಸರಬರಾಜು ಮಾಡಿರುತ್ತಾರೆ; (ಜಿಲ್ಲಾವಾರು ವಿವರ ನೀಡುವುದು)

(ಈ) ಲ್ಯಾಪ್‌ಟಾಪ್ ಸರಬರಾಜನ್ನು ಯಾವ ಸಂಸ್ಥೆಗಳಿಗೆ ಯಾವ ಆಧಾರದ ಮೇಲೆ ಹಂಚಿಕೆ ಮಾಡಲಾಗಿದೆ; (ವಿವರ ನೀಡುವುದು)

(ಉ) PDO ಗಳ ವರ್ಗಾವಣೆ ನಿಯೋಜನೆ ಸಂದರ್ಭದಲ್ಲಿ ಲ್ಯಾಪ್ ಟಾಪ್ ಗಳನ್ನು ಪಂಚಾಯತ್‌ಗಳಲ್ಲಿಡಬೇಕೆ ಅಥವಾ ತಮ್ಮೊಂದಿಗೆ ತೆಗೆದುಕೊಂಡು ಹೋಗಬಹುದೆ? (ಈ ಬಗ್ಗೆ ಹೊರಡಿಸಿರುವ ಸ್ಪಷ್ಟನೆಯ ಆದೇಶಗಳನ್ನು ನೀಡುವುದು)

## ಗ್ರಾಮ ಪಂಚಾಯತ್‌ಗಳ ನೌಕರರಿಗೆ ಸೌಲಭ್ಯ ನೀಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೮೧ (೧೨೪೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು ಗ್ರಾಮ ಪಂಚಾಯತ್ ನೌಕರರ ಸಂಖ್ಯೆ ಎಷ್ಟು; (PDO, ಕಾರ್ಯದರ್ಶಿ, SDAA ಹೊರತು ಪಡಿಸಿ ತಾಲ್ಲೂಕುವಾರು, ಜಿಲ್ಲಾವಾರು, ಹುದ್ದೆವಾರು ವಿವರ ನೀಡುವುದು)

(ಆ) ಸದರಿ ನೌಕರರುಗಳಲ್ಲಿ ಜಿಲ್ಲಾ ಪಂಚಾಯತ್ ಇಲಾಖೆಯಿಂದ ಅನುಮೋದನೆಯಾದ ನೌಕರರ ಸಂಖ್ಯೆ ಎಷ್ಟು; ಅನುಮೋದನೆಯಾಗದೇ ಬಾಕಿ ಉಳಿದಿರುವ ನೌಕರರ ಸಂಖ್ಯೆ ಎಷ್ಟು; ಅನುಮೋದನೆಯಾಗದೇ ಬಾಕಿ ಇರಲು ಕಾರಣವೇನು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಗ್ರಾಮ ಪಂಚಾಯತ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಂಪ್ಯೂಟರ್ ಆಪರೇಟರ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು) ಸದರಿ ನೌಕರರಿಗೆ ನಿಗಧಿ ಪಡಿಸಿರುವ ವೇತನ ಎಷ್ಟು; ಯಾವ ಅನುದಾನದಿಂದ ಇವರಿಗೆ ವೇತನ ಪಾವತಿ ಮಾಡಲಾಗುತ್ತಿದೆ;

(ಈ) ಗ್ರಾಮ ಪಂಚಾಯತ್ ನೌಕರರಿಗೆ ನಿಗದಿತ ಸಮಯದಲ್ಲಿ ವೇತನ ಪಾವತಿ, ಇ.ಎಸ್.ಐ., ಪಿ.ಎಫ್, ಮಕ್ಕಳ ವಿದ್ಯಾಭ್ಯಾಸ ಸೌಲಭ್ಯ, ಮರಣ ಮತ್ತು ನಿವೃತ್ತಿ ಉಪದಾನ ಸೌಲಭ್ಯ, ಜಿ.ಪಂ ಅನುಮೋದನೆ ನೀಡುವ ಸಂಬಂಧ ಹಾಗೂ ರಜಾ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಸರ್ಕಾರ ಯಾವ-ಯಾವ ಕ್ರಮ ಕೈಗೊಂಡಿದೆ? (ಸಂಪೂರ್ಣ ವಿವರ ನೀಡುವುದು)

## ವಸತಿ ಯೋಜನೆ ಅಡಿಯಲ್ಲಿ ಮನೆ ನಿರ್ಮಾಣ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೯೮೨ (೧೨೨೭) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩-೧೪ ಮತ್ತು ೨೦೧೪-೧೫ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ಎಷ್ಟೆಷ್ಟು ಮನೆಗಳನ್ನು ನಿರ್ಮಿಸಲಾಗಿದೆ ಮತ್ತು ಹಂಚಿಕೆ ಮಾಡಲಾಗಿದೆ;

(ಆ) ಇವುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳೆಷ್ಟು;

(ಇ) ಇಲಾಖೆಯು ವಿಶೇಷ ಘಟಕ ಯೋಜನೆ ಅಡಿಯಲ್ಲಿ ಎಸ್.ಸಿ./ಎಸ್.ಟಿ.ಗಳಿಗೆ ಯಾವ ಯಾವ ಸೌಲಭ್ಯಗಳಿವೆ; ಮತ್ತು ಈ ವರ್ಗಗಳ ಫಲಾನುಭವಿಗಳಿಗೆ ಯಾವ ರೀತಿಯ ರಿಯಾಯಿತಿ ನೀಡಲಾಗಿದೆ? (ವಿವರ ಒದಗಿಸುವುದು)

**ಖಾಸಗಿ ವಿಶ್ವವಿದ್ಯಾಲಯಗಳಲ್ಲಿ ಮೀಸಲಾತಿ ಪಾಲಿಸುವ ಬಗ್ಗೆ**

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)** –

೯೮೩ (೧೨೨೫) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ವಿಶ್ವವಿದ್ಯಾಲಯಗಳು ಎಷ್ಟು; ಅವುಗಳ ಹೆಸರು ಮತ್ತು ವಿಳಾಸ ನೀಡುವುದು;

(ಆ) ಖಾಸಗಿ ವಿಶ್ವವಿದ್ಯಾಲಯಗಳಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗ ಹಾಗೂ ಹಿಂದುಳಿದ ವರ್ಗಗಳಿಗೆ ಸರ್ಕಾರಿ ಆದೇಶದಂತೆ ವಿದ್ಯಾರ್ಥಿಗಳ ಪ್ರವೇಶದಲ್ಲಿ ಮೀಸಲಾತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಲಾಗುವುದೇ;

(ಇ) ಹಾಗಾದರೆ ಖಾಸಗಿ ವಿಶ್ವವಿದ್ಯಾಲಯಗಳಲ್ಲಿ ೨೦೧೫-೧೬ನೇ ಸಾಲಿನಲ್ಲಿ ವೈದ್ಯಕೀಯ ಮತ್ತು ಇಂಜನಿಯರಿಂಗ್ ಕಾಲೇಜುಗಳಲ್ಲಿ ಪ್ರತಿ ವಿಭಾಗಗಳಲ್ಲಿ ಪ್ರವೇಶ ಪಡೆದ ಸೀಟುಗಳ ಸಂಖ್ಯೆ ಎಷ್ಟು;

(ಈ) ಯಾವ ಯಾವ ವಿಭಾಗಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಎಷ್ಟೆಷ್ಟು ಮೀಸಲಾತಿ ನೀಡಲಾಗಿದೆ?

**ಖಾಸಗಿ ವಿಶ್ವವಿದ್ಯಾಲಯಗಳಲ್ಲಿ ನೇಮಕಾತಿ ಮೀಸಲಾತಿ ಬಗ್ಗೆ**

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೯೮೪ (೧೨೨೬) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಹಾಗೂ ಖಾಸಗಿ ವಿಶ್ವವಿದ್ಯಾಲಯಗಳಲ್ಲಿ ಸಿಬ್ಬಂದಿ ನೇಮಕಾತಿಯಲ್ಲಿ. ಎಸ್.ಸಿ./ಎಸ್.ಟಿ. ಗಳಿಗೆ ಮೀಸಲಾತಿ ಪಾಲಿಸಬೇಕೆಂಬ ನಿಯಮವಿದೆಯೇ;

(ಆ) ಪ್ರತಿ ವಿಶ್ವವಿದ್ಯಾಲಯಗಳಲ್ಲಿ ವರ್ಗಾವಾರು (Cader wise) ಇರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಇ) ಇವುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಪ್ರತಿ Cader wise ಇರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು?

**ವಿಶೇಷ ಘಟಕ ಯೋಜನೆ ಕುರಿತು**

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೯೮೫ (೧೨೨೪) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಾರ್ತಾ ಇಲಾಖೆಯ ವತಿಯಿಂದ ಎಸ್.ಸಿ./ಎಸ್.ಟಿ. ಫಲಾನುಭವಿಗಳಿಗೆ ಉಚಿತವಾಗಿ ಲ್ಯಾಪ್ ಟಾಪ್ ನೀಡುವ ಕಾರ್ಯಕ್ರಮ ಜಾರಿಯಲ್ಲಿದೆಯೇ;

(ಆ) ೨೦೧೪–೧೫ನೇ ಸಾಲಿನಲ್ಲಿ ಯಾವ–ಯಾವ ಫಲಾನುಭವಿಗಳಿಗೆ ಈ ಸೌಲಭ್ಯ ನೀಡಲಾಗಿದೆ,

(ಇ) ೨೦೧೪-೧೫ನೇ ಸಾಲಿನಲ್ಲಿ ಈ ಕಾರ್ಯಕ್ರಮಕ್ಕೆ ಮೀಸಲಿಟ್ಟ ಹಣ ಎಷ್ಟು;

(ಈ) ಖರ್ಚಾದ ಹಣವೆಷ್ಟು ವಿವರ ಒದಗಿಸುವುದು?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯಕ್ರಮ ಪ್ರಾಯೋಜಕತ್ವದ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೯೮೬ (೧೧೮೯) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೪-೧೫ನೇ ಸಾಲಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ವತಿಯಿಂದ ಪ್ರಾಯೋಜಿಸಿದ ಕಾರ್ಯಕ್ರಮಗಳು ಯಾವುವು; ಪ್ರಾಯೋಜಿಸಿದ ತಂಡಗಳು ಯಾವುವು; (ಹೆಸರಿನೊಂದಿಗೆ ವಿವರ ನೀಡುವುದು)

(ಆ) ಸದರಿ ಸಾಲಿನಲ್ಲಿ ಕಲಾವಿದರಿಗೆ ಸಂಭಾವನೆ ಹಣ ಪಾವತಿಯಾಗಿದೆಯೆ; ಸಂಭಾವನೆ ಎಷ್ಟು;

(ಇ) ಕಳೆದ ವರ್ಷಾಂತ್ಯದ ಮುಗಿದು ಮೂರು ತಿಂಗಳಾದರು ಕಲಾವಿದರಿಗೆ ಹಣ ಸಂದಾಯವಾಗದಿರಲು ಕಾರಣವೇನು; ಎಷ್ಟು ಹಣ ಸಂದಾಯವಾಗಲು ಬಾಕಿ ಇದೆ?

## ಕೊಳಚೆ ಪ್ರದೇಶಗಳಲ್ಲಿ ಕೈಗೊಳ್ಳಲಾದ ವಸತಿ ಯೋಜನೆಗಳು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೮೭ (೧೧೯೩) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕೊಳಚೆ ಪ್ರದೇಶಗಳಿಂದ ಗುರುತಿಸಲಾದ ಬಡಾವಣೆಗಳೆಷ್ಟು; (ನಗರವಾರು ಕ್ಷೇತ್ರವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳ ಕೊಳಚೆ ಪ್ರದೇಶದಲ್ಲಿ ಕಳೆದ ೩ ವರ್ಷಗಳಲ್ಲಿ ಕೈಗೊಳ್ಳಲಾದ ವಸತಿ ಯೋಜನೆಗಳ ಸಂಖ್ಯೆ ಎಷ್ಟು; ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು? (ಯೋಜನಾವಾರು ವಿವರ ನೀಡುವುದು)

## ಉದ್ಯೋಗ ಖಾತ್ರಿ ಯೋಜನೆ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೮೮ (೧೧೯೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೧-೨೦೧೨ ಮತ್ತು ೨೦೧೨-೨೦೧೩ನೇ ಸಾಲಿನಿಂದ ಇಲ್ಲಿಯವರೆಗೆ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗೆ ಉದ್ಯೋಗ ಖಾತ್ರಿಯೋಜನೆಗೆ ಸರ್ಕಾರ ಬಿಡುಗಡೆ ಮಾಡಿದ ಹಣವೆಷ್ಟು;

(ಆ) ಸದರಿ ಸಾಲಿನಲ್ಲಿ ಯಾದಗಿರಿ ಮತ್ತು ಕಲಬುರಗಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಗ್ರಾಮ ಪಂಚಾಯತಿಗಳಿಗೆ ಉದ್ಯೋಗ ಖಾತ್ರಿ ಯೋಜನೆಗೆ ಬಿಡುಗಡೆಯಾದ ಹಣವೆಷ್ಟು; ಇಲ್ಲಿಯವರಿಗೆ ಪ್ರತಿ ವರ್ಷ ಪಂಚಾಯತಿವಾರು ಖರ್ಚು ಮಾಡಿದ ಹಣವೆಷ್ಟು;

(ಇ) ಸದರಿ ಜಿಲ್ಲೆಗಳಲ್ಲಿ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಯಾವ ಯಾವ ಇಲಾಖೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಬಿಡುಗಡೆ ಮಾಡಿದ ಹಣ ಸರಿಯಾದ ರೀತಿಯಲ್ಲಿ ಸದ್ಬಳಕೆ ಆಗಿದೆಯೇ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆ ಕುಡಿಯುವ ನೀರಿನ ಪ್ಲೋರೆಡ್ ಅಂಶವಿರುವ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೮೯ (೧೧೯೧) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕುಡಿಯುವ ನೀರಿನಲ್ಲಿ ಪ್ಲೋರೆಡ್ ಅಂಶವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದರಿಂದ ಜನರಿಗೆ ಆಗುವ ಅನಾಹುತಗಳನ್ನು ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಪ್ಲೋರೆಡ್ ಅಂಶದ ನೀರನ್ನು ಹೊಂದಿದ ಗ್ರಾಮಗಳು ಯಾವುವು ; ಹಾಗೂ ಒಟ್ಟು ಎಷ್ಟು?

## ಅನುದಾನಿತ ಪದವಿ ಪೂರ್ವ ಕಾಲೇಜುಗಳ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೯೯೦ (೧೧೯೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಸದರಿ ಕಾಲೇಜುಗಳಲ್ಲಿ ರಾಜೀನಾಮೆ, ನಿವೃತ್ತಿ ಇನ್ನಿತರೆ ಕಾರಣಗಳಿಂದ ಖಾಲಿಯಾಗಿರುವ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; (ವಿಷಯವಾರು ಹಾಗೂ ವರ್ಗವಾರು ವಿವರ ನೀಡುವುದು)

(ಇ) ಸದರಿ ಹುದ್ದೆಗಳು ಯಾವ ಸಮಯದಿಂದ ಖಾಲಿ ಉಳಿದಿವೆ;

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಉ) ಯಾವ ಕಾಲಮಿತಿಯಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು?

## ಬೋಧಕ ಸಿಬ್ಬಂದಿಗೆ ೬ನೇ ಯುಜಿಸಿ/ಎಐಸಿಟಿಇ ವೇತನ ಬಾಕಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೯೯೧ (೧೧೯೪) ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಹಾಗೂ ಅನುದಾನಿತ ಪ್ರಥಮ ದರ್ಜೆ ಕಾಲೇಜು, ಬಿ.ಇಡಿ, ಇಂಜಿನಿಯರಿಂಗ್ ಕಾಲೇಜುಗಳ ಬೋಧಕ ಸಿಬ್ಬಂದಿಗೆ ಪರಿಷ್ಕೃತ ೬ನೇ ಯುಜಿಸಿ ಹಾಗೂ ಎಐಸಿಟಿಇ ವೇತನ ಬಾಕಿ ನೀಡಬೇಕಾಗಿದೆಯೇ;

(ಆ) ಹಾಗಾದರೆ, ಎಷ್ಟು ಮಂದಿ ಅಧ್ಯಾಪಕರಿಗೆ ಯಾವ ಅವಧಿಯ, ಎಷ್ಟು ಬಾಕಿ ಮೊತ್ತವನ್ನು ನೀಡಬೇಕಾಗಿದೆ; (ವಿವರ ನೀಡುವುದು)

(ಇ) ಕಳೆದ ೪ ವರ್ಷಗಳಿಂದ ವೇತನ ಬಾಕಿ ನೀಡದೆ ಇರಲು ಕಾರಣವೇನು; (ವಿವರ ನೀಡುವುದು)

(ಈ) ಸದರಿ ವೇತನ ಬಾಕಿ ಬಿಡುಗಡೆ ಸಂಬಂಧ ಕಳೆದ ೪ ವರ್ಷಗಳಿಂದ ಕೇಂದ್ರ ಸರ್ಕಾರದೊಡನೆ ರಾಜ್ಯ ಸರ್ಕಾರ ಮಾಡಿರುವ ಪತ್ರ ವ್ಯವಹಾರಗಳೇನು; (ಮಾಹಿತಿ ನೀಡುವುದು)

(ಉ) ಯಾವ ಕಾಲ ಮಿತಿಯಲ್ಲಿ ವೇತನ ಬಾಕಿಯನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದು?

## ಕಾಲ್ಪನಿಕ ವೇತನ ಸೌಲಭ್ಯದ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೯೯೨ (೧೧೯೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾಲ್ಪನಿಕ ವೇತನ ಬಡ್ತಿಯಿಂದ ವಂಚಿತರಾಗಿರುವ ಅನುದಾನಿತ ಶಾಲಾ ಕಾಲೇಜು ಸಿಬ್ಬಂದಿಗಳಿಗೆ ಕಾಲ್ಪನಿಕ ವೇತನ ಸೌಲಭ್ಯ ನೀಡಬೇಕೆಂದು ವಿಧಾನ ಪರಿಷತ್ತಿನ ಸದಸ್ಯರು, ಶಿಕ್ಷಕರ ಸಂಘಟನೆಗಳು ಹೋರಾಟ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಸಂಬಂಧ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಸವರಾಜ ಹೊರಟ್ಟಿರವರ ನೇತೃತ್ವದ ಸದಸ್ಯರ ಸಮಿತಿ ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ; ಸಲ್ಲಿಸಿದ್ದಲ್ಲಿ, ಯಾವಾಗ;

(ಇ) ಹಾಗಾದರೆ, ಸದರಿ ವರದಿಯ ಮುಖ್ಯಾಂಶಗಳೇನು; (ವಿವರ ನೀಡುವುದು)

(ಈ) ವರದಿ ಪ್ರಕಾರ ಎಷ್ಟು ಮಂದಿ ಶಿಕ್ಷಕರಿಗೆ ವಾರ್ಷಿಕ ಎಷ್ಟು ಮೊತ್ತವನ್ನು ನೀಡಬೇಕಾಗಿದೆ;

(ಉ) ಸದರಿ ವರದಿಯ ಶಿಫಾರಸ್ಸಿನ ಅನ್ವಯ ಕಾಲ್ಪನಿಕ ವೇತನ ಬಡ್ತಿ ವಿಧೇಯಕಕ್ಕೆ ತಿದ್ದುಪಡಿ ಮಾಡಿ ಕಾಲ್ಪನಿಕ ವೇತನ ಬಡ್ತಿ ಸೌಲಭ್ಯ ಕಲ್ಪಿಸಲು ಸರ್ಕಾರ ಇದುವರೆವಿಗೆ ಕೈಗೊಂಡಿರುವ ಕ್ರಮಗಳೇನು;

(ಊ) ಯಾವ ಕಾಲಮಿತಿಯಲ್ಲಿ ಸದರಿ ಸೌಲಭ್ಯ ಕಲ್ಪಿಸಲಾಗುವುದು?

## ಪ್ರೊ: ವೈದ್ಯನಾಥನ್ ವರದಿ ಅನುಷ್ಠಾನದ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೯೯೩ (೧೧೯೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಯಾವಾಗ ದೈಹಿಕ ಶಿಕ್ಷಣ ಸಂಬಂಧ ಪ್ರೊ: ವೈದ್ಯನಾಥನ್ ವರದಿಯ ಅನುಷ್ಠಾನಕ್ಕೆ ಒಪ್ಪಿಗೆ ಸೂಚಿಸಿದೆ;

(ಆ) ವರದಿ ಸಂಬಂಧ ದೈಹಿಕ ಶಿಕ್ಷಕರ ನೇಮಕಾತಿ ವೃಂದಕ್ಕೆ ತಿದ್ದುಪಡಿ ತರಲು ಸರ್ಕಾರ ಚಿಂತಿಸಿದೆಯೇ;

(ಇ) ಹಾಗಾದರೆ, ತಿದ್ದುಪಡಿಯ ಮುಖ್ಯಾಂಶಗಳಾವುವು; (ವಿವರ ನೀಡುವುದು)

(ಈ) ತಿದ್ದುಪಡಿ ಮಾಡುವಲ್ಲಿ ತೀರ ವಿಳಂಬ ಉಂಟಾಗುತ್ತಿರಲು ಕಾರಣಗಳೇನು;

(ಉ) ಯಾವ ಕಾಲಮಿತಿಯಲ್ಲಿ ತಿದ್ದುಪಡಿ ಮಾಡಲಾಗುವುದು?

## ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೯೯೪ (೧೧೯೭) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ರಾಜೀನಾಮೆ, ನಿವೃತ್ತಿ ಇನ್ನಿತರೆ ಕಾರಣಗಳಿಂದ ಖಾಲಿಯಾಗಿರುವ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; (ವಿಷಯವಾರು ಹಾಗೂ ವರ್ಗವಾರು ವಿವರ ನೀಡುವುದು)

(ಇ) ಸದರಿ ಹುದ್ದೆಗಳು ಯಾವ ದಿನಾಂಕದಿಂದ ಖಾಲಿ ಉಳಿದಿವೆ;

(ಈ) ಈ ಕಾಲೇಜುಗಳಲ್ಲಿ ಬೋಧಕ/ಬೋಧಕೇತರ ಸಿಬ್ಬಂದಿ ಕೊರತೆಯಿಂದ ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳದೆ ಇರಲು ಕಾರಣಗಳೇನು;

(ಊ) ಯಾವ ಕಾಲಮಿತಿಯಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ವಹಿಸುತ್ತದೆ?

## ರಾಜ್ಯದಲ್ಲಿ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಕಾರ್ಯವೈಖರಿಯ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೯೫ (೧೨೦೩) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಯಾವ ವರ್ಷದಿಂದ ಕಾರ್ಯನಿರ್ವಹಿಸುತ್ತಿದೆ;

(ಆ) ಸದರಿ ಆಯೋಗದ ಕಾರ್ಯವೈಖರಿ ವಿವರ ಒದಗಿಸುವುದು ;

(ಇ) ಆಯೋಗವು ಅಸ್ತಿತ್ವಕ್ಕೆ ಬಂದಾಗಿನಿಂದ ಮಕ್ಕಳಿಗೆ ಸಂಬಂಧಿಸಿದಂತೆ ಯಾವ ಯಾವ ಸಮಸ್ಯೆಗಳಿಗೆ ಗಮನಹರಿಸಿ ಸರ್ಕಾರಕ್ಕೆ ಸಲಹೆಗಳನ್ನು ನೀಡಿದೆ ಮತ್ತು ಯಾವ ಯಾವ ಸಲಹೆಗಳನ್ನು ಸರ್ಕಾರವು ಅಳವಡಿಸಿಕೊಂಡಿದೆ ;

(ಈ) ಆಯೋಗದ ಸದಸ್ಯರ ಆಯ್ಕೆ ಪ್ರಕ್ರಿಯೆಗೆ ಅನುಸರಿಸಲಾಗುತ್ತಿರುವ ಮಾನದಂಡಗಳಾವುವು ; (ವಿವರಿಸುವುದು)

(ಉ) ಪ್ರತಿ ವರ್ಷ ಆಯೋಗಕ್ಕೆ ಸರ್ಕಾರ ಮೀಸಲಿಡುವ ಹಣವೆಷ್ಟು; ಇಲಾಖೆಯಿಂದ ಖರ್ಚಾಗಿರುವ ಹಣ ಎಷ್ಟು ? (ವಿವರ ನೀಡುವುದು)

## ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ ಕಟ್ಟಡ ಕಟ್ಟಲು ಪರವಾನಗಿ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೯೯೬ (೧೨೦೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯಿತಿಗಳಿಗೆ ಅಧಿಕೃತ ಬೈಲಾಗಳನ್ನು ಅಳವಡಿಸಿಕೊಳ್ಳಲು ಸರ್ಕಾರ ನಿರ್ಧರಿಸಿದೆಯೇ ಅಂತಹ ಬೈಲಾ ನಿಯಮಗಳೇನು ;

(ಆ) ಆಡಳಿತ ವಿಕೇಂದ್ರೀಕರಣ ದೃಷ್ಟಿಯಿಂದ ಆ ಭಾಗದ ಪರವಾನಗಿ ನೀಡುವ ಅಧಿಕಾರವನ್ನು ಆ ಪಂಚಾಯಿತಿಗೆ ನೀಡಿರುವುದು ನಿಜವೇ ; ಇದರಿಂದಾಗಿ ಈ ಭಾಗದ ಮನೆ ದುರಸ್ಥಿ ನಿರ್ಮಾಣ ಇತ್ಯಾದಿ ಸಣ್ಣ–ಪುಟ್ಟ ಕೆಲಸಗಳಿಗೂ ಗೊಂದಲ ಸಮಸ್ಯೆ ನಿರ್ಮಾಣವಾಗಿರುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಮನೆ ಕಟ್ಟಲು ಅನುಮತಿ ಇಲ್ಲದಿರುವುದರಿಂದ ಬ್ಯಾಂಕ್ ಸಾಲ ಇತ್ಯಾದಿ ಸಿಗದೇ ಗ್ರಾಮಸ್ಥರು ತೊಂದರೆ ಅನುಭವಿಸುತ್ತಿರುವ ಪ್ರಕರಣ ಬೆಳಕಿಗೆ ಬಂದಿದೆಯೇ ;

(ಈ) ಎಲ್ಲೆಲ್ಲಿ ಈ ರೀತಿ ನಡೆದಿರುತ್ತದೆ ; ಇದರ ನಿವಾರಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ಒದಗಿಸುವುದು)

## ವಿಶೇಷ ವರ್ಗದ ಜನಾಂಗದವರಿಗೆ ವಿಶೇಷ ವಸತಿ ಯೋಜನೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು)** –

೯೯೭ (೧೨೧೦) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ವಿಶೇಷ ಅಂಚಿನಲ್ಲಿರುವ ವಿಶೇಷ ವರ್ಗದ ಜನಾಂಗದವರಿಗೆ ಇರುವ ವಿಶೇಷ ವಸತಿ ಯೋಜನೆ ಅಡಿಯಲ್ಲಿ ನಿರ್ಮಿಸಲಾಗಿರುವ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ೨೦೧೪–೧೫ರಲ್ಲಿ ಇದಕ್ಕಾಗಿ ಮೀಸಲಿಟ್ಟ ಹಣ ಎಷ್ಟು ;

(ಆ) ವಿಶೇಷ ವಸತಿ ಯೋಜನೆಯ ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳು ಮತ್ತು ಹೊಣೆಗಾರಿಕೆ ಯಾರದ್ದು ;

(ಇ) ವಿಶೇಷ ವಸತಿ ಯೋಜನೆಯನ್ನು ಅನುಷ್ಠಾನ ಮಾಡಲು ಸರ್ಕಾರ ರೂಪಿಸಿರುವ ಮಾರ್ಗಸೂಚಿಗಳೇನು ?

## ವಿಶ್ವವಿದ್ಯಾಲಯಗಳಲ್ಲಿ ಹಣಕಾಸು ದುರುಪಯೋಗದ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು)** –

೯೯೮ (೧೨೧೨) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅನೇಕ ವಿಶ್ವವಿದ್ಯಾಲಯಗಳಲ್ಲಿ ಹಣಕಾಸು ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಕರಣಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಇ) ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಹಣಕಾಸು ನಿರ್ವಹಣೆ ಮಾಡಲು ಮುಖ್ಯ ಲೆಕ್ಕಾಧಿಕಾರಿಗಳನ್ನು ನೇಮಕ ಮಾಡಲಾಗಿದೆಯೇ ; (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

(ಈ) ನೇಮಕ ಮಾಡದಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಶಿವಮೊಗ್ಗ ಜಿಲ್ಲೆಯಲ್ಲಿನ ಪ್ರವಾಸಿ ತಾಣಗಳ ಅಭಿವೃದ್ಧಿ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು)** –

೯೯೯ (೧೨೧೧) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆ ವ್ಯಾಪ್ತಿಗೆ ಒಳಪಡುವ ಪ್ರವಾಸಿ ತಾಣಗಳ ವಿವರ ಒದಗಿಸುವುದು ;

(ಆ) ಕಳೆದ ಎರಡು ವರ್ಷಗಳಲ್ಲಿ ಈ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನವೆಷ್ಟು ; ಖರ್ಚು ಮಾಡಿದ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಪ್ರವಾಸಿ ತಾಣಗಳಲ್ಲಿನ ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಅನುದಾನವನ್ನು ವೆಚ್ಚ ಮಾಡಲಾಗಿದೆ ; (ಕಾಮಗಾರಿವಾರು ವಿವರ ನೀಡುವುದು)

(ಈ) ಪ್ರಸ್ತುತ ಕಾಮಗಾರಿಗಳು ಯಾವ ಹಂತದಲ್ಲಿವೆ ? (ವಿವರ ನೀಡುವುದು)

## ಸ್ಥಳೀಯ ಸಂಸ್ಥೆಗಳಲ್ಲಿನ ಕೆರೆಗಳ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು)** –

೧೦೦೦ (೧೨೧೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಸಂಗ್ರಹಿಸಲಾಗುವ ತೆರಿಗೆಯಲ್ಲಿ ಯಾವ ಯಾವ ರೀತಿ ಕರ ವಿಧಿಸಲಾಗುತ್ತಿದೆ ; (ವಿವರ ನೀಡುವುದು)

(ಆ) ೨೦೧೨-೧೩, ೨೦೧೩-೧೪ ಮತ್ತು ೨೦೧೪-೧೫ನೇ ಸಾಲಿನಲ್ಲಿ ಸಂಗ್ರಹಿಸಲಾದ ವಿವಿಧ ರೀತಿಯ ಕರಗಳ ಒಟ್ಟು ಮೊತ್ತ ಎಷ್ಟು; (ಜಿಲ್ಲಾವಾರು ಪಂಚಾಯಿತಿಗಳವಾರು ವಿವರ ನೀಡುವುದು)

(ಇ) ಸಂಗ್ರಹಿಸಲಾದ ಎಲ್ಲಾ ಕರಗಳನ್ನು ವೆಚ್ಚ ಮಾಡುವ ಅಧಿಕಾರ ಮತ್ತು ಜವಾಬ್ದಾರಿ ಯಾರಿಗೆ ಸೇರಿದೆ ; (ವಿವರ ನೀಡುವುದು)

(ಈ) ನಗರ ಸ್ಥಳೀಯ ಸಂಸ್ಥೆಗಳಿಗೂ ಗ್ರಾಮ ಸ್ಥಳೀಯ ಸಂಸ್ಥೆಗಳಲ್ಲಿನ ಕರಗಳಿಗೂ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ತಾರತಮ್ಯ ಪರಿಹರಿಸಲು ಯಾವ ಕ್ರಮ ಕೈಗೊಳ್ಳಲಾಗುವುದು ?

## ಬಾಗಲಕೋಟೆ ಜಿಲ್ಲೆಯಲ್ಲಿ ಭೂಸೇನಾ ನಿಗಮದ ಬಗ್ಗೆ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೦೧ (೭೮೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೪ ವರ್ಷಗಳಿಂದ ಬಾಗಲಕೋಟೆ ಜಿಲ್ಲೆಯಲ್ಲಿ ಭೂಸೇನಾ ನಿಗಮದ ವತಿಯಿಂದ ನಡೆದಿರುವ ಕಾಮಗಾರಿಗಳೆಷ್ಟು ; (ವಿವರ ನೀಡುವುದು)

(ಆ) ಆ ಪೈಕಿ ಪೂರ್ಣಗೊಂಡಿರುವ ಹಾಗೂ ಬಾಕಿ ಉಳಿದಿರುವ ಕಾಮಗಾರಿಗಳೆಷ್ಟು ;

(ಇ) ಈ ಕಾಮಗಾರಿಗಳಿಗೆ ರೂ. ೧ ಲಕ್ಷಕ್ಕೆ ಎಷ್ಟು ಶೇಕಡವಾರು ಭೂ ಸೇನಾ ನಿಗಮಕ್ಕೆ ಕಟಾವು ಮಾಡಿಕೊಳ್ಳಲಾಗುವುದು ? (ಪೂರ್ಣ ಮಾಹಿತಿ ನೀಡುವುದು)

## ಉಡುಪಿ ಜಿಲ್ಲೆಯಲ್ಲಿ ಆರ್.ಎಂ.ಎಸ್ ಶಿಕ್ಷಣ ಸಂಸ್ಥೆಗಳ ಕಟ್ಟಡ ಕಾಮಗಾರಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೦೨ (೧೨೨೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣದಡಿ ನಡೆಯುತ್ತಿರುವ ಪ್ರೌಢ ಶಾಲೆಗಳಿಗೆ ಮಂಜೂರಾಗಿರುವ ಕಟ್ಟಡಗಳಲ್ಲಿ ಕಾಮಗಾರಿ ಪೂರ್ಣಗೊಂಡವುಗಳು ಯಾವುವು; ಮತ್ತು ಕಾಮಗಾರಿ ಪ್ರಾರಂಭಗೊಂಡು ಪೂರ್ಣಗೊಳ್ಳದ ಕಟ್ಟಡ ಕಾಮಗಾರಿಗಳು ಯಾವುವು; ಮತ್ತು ಇನ್ನು ಕಾಮಗಾರಿ ಪ್ರಾರಂಭಗೊಳ್ಳದ ಕಟ್ಟಡಗಳು ಯಾವುವು; (ತಾಲ್ಲೂಕುವಾರು, ಪ್ರೌಢಶಾಲಾವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣದಡಿ ನಡೆಯುತ್ತಿರುವ ಪ್ರೌಢ ಶಾಲೆಗಳಿಗೆ ಮಂಜೂರಾಗಿರುವ ಕಟ್ಟಡ ಕಾಮಗಾರಿಗಳಿಗೆ ಮಂಜೂರಾಗಿರುವ ಅಂದಾಜು ಮೊತ್ತವೆಷ್ಟು; ಮತ್ತು ಈ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರು ಮತ್ತು ಈ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ವಿವಿಧ ದರ್ಜೆಯ ಅಭಿಯಂತರರುಗಳು ಯಾರು; (ಪ್ರೌಢ ಶಾಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿನ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣದಡಿ ನಡೆಯುತ್ತಿರುವ ಪ್ರೌಢ ಶಾಲೆಗಳಿಗೆ ಮಂಜೂರಾದ ಕಟ್ಟಡಗಳ ಕಾಮಗಾರಿಯನ್ನು ಯಾವ ಕಾಲಮಿತಿಯೊಂದಿಗೆ ಮುಕ್ತಾಯಗೊಳಿಸಲಾಗುವುದು?

## ಗ್ರಾಮ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸೇವಾ ಖಾಯಂಯಾತಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೦೩ (೧೨೨೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸೇವಾ ಖಾಯಂಯಾತಿ ಆದ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಮತ್ತು ಸೇವಾ ಖಾಯಂಯಾತಿ ಆಗದ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ, ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್‌ಗಳಿಗೆ ಮಂಜೂರಾತಿಯಾದ ಒಟ್ಟು ಹುದ್ದೆಗಳೆಷ್ಟು; ಮತ್ತು ಕೊರತೆ ಇರುವ ಹುದ್ದೆಗಳೆಷ್ಟು; ಮತ್ತು ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್‌ವಾರು ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್‌ಗಳಲ್ಲಿ ದಿನಗೂಲಿ ಮತ್ತು ಗುತ್ತಿಗೆ ಅಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು? (ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್‌ವಾರು ಹೆಸರು, ವಿಳಾಸ, ಹುದ್ದೆಯೊಂದಿಗೆ ವಿವರ ನೀಡುವುದು)

## ರಾಜ್ಯದ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಬಿಸಿಯೂಟ ಸಿಬ್ಬಂದಿಗಳ ವೇತನದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೦೪ (೧೨೧೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಬಿಸಿಯೂಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆಯವರು ಮತ್ತು ಅಡುಗೆ ಸಹಾಯಕರಿಗೆ ನೀಡುತ್ತಿರುವ ಗೌರವಧನವೆಷ್ಟು;

(ಆ) ಬೆಳಿಗ್ಗೆ ಸುಮಾರು ೧೦ ಗಂಟೆಯಿಂದ ಮಧ್ಯಾಹ್ನ ಮೂರು ಗಂಟೆಯತನಕ ಕಾರ್ಯನಿರ್ವಹಿಸುತ್ತಿರುವ ಅಡುಗೆಯವರು ಮತ್ತು ಅಡುಗೆ ಸಹಾಯಕರಿಗೆ ಅರ್ಧದಿನದ ಕನಿಷ್ಠ ವೇತನವನ್ನು ನೀಡದೆ ಇರಲು ಕಾರಣವೇನು;

(ಇ) ಕೆಲಸಕ್ಕೆ ತಕ್ಕಸಮಾನ ವೇತನ ಸರ್ಕಾರದ ನೀತಿ ಆಗಿರುವುದರಿಂದ ಸೂಕ್ತ ಕನಿಷ್ಠ ವೇತನ ನೀಡುವ ಕುರಿತು ಕ್ರಮಕೈಗೊಳ್ಳಲಾಗುವುದೆ; ಇಲ್ಲವಾದಲ್ಲಿ ಕಾರಣವೇನು?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ಪ್ರಾಥಮಿಕ ಶಾಲೆಗಳಲ್ಲಿ ೧ನೇ ತರಗತಿಗೆ ದಾಖಲಾದ ವಿದ್ಯಾರ್ಥಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೦೫ (೧೨೧೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಸರ್ಕಾರಿ ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ

ಶಾಲೆಗಳಲ್ಲಿ ೧ನೇ ತರಗತಿಗೆ ದಾಖಲುಗೊಂಡ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ತಾಲ್ಲೂಕವಾರು, ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿವಾರು, ಶಾಲಾವಾರು ವಿವರ ನೀಡುವುದು)

(ಆ) ಸರ್ಕಾರದ ನೀತಿಗಳ ಮತ್ತು ನ್ಯಾಯಾಲಯದ ಆದೇಶಗಳು ಸರ್ಕಾರಿ ಶಾಲೆಗಳನ್ನು ಮುಚ್ಚಿಸುವ ಪರಿಸ್ಥಿತಿಗೆ ತಂದಿರುವುದು ಸರ್ಕಾರ ಗಮನಿಸಿದೆಯೇ; ಗಮನಿಸಿದಲ್ಲಿ, ಪರಿಹಾರ ಕಂಡುಕೊಳ್ಳಲಾಗುವುದೆ; ಇಲ್ಲವಾದಲ್ಲಿ, ಸರ್ಕಾರ ನೀತಿ ವಿದ್ಯಾರ್ಥಿಗಳ ಹಿತಾಸಕ್ತಿಗೆ ವಿರುದ್ಧವಾಗಿದೆ ಎನ್ನುವ ಅಂಶವನ್ನಾದರೂ ಸರ್ಕಾರ ಗಮನಿಸಿದೆಯೇ?

## ಗ್ರಾಮ ಪಂಚಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸೇವಾ ಖಾಯಂಯಾತಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೦೬ (೧೨೧೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಪಂಚಾಯತ್ ರಾಜ್ ಅಧಿನಿಯಮದಡಿ ನೇಮಕಗೊಂಡ ಸಿಬ್ಬಂದಿಗಳ ಸೇವಾ ಖಾಯಂಯಾತಿಯನ್ನು ಸರ್ಕಾರದ ಸುತ್ತೋಲೆಗಳು ನಿಯಂತ್ರಿಸುವುದು ಸರಿಯೇ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಗ್ರಾಮ ಪಂಚಾಯತ್‌ಗಳಲ್ಲಿ ಸುಮಾರು ೧೦-೧೨ ವರ್ಷಗಳಿಂದ ಕನಿಷ್ಠ ವೇತನದಲ್ಲಿ ವಿದ್ಯಾರ್ಹತೆಯನ್ನು ಹೊಂದಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಸೇವಾ ಖಾಯಂಯಾತಿ ಮಾಡದಿರಲು ಕಾರಣವೇನು;

(ಇ) ಗ್ರಾಮ ಪಂಚಾಯತ್‌ಗಳಲ್ಲಿ ಹೆಚ್ಚುವರಿಯಾಗಿ ಬಿಲ್ ಕಲೆಕ್ಟರ್ ಪಂಪ್ ಆಪರೇಟರ್‌ಗಳನ್ನು ನೇಮಕ ಮಾಡಿಕೊಂಡಂತೆ ಹೆಚ್ಚುವರಿಯಾಗಿ ಗುಮಾಸ್ತ ಕಂ ಗಣಕಯಂತ್ರ ನಿರ್ವಾಹಕ ಹುದ್ದೆಗೆ ನೇಮಕಾತಿ ಮಾಡಿಕೊಳ್ಳಲು ಅವಕಾಶವಿದೆಯೇ; ಅವಕಾಶವಿಲ್ಲದಿದ್ದಲ್ಲಿ ೧೦ ವರ್ಷ ಸೇವಾ ಖಾಯಂಯಾತಿಯ ಭರವಸೆಯೊಂದಿಗೆ ಶೋಷಿಸಿದ ಅಧಿಕಾರಿಗಳನ್ನು ಸರ್ಕಾರ ಹೊಣೆ ಮಾಡಲಾಗುವುದೇ?

## ಶ್ರೀ ಕನಕ ದುರ್ಗಮ್ಮ ದೇವಸ್ಥಾನ ಕುರಿತು

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೦೭ (೧೨೪೨) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ನಗರದ ಶ್ರೀ ಕನಕ ದುರ್ಗಮ್ಮ ದೇವಸ್ಥಾನ ಸುಧಾರಣೆ ನವೀಕರಣ ಮತ್ತು ಯಾತ್ರಿ ನಿವಾಸ ಕಾಮಗಾರಿಗಳಿಗೆ ಸರ್ಕಾರದಿಂದ ಎಷ್ಟು ಅನುದಾನ ಮಂಜೂರಾಗಿದೆ; ಹಾಗೂ ಯಾವಾಗ;

(ಆ) ಈವರೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಅದರಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಇ) ಬಾಕಿ ಇರುವ ಅನುದಾನ ಬಿಡುಗಡೆಗೆ ಶೀಘ್ರ ಕ್ರಮ ಕೈಗೊಳ್ಳಲಾಗುವುದೆ?

## ನೂತನವಾಗಿ ಅಸ್ತಿತ್ವಕ್ಕೆ ಬಂದ ಗ್ರಾಮ ಪಂಚಾಯತಿಗಳ ಬಗ್ಗೆ

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೦೮ (೧೨೪೧) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಗ್ರಾಮ ಪಂಚಾಯತ್‌ಗಳೆಷ್ಟು;

(ಆ) ಇವುಗಳಲ್ಲಿ ಹೊಸದಾಗಿ ಅಸ್ತಿತ್ವಕ್ಕೆ ಬಂದ ಗ್ರಾಮ ಪಂಚಾಯತ್‌ಗಳೆಷ್ಟು; ಅವು ಯಾವುವು;

(ಇ) ನೂತನವಾಗಿ ಅಸ್ತಿತ್ವಕ್ಕೆ ಬಂದಿರುವ ಗ್ರಾಮ ಪಂಚಾಯತ್‌ಗಳಿಗೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ; ಎಲ್ಲೆಲ್ಲಿ ಕಲ್ಪಿಸಲಾಗಿದೆ ವಿವರಿಸುವುದು;

(ಈ) ಸುಗಮ ಆಡಳಿತ ದೃಷ್ಟಿಯಿಂದ ನೂತನವಾಗಿ ಅಸ್ತಿತ್ವಕ್ಕೆ ಬಂದಿರುವ ಗ್ರಾಮ ಪಂಚಾಯತ್‌ಗಳಿಗೆ ಶೀಘ್ರವಾಗಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮಕೈಗೊಳ್ಳುವುದೇ?

## ಬಳ್ಳಾರಿಗೆ ಮಹಾತ್ಮಾಗಾಂಧಿ ರಾಷ್ಟ್ರೀಯ ಉದ್ಯೋಗ ಯೋಜನೆಯಡಿ ಬಿಡುಗಡೆಗೊಂಡ ಅನುದಾನದ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೦೯ (೧೨೨೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಬಳ್ಳಾರಿ ಜಿಲ್ಲೆಗೆ ಮಹಾತ್ಮಾಗಾಂಧಿ ರಾಷ್ಟ್ರೀಯ ಉದ್ಯೋಗ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; (ಕಾಮಗಾರಿವಾರು, ಮೊತ್ತದ ವರ್ಷವಾರು ವಿವರ ನೀಡುವುದು)

(ಇ) ಇದರಲ್ಲಿ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ; ಬಾಕಿ ಇರುವ ಕಾಮಗಾರಿಗಳು ಯಾವುವು; ಯಾವ ಹಂತದಲ್ಲಿವೆ, ವಿಳಂಬಕ್ಕೆ ಕಾರಣಗಳೇನು: ಖರ್ಚಾಗದೇ ಉಳಿದಿರುವ ಮೊತ್ತವೆಷ್ಟು?

## ಹಂಪಿ ಪ್ರವಾಸಿಗರಿಗೆ ಯಾತ್ರಿನಿವಾಸ ನಿರ್ಮಾಣ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೧೦ (೧೨೨೩) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಹಂಪಿಗೆ ಬರುವ ಯಾತ್ರಿಕರಿಗೆ ಅನೂಕೂಲ ಮಾಡಿಕೊಡಲು ಹಂಪಿ ಸಮೀಪ ಇರುವ ಕಮಲಾಪುರ ಮತ್ತು ಹೊಸಪೇಟೆಯಲ್ಲಿ ಯಾತ್ರಿ ನಿವಾಸಿಗಳ ಅವಶ್ಯಕತೆಯಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ

(ಆ) ಈ ಬಗ್ಗೆ ಈವರೆಗೆ ಏನಾದರೂ ಕ್ರಮ ಕೈಗೊಂಡಿದೆಯೇ? (ಈ ಬಗ್ಗೆ ವಿವರ ಒದಗಿಸುವುದು)

## ಬಳ್ಳಾರಿನಗರ ಕೌಲಬಜಾರನಲ್ಲಿ Railway Overbridge ಗೆ Approch Road ನಿರ್ಮಾಣ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೧೧ (೧೨೪೦) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ನಗರದ ಕೌಲಬಜಾರದಲ್ಲಿ ಎರಡು ಕಡೆ Railway Crossing Over bridge ನಿರ್ಮಾಣ ಕಾಮಗಾರಿ ನಡೆಯುತ್ತಿದ್ದು Over bridge ನಿರ್ಮಾಣ ಕೆಲಸ ಮುಕ್ತಾಯ ಹಂತದಲ್ಲಿದ್ದು ಈವರೆಗೆ ಈ ಎರಡೂ ಸ್ಥಳಗಳಲ್ಲಿ Approch Road ನಿರ್ಮಾಣ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, Approch Road ನಿರ್ಮಾಣಕ್ಕೆ ಈ ವರೆಗೆ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ;

(ಇ) ಈ ಕಾಮಗಾರಿಯನ್ನು ಎಂದು ಪ್ರಾರಂಭಿಸಲಾಗುವುದು;

(ಈ) ಈ Approch Road ನಿರ್ಮಾಣ ಕಾಮಗಾರಿಯನ್ನು ತ್ವರಿತವಾಗಿ ಪ್ರಾರಂಭಿಸಿ ಶೀಘ್ರದಲ್ಲಿ ಸಾರ್ವಜನಿಕರಿಗೆ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗುವುದೇ?

## ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳ ಆಶ್ರಯ ಯೋಜನೆ ಮನೆಗಳ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೧೨ (೧೨೨೮) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಸತಿ ಇಲಾಖೆಯಿಂದ ಕಳೆದ ಎರಡು ವರ್ಷಗಳಲ್ಲಿ ವಿವಿಧ ಆಶ್ರಯ ಹಾಗೂ ಇತರೆ ಯೋಜನೆಗಳಡಿಯಲ್ಲಿ ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಮಂಜೂರಾಗಿರುವ ಮನೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಹಾಗೂ ಯೋಜನೆವಾರು ವಿವರ ಒದಗಿಸುವುದು)

(ಆ) ಮಂಜೂರಾಗಿರುವ ಮನೆಗಳಲ್ಲಿ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿರುವ ಮನೆಗಳ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸುವುದು)

(ಇ) ಮಂಜೂರಾಗಿ ಕಾಮಗಾರಿ ಆರಂಭಗೊಳ್ಳದ ಮನೆಗಳ ಸಂಖ್ಯೆ ಎಷ್ಟು; ವಿವರ ಹಾಗೂ ಕಾರಣ ತಿಳಿಸುವುದು?

## ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳಲ್ಲಿ ವಸತಿ ಸಮಸ್ಯೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೧೩ (೧೨೨೯) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಜನರು ವಸತಿ ಭಾಗ್ಯ ಇಲ್ಲದೆ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳೆದ ಎರಡು ವರ್ಷಗಳಲ್ಲಿ ವಿವಿಧ ಆಶ್ರಯ ಯೋಜನೆಗಳಡಿ ಎರಡು ಜಿಲ್ಲೆಗಳಿಗೆ ಬಿಡುಗಡೆಯಾಗಿರುವ ಮನೆಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಎರಡು ಜಿಲ್ಲೆಗಳಲ್ಲಿ ವಸತಿ ಸಮಸ್ಯೆ ನೀಗಿಸಲು ಹೆಚ್ಚುವರಿಯಾಗಿ ಮನೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ? (ಮಾಹಿತಿ ಒದಗಿಸುವುದು)

## ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳ ಮಹಿಳಾ ಜೀವನದ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೧೪ (೧೨೩೦) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಿಗೆ ಕಳೆದ ಎರಡು ವರ್ಷಗಳಲ್ಲಿ ಮಂಜೂರಾಗಿರುವ ಮಹಿಳಾ ಭವನಗಳು ಎಷ್ಟು;

(ಆ) ಈ ಭವನಗಳಲ್ಲಿ ನಿರ್ಮಾಣಗೊಂಡಿರುವ ಮಹಿಳಾ ಭವನಗಳ ಸಂಖ್ಯೆ ಎಷ್ಟು; ಇದಕ್ಕೆ ಬಳಕೆಯಾದ ಅನುದಾನ ಎಷ್ಟು? (ಮಾಹಿತಿ ಒದಗಿಸುವುದು)

## ಗ್ರಾಮ ಪಂಚಾಯಿತಿ ಸದಸ್ಯರ ಗೌರವ ಧನ ಬಾಕಿ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೧೫ (೧೨೩೧) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆಯಲ್ಲಿ ಕಳೆದ ಒಂದು ವರ್ಷಗಳಿಗೂ ಹೆಚ್ಚಿನ ಅವಧಿಯಿಂದ ಗ್ರಾಮ ಪಂಚಾಯಿತಿ ಸದಸ್ಯರಿಗೆ, ಗೌರವ ಧನ ಬಾಕಿ ಉಳಿಸಿಕೊಂಡಿರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಇದೀಗ ಚುನಾವಣೆ ಮುಗಿದು ಹೊಸ ಸದಸ್ಯರು ಆಯ್ಕೆಗೊಂಡ ಹಿನ್ನೆಲೆಯಲ್ಲಿ ಹಳೆ ಸದಸ್ಯರಿಗೆ ಬಾಕಿ ಗೌರವ ಧನ ಪಾವತಿಸಲಾಗುತ್ತದೆಯೇ;

(ಇ) ಗ್ರಾಮ ಪಂಚಾಯಿತಿ ಸದಸ್ಯರಿಗೆ ಬಾಕಿ ಗೌರವ ಧನ ಪಾವತಿಸಲು ಕೈಗೊಂಡ ಕ್ರಮವೇನು? (ಮಾಹಿತಿ ಒದಗಿಸುವುದು)

## ಮಹಿಳಾ ಸ್ವಾವಲಂಭಿ ಕಾರ್ಯಕ್ರಮಗಳ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೧೬ (೧೨೩೨) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಮಹಿಳೆಯರನ್ನು ಸ್ವಾವಲಂಬಿಯನ್ನಾಗಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಕಳೆದ ಎರಡು ವರ್ಷಗಳಲ್ಲಿ ಅನುಷ್ಠಾನಗೊಂಡಿರುವ ಕಾರ್ಯಕ್ರಮಗಳ ವಿವರ ಒದಗಿಸುವುದು;

(ಆ) ಈ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗಿದೆಯೇ; ಅನುಷ್ಠಾನಗೊಳಿಸಿದ್ದಲ್ಲಿ ಇದಕ್ಕೆ ಬಳಸಲಾದ ಅನುದಾನ ಎಷ್ಟು; ಹಾಗೂ ಇದರ ಪ್ರಯೋಜನ ಪಡೆದಿರುವ ಫಲಾನುಭವಿಗಳು ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಸಂಶೋಧನಾ ವಿದ್ಯಾರ್ಥಿಗಳ ಮೇಲೆ ನಡೆಯುತ್ತಿರುವ ದೌರ್ಜನ್ಯದ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೧೭ (೧೨೩೩) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ವಿಶ್ವವಿದ್ಯಾನಿಲಯಗಳಲ್ಲಿ ಸಂಶೋಧನಾ ವಿದ್ಯಾರ್ಥಿಗಳ ಮೇಲೆ ನಡೆಯುತ್ತಿರುವ ದೌರ್ಜನ್ಯಗಳು ಸರ್ಕಾರದ ಗಮನಕ್ಕೆ ಬಂದಿವೆಯೇ;

(ಆ) ಬಂದಿದ್ದಲ್ಲಿ, ೨೦೧೪–೧೫ನೇ ಸಾಲಿನಲ್ಲಿ ಎಷ್ಟು ದೌರ್ಜನ್ಯ ಪ್ರಕರಣಗಳು ದಾಖಲಾಗಿವೆ;

(ಇ) ಈವರೆಗೆ ಎಷ್ಟು ಜನ ವಿಶ್ವವಿದ್ಯಾನಿಲಯದ ಉಪನ್ಯಾಸಕರಿಗೆ ಶಿಕ್ಷೆಯಾಗಿದೆ;

(ಈ) ಸಂಶೋಧನಾ ವಿದ್ಯಾರ್ಥಿಗಳ ಮೇಲಿನ ದೌರ್ಜನ್ಯ ತಡೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಗ್ರಾಮ ಪಂಚಾಯಿತಿಗಳಿಗೆ ನೂತನ ಸದಸ್ಯರು ಆಯ್ಕೆಯಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೧೮ (೧೨೩೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೂತನವಾಗಿ ಆಯ್ಕೆಯಾದ ಗ್ರಾಮ ಪಂಚಾಯಿತಿ ಸದಸ್ಯರಿಗೆ ಸರ್ಕಾರವು ಕೇಂದ್ರ ಹಾಗೂ ರಾಜ್ಯ ಸರ್ಕಾರದ ಮಹತ್ವದ ಯೋಜನೆಗಳ ಕುರಿತು ಅನುಷ್ಠಾನಗೊಳಿಸುವ ಬಗ್ಗೆ ತರಬೇತಿ ನೀಡುವ ವಿಚಾರ ಸರ್ಕಾರದ ಮುಂದಿದೆಯೇ;

(ಆ) ಇದ್ದಲ್ಲಿ, ತರಬೇತಿಯನ್ನು ಯಾವ ಕಾಲಮಿತಿಯಲ್ಲಿ ನೀಡಲಾಗುವುದು;

(ಇ) ಮಹಿಳಾ ಸದಸ್ಯರಿಗೆ ಪ್ರತ್ಯೇಕವಾಗಿ ತರಬೇತಿ ನೀಡಿ ಎಲ್ಲಾ ಹಂತದಲ್ಲಿ ಮಹಿಳೆಯರು ಸಬಲರಾಗುವ ಹಾಗೆ ಯಾವ ರೀತಿ ಕ್ರಮ ಕೈಗೊಳ್ಳಲಾಗುವುದು?

## ಬೆಂಗಳೂರು ನಗರದಲ್ಲಿರುವ ಖಾಸಗಿ ಪ್ರೌಢಶಾಲೆಗಳ ಬಗ್ಗೆ

**ಶ್ರೀ ಎ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೧೦೧೯ (೧೨೪೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ಖಾಸಗಿ ಪ್ರೌಢಶಾಲೆಗಳು ಮತ್ತು ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಇವುಗಳಲ್ಲಿ ಸರ್ಕಾರದ ಅನುಮೋದನೆ ಪಡೆಯದ ಸಂಸ್ಥೆಗಳೆಷ್ಟು; (ಹೆಸರು, ಸ್ಥಳ, ಮೊದಲಾದ ವಿವರಗಳನ್ನು ಕೊಡುವುದು)

(ಇ) ಇಂತಹ ಕೆಲವು ವಿದ್ಯಾ ಸಂಸ್ಥೆಗಳಲ್ಲಿ ಅನಧಿಕೃತವಾಗಿ ವಸತಿ ನಿಲಯಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಂಬಂಧಿತ ಸರ್ಕಾರದ ಇಲಾಖೆಗಳಿಂದ ಅನುಮತಿ ಪಡೆಯದೆ ನಡೆಯುತ್ತಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು;

(ಈ) ಅನಧಿಕೃತ ವಸತಿ ನಿಲಯಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕಠಿಣ ಕ್ರಮಗಳೇನು?

## ಮೈಸೂರು ಜಿಲ್ಲೆ, ಇಲವಾಲ ತಾಲ್ಲೂಕಿನ ಗ್ರಾಮಗಳಲ್ಲಿನ ಸರ್ವೆಯಲ್ಲಿ ಅಕ್ರಮ ಕುರಿತು

**ಶ್ರೀ ಬಿ.ಜೆ.ಪುಟ್ಟಸ್ವಾಮಿ. (ವಿಧಾನಸಭೆಯಿಂದ ಚುನಾಯಿತರಾದವರು)** –

೧೦೨೦ (೧೫೦೮) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆ, ಇಲವಾಲ ತಾಲ್ಲೂಕಿನ ಮೂರು ಗ್ರಾಮಗಳಲ್ಲಿನ ಹಲವು ಸರ್ವೆ ನಂ. ಗಳಲ್ಲಿ ೨೦೦೮–೨೦೦೯ರ ಅವಧಿಯಲ್ಲಿ ಗೃಹ ಮಂಡಳಿ ಖರೀದಿಸಿರುವ ಜಮೀನಿನಲ್ಲಿ ಅಕ್ರಮ ನಡೆದಿರುವುದನ್ನು ಭಾರತ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು ತಮ್ಮ ವರದಿಯಲ್ಲಿ ತಿಳಿಸಿರುವುದು ನಿಜವೇ;

(ಆ) ಹಾಗಿದ್ದರೆ, ಸಿ.ಎ.ಜಿ., ವರದಿಯಂತೆ ಎಷ್ಟು ಹಣ ದುರುಪಯೋಗವಾಗಿದೆ; ಅವ್ಯವಹಾರದ ವಿವರಗಳೇನು;

(ಇ) ಗೃಹ ನಿರ್ಮಾಣ ಮಂಡಳಿ ವಸತಿ ರಹಿತ ಮಧ್ಯಮ ಮತ್ತು ಬಡವರಿಗೆ ಸಾಧ್ಯವಾದಷ್ಟು ಕಡಿಮೆ ದರದಲ್ಲಿ ನಿವೇಶನ ಮತ್ತು ಮನೆ ನಿರ್ಮಿಸಲು ಸ್ಥಾಪಿಸಿರುವುದು ನಿಜವಲ್ಲವೆ;

(ಈ) ಹಾಗಿದ್ದರೆ, ಮಂಡಳಿಯ ಉದ್ದೇಶಕ್ಕೆ ವಿರುದ್ಧವಾಗಿ ಬಡವರಿಗೆ ಅವ್ಯವಹಾರದಿಂದ ಹೊರೆಯಾಗುತ್ತಿರುವುದು ನಿಜವಲ್ಲವೇ;

(ಉ) ಅಂತಹ ನಡೆದಿರುವ ಅವ್ಯವಹಾರಗಳ ಬಗ್ಗೆ ಸರ್ಕಾರ ಸಿ.ಎ.ಜಿ. ವರದಿಯನ್ನು ಆದರಿಸಿ ತೆಗೆದುಕೊಂಡಿರುವ ಕ್ರಮಗಳೇನು ? (ಮೇಲಿನ ಎಲ್ಲಾ ವಿಷಯಗಳ ಪೂರ್ಣ ವಿವರ ಒದಗಿಸುವುದು)

## ಭಾರತ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರ ವರದಿ ಕುರಿತು

**ಶ್ರೀ ಬಿ.ಜೆ.ಪುಟ್ಟಸ್ವಾಮಿ. (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೨೧ (೧೫೦೯) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭಾರತ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು ತನ್ನ ವರದಿ ಮಾರ್ಚ್ ೨೦೧೩ಕ್ಕೆ ಕೊನೆಗೊಂಡಂತೆ ಜಮೀನು ಖರೀದಿ, ನಿವೇಶನ ಹಂಚಿಕೆ, ಮನೆಗಳ ಹಂಚಿಕೆ, ಮಧ್ಯವರ್ತಿಗಳ ಭಾಗವಹಿಸುವಿಕೆ ಇತ್ಯಾದಿ ಅನೇಕ ವಿಷಯಗಳಲ್ಲಿ ಅವ್ಯವಹಾರಗಳನ್ನು ತಿಳಿಸಿರುವುದು ನಿಜವೇ;

(ಆ) ಹಾಗಿದ್ದರೆ, ಇದುವರೆವಿಗೆ ಸರ್ಕಾರ ತಪ್ಪಿತಸ್ಥರ ವಿರುದ್ಧ ತೆಗೆದುಕೊಂಡ ಕ್ರಮಗಳೇನು ? (ಅವ್ಯವಹಾರಗಳ ಬಗ್ಗೆ ಮತ್ತು ಕೈಕೊಂಡ ಕ್ರಮದ ಬಗ್ಗೆ ಪೂರ್ಣ ವಿವರ ನೀಡುವುದು)

## ಸ್ತ್ರೀಶಕ್ತಿ ಗುಂಪುಗಳಿಗೆ ಮತ್ತು ನಿರುದ್ಯೋಗಿ ಮಹಿಳೆಯರ ಸ್ವಾವಲಂಬನೆಗಾಗಿ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೨೨ (೧೫೩೧) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸ್ತ್ರೀಶಕ್ತಿ ಗುಂಪುಗಳಿಗೆ ಮತ್ತು ನಿರುದ್ಯೋಗಿ ಮಹಿಳೆಯರಿಗೆ ಸ್ವಾವಲಂಬನೆ ಜೀವನಕ್ಕಾಗಿ ಸರ್ಕಾರ ಹಲವಾರು ನೆರವಿನ ಯೋಜನೆಗಳನ್ನು ರೂಪಿಸಿದೆಯೇ;

(ಆ) ಹಾಗಿದ್ದರೆ, ಅಂತಹ ಯೋಜನೆಗಳು ಯಾವುವು; ಅವುಗಳನ್ನು ಪಡೆದುಕೊಳ್ಳುವ ವಿಧಾನ ಏನು; (ವಿವರ ನೀಡುವುದು)

(ಇ) ಮಹಿಳೆಯ ಸಬಲೀಕರಣಕ್ಕೆ ಇತರೆ ಇಲಾಖೆಯಲ್ಲಿಯೂ ಸಹ ಮಹಿಳೆಯರಿಗೆ ಅನುಕೂಲಕರ ಯೋಜನೆಗಳು ಇವೆಯೇ; ಇದ್ದಲ್ಲಿ ಅವುಗಳ ವಿವರವನ್ನು ಒದಗಿಸುವುದು?

## ಮಂಗಳೂರು ವಿಮಾನ ನಿಲ್ದಾಣ ವಿಸ್ತರಿಸುವುದು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೦೨೩ (೧೫೧೦) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ವಿಮಾನ ನಿಲ್ದಾಣದ ರನ್ ವೇಯನ್ನು ಇನ್ನೂ ೩೦೦ ಮೀಟರ್‌ಗಳಷ್ಟು ವಿಸ್ತರಿಸಲು ಅವಶ್ಯಕ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲು ಕ್ರಮ ವಹಿಸಲಾಗಿದೆಯೇ ;

(ಆ) ಕ್ರಮ ವಹಿಸಿದ್ದಲ್ಲಿ ಈವರೆವಿಗೂ ಎಷ್ಟು ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ;

(ಇ) ಯಾವ ಕಾಲಮಿತಿಯಲ್ಲಿ ಅವಶ್ಯಕ ಜಮೀನನ್ನು ವಿಮಾನ ನಿಲ್ದಾಣ ಪ್ರಾಧಿಕಾರದ ವಶಕ್ಕೆ ನೀಡಲಾಗುವುದು ?

## ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಶಾಲಾಭಿವೃದ್ಧಿ ಮತ್ತು ಉಸ್ತುವಾರಿ ಸಮಿತಿಯನ್ನು ರಚಿಸಿರುವ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೦೨೪ (೧೫೧೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಶಾಲಾಭಿವೃದ್ಧಿ ಮತ್ತು ಉಸ್ತುವಾರಿ ಸಮಿತಿ ರಚಿಸಿರುವ ಮುಖ್ಯ ಉದ್ದೇಶವೇನು ;

(ಆ) ಶಾಲಾಭಿವೃದ್ಧಿ ಮತ್ತು ಉಸ್ತುವಾರಿ ಸಮಿತಿಗಳು ಸರಿಯಾಗಿ ಕಾರ್ಯ ನಿರ್ವಹಿಸುತ್ತಿವೆಯೇ;

(ಇ) ಶಾಲಾಭಿವೃದ್ಧಿ ಮತ್ತು ಉಸ್ತುವಾರಿ ಸಮಿತಿಗಳ ಪಾತ್ರವೇನು;

(ಈ) ಈ ಸಮಿತಿಗಳಿಗೆ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆಯ ಉಸ್ತುವಾರಿಯ ಜವಾಬ್ದಾರಿ ನೀಡಲಾಗಿದೆಯೇ;

(ಉ) ಈ ಸಮಿತಿಯ ಸದಸ್ಯರಿಗೆ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆಯ ತರಬೇತಿ ನೀಡಲಾಗಿದೆಯೇ;

(ಊ) ಹಾಗಾದರೆ, ಎಷ್ಟು ಸದಸ್ಯರಿಗೆ ತರಬೇತಿ ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಶಾಲಾ ಪಠ್ಯ ಪುಸ್ತಕಗಳಲ್ಲಿನ ತಪ್ಪುಗಳು ಹಾಗೂ ವಿತರಣೆಯ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೦೨೫ (೧೫೧೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿ ವರ್ಷವೂ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಪುಸ್ತಕಗಳಲ್ಲಿನ ತಪ್ಪುಗಳು ಕಂಡು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದಕ್ಕೆ ಕಾರಣಗಳೇನು ಸರಿಪಡಿಸಲು ಏನು ಕ್ರಮಗಳನ್ನು ಕೈಗೊಳ್ಳಲಾಗಿದೆ;

(ಇ) ಪಠ್ಯ ಪುಸ್ತಕಗಳಲ್ಲಿನ ದೋಷಯುಕ್ತ ಪಾಠಗಳನ್ನು ಬರೆಯುವುದು, ಅದನ್ನು ಸಮರ್ಪಕವಾಗಿ ಸಂಪಾದನೆ ಮಾಡದೇ ಪ್ರಕಟಣೆಗೆ ನೀಡುವವರ ವಿರುದ್ಧ ಸರ್ಕಾರ ಏನಾದರೂ ಶಿಸ್ತು ಕ್ರಮ ಕೈಗೊಂಡಿದೆಯೇ ;

(ಈ) ಪಠ್ಯ ಪುಸ್ತಕಗಳ ವಿತರಣೆಯಲ್ಲಿ ಪ್ರತಿ ವರ್ಷ ವಿಳಂಭವಾಗುತ್ತಿದ್ದು ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು?

## ಶಾಲೆಗಳಲ್ಲಿ ಮಕ್ಕಳ ಮೇಲಿನ ಲೈಗಿಂಕ ದೌರ್ಜನ್ಯ ಪ್ರಕರಣಗಳ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೦೨೬ (೧೫೧೩) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲೆಗಳಲ್ಲಿ ಮಕ್ಕಳ ಮೇಲೆ ಲೈಗಿಂಕ ದೌರ್ಜನ್ಯ ಪ್ರಕರಣಗಳು ವರದಿಯಾದ ಹಿನ್ನಲೆಯಲ್ಲಿ ಪ್ರತಿ ಶಾಲೆಯಲ್ಲಿಯೂ ಮಕ್ಕಳ ರಕ್ಷಣಾ ಸಮಿತಿ ಮತ್ತು ಮಕ್ಕಳ ರಕ್ಷಣಾ ನೀತಿ ಜಾರಿಗೆ ತರಲು ಶಿಕ್ಷಣ ಇಲಾಖೆ ನಿರ್ದೇಶನ ನೀಡಿದೆಯೇ ;

(ಆ) ಹಾಗಾದರೆ, ಎಷ್ಟು ಶಾಲೆಗಳು ಮಕ್ಕಳ ರಕ್ಷಣಾ ಸಮಿತಿ ಮತ್ತು ಮಕ್ಕಳ ರಕ್ಷಣಾ ನೀತಿಯನ್ನು ಅನುಸರಿಸುತ್ತಿವೆ;

(ಇ) ಮಕ್ಕಳ ರಕ್ಷಣಾ ಸಮಿತಿ ಮತ್ತು ಮಕ್ಕಳ ರಕ್ಷಣಾ ನೀತಿ ಹೊಂದಿರದ ಶಾಲೆಗಳ ವಿರುದ್ದ ತೆಗೆದುಕೊಂಡ ಕ್ರಮಗಳೇನು;

(ಈ) ಇದನ್ನು ಕಡ್ಡಾಯಗೊಳಿಸುವ ಯೋಜನೆ ಇದೆಯೇ ?

## ವೃತ್ತಿಪರ ಸಂಸ್ಥೆಗಳಲ್ಲಿ ಸೀಟು ಹಂಚಿಕೆಯ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೦೨೭ (೧೫೧೪) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನ ವೃತ್ತಿಪರ ಸಂಸ್ಥೆಗಳಲ್ಲಿ ವೈದ್ಯಕೀಯ, ದಂತ ವೈದ್ಯಕೀಯ,ತಾಂತ್ರಿಕ ಹಾಗೂ ಇತರ ವೃತ್ತಿ ಶಿಕ್ಷಣ ಸೀಟುಗಳ ಹಂಚಿಕೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರ ನೀಡುವುದು;

(ಆ) ಸಿ.ಇ.ಟಿ., ಮೂಲಕ ಹಂಚಲಾಗುತ್ತಿರುವ ವಿವಿದ ವೃತ್ತಿಪರ ಕೋರ್ಸುಗಳಿಗೆ ಸರ್ಕಾರ ನಿಗಧಿಪಡಿಸಿರುವ ಶುಲ್ಕವೆಷ್ಟು; (ಖಾಸಗಿ, ಅನುದಾನಿತ, ಸರ್ಕಾರಿ ಕಾಲೇಜುಗಳನ್ನೊಳಗೊಂಡಂತೆ ವಿವರ ನೀಡುವುದು)

(ಇ) ಕಳೆದ ವರ್ಷಕ್ಕೆ ಹೋಲಿಸಿದಲ್ಲಿ ಈ ಭಾರಿಯು ಶುಲ್ಕದ ಹೆಚ್ಚಳದಲ್ಲಿ ಬಡ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಕುರಿತಾಗಿ ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಅನುದಾನಿತ ಶಾಲಾ/ಕಾಲೇಜುಗಳ ಆಡಳಿತ ಮಂಡಳಿಗಳಲ್ಲಿನ ವ್ಯಾಜ್ಯ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೦೨೮ (೧೫೧೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಅನುದಾನಿತ ಶಾಲಾ ಕಾಲೇಜುಗಳ ಆಡಳಿತ ಮಂಡಳಿಗಳಲ್ಲಿ ವ್ಯಾಜ್ಯ ಉಂಟಾದ ಕಾರಣಕ್ಕೆ ಸಂಬಳ ತಡೆಹಿಡಿರುವ ಪ್ರಕರಣಗಳು ಎಷ್ಟು;

(ಆ) ಆಡಳಿತ ಮಂಡಳಿಯಲ್ಲಿ ವ್ಯಾಜ್ಯ ಉಂಟಾಗಿ PTR ಸಿಗದೇ ಮಾನ್ಯತೆ ನವೀಕರಣ ಆಗದೆ ಸಮಸ್ಯೆ ಉಂಟಾಗಿ ಸಂಬಳ ತಡೆಹಿಡಿದಿರುವ ಶಾಲಾ, ಕಾಲೇಜುಗಳು ಯಾವುವು? (ಪ್ರತಿಯೊಂದು ಶಾಲಾ, ಕಾಲೇಜು ಹಾಗೂ ಶಿಕ್ಷಕರ ವಿವರ ನೀಡುವುದು )

## ಶಿಕ್ಷಕರ ಯೋಜನಾ ಬಾಬತ್ತಿನಿಂದ ಯೋಜನೇತರ ಬಾಬತ್ತಿಗೆ ಪಾವತಿಸುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೦೨೯ (೧೫೧೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಹಾಗೂ ಅನುದಾನಿತ, ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಶಾಲಾ ಕಾಲೇಜುಗಳ ಬೋಧಕ/ಬೋಧಕೇತರ ಸಿಬ್ಬಂದಿಗಳ ಸಂಬಳವನ್ನು ಯೋಜನಾ ಬಾಬತ್ತಿನಿಂದ, ಯೋಜನೇತರ ಬಾಬತ್ತಿಗೆ ಪರಿವರ್ತಿಸಲು ಇರುವ ನಿಯಮ ಏನು ; ಹಾಗೂ ಪ್ರಕ್ರಿಯೆ ಏನು;

(ಆ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ (ಚಿಕ್ಕೋಡಿ) ಶಿಕ್ಷಣಿಕ ಜಿಲ್ಲೆಗಳ ಪ್ರತಿ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಶಾಲಾ ಕಾಲೇಜುಗಳ ಪ್ರತಿಯೊಬ್ಬ ಬೋಧಕ

ಬೋಧಕೇತರರು, ಯೋಜನಾ ಬಾಬತ್ತಿನ ಅಡಿ ಸಂಬಳ ಪಡೆಯುತ್ತಿರುವವರು ಎಷ್ಟು; ಎಷ್ಟು ವರ್ಷಗಳಿಂದ ಪಡೆಯುತ್ತಿದ್ದಾರೆ? (ಶಾಲಾ, ಕಾಲೇಜುಗಳವಾರು ಪ್ರತಿಯೊಬ್ಬ ಶಿಕ್ಷಕರ ವಿವರ ನೀಡುವುದು)

## ಅನುದಾನಿತ ಶಾಲೆಗಳಲ್ಲಿ ಚಿತ್ರಕಲಾ ಶಿಕ್ಷಕರ ನೇಮಕದ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೦೩೦ (೧೫೧೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೦೨-೦೨-೨೦೦೦ರ ನಂತರ ಅನುದಾನಿತ ಶಾಲೆಗಳಲ್ಲಿ ಚಿತ್ರಕಲಾ ಶಿಕ್ಷಕರನ್ನು ನೇಮಿಸಿಕೊಳ್ಳಲಾಗುತ್ತಿದೆಯೇ ;

(ಆ) ನೇಮಿಸಿಕೊಳ್ಳಲಾಗುತ್ತಿದ್ದರೆ ಸದರಿ ಪ್ರಕ್ರಿಯೆಯು ಯಾವ ಹಂತದಲ್ಲಿದೆ;

(ಇ) ನೇಮಕ ಮಾಡಲಾಗದಿದ್ದಲ್ಲಿ ಅದಕ್ಕೆ ಕಾರಣಗಳೇನು; ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಅನುದಾನಿತ/ಅನುದಾನರಹಿತ ಶಾಲೆಗಳ ಮಾನ್ಯತೆ ನವೀಕರಣ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೦೩೧ (೧೫೨೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನಿತ/ಅನುದಾನರಹಿತ ಶಾಲೆಗಳ ಮಾನ್ಯತೆ ನವೀಕರಣಕ್ಕೆ ಇರುವ ನಿಯಮಗಳೇನು; ಎಷ್ಟು ವರ್ಷಗಳಿಗೊಮ್ಮೆ ಮಾನ್ಯತೆ ನವೀಕರಣ ಮಾಡಬೇಕಾಗಿದೆ;

(ಆ) ಮಾನ್ಯತೆ ನವೀಕರಣಕ್ಕೆ ನಿಗದಿಪಡಿಸಿರುವ ಅರ್ಜಿಯ ಪ್ರತಿ ನೀಡುವುದು;

(ಇ) ಅರ್ಜಿಯ ಜೊತೆಗೆ ಲಗತ್ತಿಸಬೇಕಾದ ಲಗತ್ತುಗಳ ಮಾಹಿತಿ ನೀಡುವುದರ ಜೊತೆಗೆ ಪ್ರತಿ ವರ್ಷ ಮಾನ್ಯತೆ ನವೀಕರಣಕ್ಕೆ ಎಷ್ಟು ಪುಟಗಳ ಎಷ್ಟು ಸೆಟ್‌ನಲ್ಲಿ (ಪ್ರತಿ) ಮಾನ್ಯತೆ ನವೀಕರಣಕ್ಕೆ ಪ್ರಸ್ತಾವನೆ ಕೊಡಬೇಕಾಗುತ್ತದೆ, ತಿಳಿಸುವುದು;

(ಈ) ಮಾನ್ಯತೆ ನವೀಕರಣಕ್ಕೆ ಅನಗತ್ಯ ದಾಖಲೆಗಳನ್ನು ಪ್ರತಿ ವರ್ಷವೂ ಕೇಳುತ್ತಿರುವುದರ ಹಿನ್ನೆಲೆಯಲ್ಲಿ ಉಂಟಾಗುತ್ತಿರುವ ಸಮಸ್ಯೆ ಅರಿವಿದೆಯೇ;

(ಉ) B.E.O., D.D.P.I., ಕಛೇರಿ ಹಂತದಲ್ಲಿ ಮಾನ್ಯತೆ ನವೀಕರಣ ವಿಷಯದಲ್ಲಿ ನಡೆಯುತ್ತಿರುವ ಸಮಸ್ಯೆ ಮತ್ತು ಭ್ರಷ್ಟ ವ್ಯವಸ್ಥೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

**ರಾಜೀವಗಾಂಧಿ ವಸತಿ ನಿಗಮವು ವಿತರಿಸಿದ ಅನುದಾನದ ಕುರಿತು**

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೧೦೩೨ (೧೫೩೦) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ರಾಜೀವಗಾಂಧಿ ವಸತಿ ನಿಗಮವು " ವಾಜಪೇಯಿ ನಗರ ವಸತಿ ಯೋಜನೆಯಡಿ" ಮನೆ ಕಟ್ಟಿಕೊಳ್ಳಲು ಸಹಾಯ ಅನುದಾನ ನೀಡಲು ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ;

(ಆ) ಈ ಆಯ್ಕೆಯಾದ ಎಲ್ಲಾ ಫಲಾನುಭವಿಗಳಿಗೆ ಸಹಾಯ ಅನುದಾನವನ್ನು ನೀಡಲಾಗಿದೆಯೇ; ಹಾಗಿದ್ದರೆ, ಪ್ರತಿ ಫಲಾನುಭವಿಗೆ ಎಷ್ಟು ಸಹಾಯ ಅನುದಾನ ನೀಡಲಾಗಿದೆ;

(ಇ) ಆಯ್ಕೆಯಾದ ಫಲಾನುಭವಿಗಳಿಗೆ ಸಹಾಯ ಅನುದಾನ ನೀಡಿದ ಚೆಕ್‌ಗಳು ಬೌನ್ಸ್ ಆಗಿದೆ ಎಂದು ಆರೋಪಗಳು ಇರುವುದು ನಿಜವೇ; ಹಾಗಿದ್ದಲ್ಲಿ ಇದಕ್ಕೆ ಕಾರಣರ್ಯಾರು ಮತ್ತು ಅಂತಹವರ ಮೇಲೆ ಕೈಗೊಂಡಿರುವ ಕ್ರಮ ಏನು?

## ರಾಜ್ಯದ ಖಾಸಗಿ ಹಾಗೂ ಸರ್ಕಾರಿ ಪದವಿ ಕಾಲೇಜುಗಳಲ್ಲಿನ ನೇಮಕಾತಿ ಕುರಿತು

**ಶ್ರೀ ಎಸ್.ವ್ಹಿ ಸಂಕನೂರ (ಪದವೀಧರರ ಕ್ಷೇತ್ರ) –**

೧೦೩೩ (೧೫೨೨) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ನಿವೃತ್ತಿ, ನಿಧನ ಹಾಗೂ ರಾಜೀನಾಮೆಯಿಂದ ಖಾಲಿ ಆದ ಬೋಧಕ ಹುದ್ದೆಗಳನ್ನು ತುಂಬಿಕೊಳ್ಳಲು ಯಾವ ವರ್ಷದಿಂದ ಅವಕಾಶ ನೀಡಿಲ್ಲ; ಅವಕಾಶ ನೀಡದಿರಲು ಕಾರಣವೇನು; ಮತ್ತು ಯಾವಾಗ ಅನುಮತಿ ನೀಡಲಾಗುವುದು;

(ಆ) ರಾಜ್ಯದಲ್ಲಿ ಸರ್ಕಾರಿ ಪದವಿ ಕಾಲೇಜುಗಳ ಒಟ್ಟು ಸಂಖ್ಯೆ ಎಷ್ಟು; ಈ ಕಾಲೇಜುಗಳಿಗೆ ಮಂಜೂರಾದ ಹುದ್ದೆಗಳೆಷ್ಟು; ಸದ್ಯ ಎಷ್ಟು ಉಪನ್ಯಾಸಕರು ಕಾರ್ಯ ನಿರ್ವಹಿಸುತ್ತಿದ್ದಾರೆ; ಈಗ ಎಷ್ಟು ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗಿದೆ?

## ಪದವಿ ಪೂರ್ವ ಕಾಲೇಜುಗಳಲ್ಲಿನ ಬೋಧನಾ ಶುಲ್ಕ ಕುರಿತು

**ಶ್ರೀ ಎಸ್.ವ್ಹಿ ಸಂಕನೂರ (ಪದವೀಧರರ ಕ್ಷೇತ್ರ) –**

೧೦೩೪ (೧೫೨೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಅನುದಾನಿತ, ಅನುದಾನ ರಹಿತ, ಪದವಿಪೂರ್ವ ಕಾಲೇಜುಗಳಲ್ಲಿ ಯಾವ ರೀತಿ ಫೀ ಹಣವನ್ನು ವಿದ್ಯಾರ್ಥಿಗಳಿಂದ ಪಡೆಯಲಾಗುತ್ತಿದೆ; (ವಿವರ ನೀಡುವುದು)

(ಆ) ವಿದ್ಯಾರ್ಥಿನಿಯರು ಪ್ರವೇಶ ಪಡೆಯುವಾಗ ರಿಯಾಯಿತಿ ನೀಡಲಾಗುತ್ತಿದೆಯೇ; (ವಿವರ ನೀಡುವುದು)

(ಇ) ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ಪ್ರತಿ ವಿದ್ಯಾರ್ಥಿಯಿಂದ ಎಷ್ಟು "ಟ್ಯುಷನ್ ಫೀ" ಹಣ ಪಡೆಯಲಾಗುತ್ತಿದೆ, ಈ ಹಣದಲ್ಲಿ ಅರ್ಧದಷ್ಟು ಹಣ ಆಡಳಿತ ಮಂಡಳಿಯವರು ನಿರ್ವಹಣೆಗಾಗಿ ಬಳಸಿಕೊಳ್ಳಲು ಅನುಮತಿ ನೀಡುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆಯೇ; ಹಾಗಿದ್ದಲ್ಲಿ, ಇದಕ್ಕೆ ಸರ್ಕಾರ ತೆಗೆದುಕೊಂಡ ನಿರ್ಧಾರವೇನು?

## ರಾಮನಗರ ಜಿಲ್ಲೆ, ಗೊಲ್ಲರ ಹಟ್ಟಿ ಗ್ರಾಮದ ಮಹಿಳೆಯರ ಸಮಸ್ಯೆ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೦೩೫ (೧೫೨೫) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆ, ಅಕ್ಕೂರು ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಗೊಲ್ಲಹಟ್ಟಿ ಗ್ರಾಮದ ೨೦ಕ್ಕೂ ಹೆಚ್ಚು ಮಹಿಳೆಯರು ಮುಟ್ಟಾದಾಗ ಮನೆಯಿಂದ ಹೊರಗೆ ಇರಬೇಕಾದ ಪದ್ಧತಿಗೆ ಹೆದರಿ ಗರ್ಭಕೋಶ ತೆಗೆಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಸಂಬಂಧ ತೆಗೆದುಕೊಂಡಿರುವ ಕ್ರಮಗಳೇನು;

(ಇ) ಈ ಪದ್ಧತಿಯನ್ನು ತೆಗೆದು ಹಾಕಲು ಗೊಲ್ಲರಹಟ್ಟಿಗಳಲ್ಲಿ ಜನಜಾಗೃತಿ ಮೂಡಿಸಲು ಸರ್ಕಾರದಿಂದ ಯಾವ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ? (ವಿವರ ನೀಡುವುದು)

## ದ್ವಿತೀಯ ಪಿ.ಯು.ಸಿ. ಉತ್ತರ ಪತ್ರಿಕೆ ಮರುಮೌಲ್ಯಮಾಪನದ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೦೩೬ (೧೫೨೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ದ್ವಿತೀಯ ಪಿ.ಯು.ಸಿ. ವಿಜ್ಞಾನ ವಿದ್ಯಾರ್ಥಿಗಳಲ್ಲಿ ಈ ಸಾಲಿನಲ್ಲಿ ಬಂದ ಫಲಿತಾಂಶದಲ್ಲಿ ಶೇ. ೯೫ ರಿಂದ ೯೬ರ ನಡುವೆ ಹಾಗೂ ಶೇ. ೯೬ ರಿಂದ ೯೭ ಅಂಕಗಳ ನಡುವೆ ಬಂದಿರುವ ರ್‍ಯಾಂಕಿಂಗ್‌ಗಳ ಸಂಖ್ಯೆ ಎಲ್ಲಿಂದ ಎಲ್ಲಿಯವರೆಗೆ ಬಂದಿದೆ;

(ಆ) ದ್ವಿತೀಯ ಪಿ.ಯು.ಸಿ. ಉತ್ತರ ಪತ್ರಿಕೆಗಳ ಮರು ಮೌಲ್ಯ ಮಾಪನಕ್ಕೆ ಸಂಬಂಧಿಸಿದಂತೆ ೫ ಅಂಕಗಳವರೆಗೆ ಹೆಚ್ಚುವರಿ ಅಂಕ ಬಂದಿದ್ದಲ್ಲಿ ಆ ಹೆಚ್ಚುವರಿ ಅಂಕಗಳನ್ನು ವಿದ್ಯಾರ್ಥಿಯ ಅಂಕ ಪಟ್ಟಿಗೆ ಸೇರಿಸಲಾಗುವುದಿಲ್ಲ ಎನ್ನುವ ನಿಯಮವಿರುವುದು ನಿಜವೇ;

(ಇ) ಈ ರೀತಿ ಮಾಡಿದಲ್ಲಿ, ಆ ವಿದ್ಯಾರ್ಥಿಗಳಿಗೆ ರ್‍ಯಾಂಕಿಂಗ್‌ನಲ್ಲಿ ಮತ್ತು ಬಿ.ಇ. ಮತ್ತಿತ್ತರ ಪದವಿ ತರಗತಿಗಳ ಪ್ರವೇಶ ಪಡೆಯಲು ತೊಂದರೆ ಹಾಗೂ ಅನ್ಯಾಯ ಆಗುವುದಿಲ್ಲವೆ;

(ಈ) ಈ ಸಂಬಂಧ ವಿದ್ಯಾರ್ಥಿಗಳಿಗೆ ಪೂರಕವಾಗುವಂತೆ ಸರ್ಕಾರ ಪರ್ಯಾಲೋಚಿಸಿ ಸರಿಪಡಿಸಲು ಮುಂದಾಗುವುದೇ?

## ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕೋರ್ಸ್‌ಗಳ ಮಾನ್ಯತೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೦೩೭ (೧೫೨೪) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ಇದ್ದಂತ ಕೋರ್ಸ್‌ಗಳು ಯಾವುವು;

(ಆ) ಪ್ರಸ್ತುತ ಸದರಿ ವಿಶ್ವವಿದ್ಯಾಲಯದ ಕೋರ್ಸ್‌ಗಳ ಮಾನ್ಯತೆಯನ್ನು ಯು.ಜಿ.ಸಿ. ರದ್ದುಪಡಿಸಿರುವುದು ನಿಜವೇ;

(ಇ) ನಿಜವಾಗಿದ್ದಲ್ಲಿ ಕಾರಣಗಳೇನು;

(ಈ) ಮಾನ್ಯತೆ ರದ್ದು ಪಡಿಸುವ ಮುನ್ನ ಕಳೆದ ಮೂರು ವರ್ಷಗಳಲ್ಲಿ ಯಾವ ರೀತಿಯ ಎಚ್ಚರಿಕೆಯನ್ನು ಯು.ಜಿ.ಸಿ. ನೀಡಿರುವುದು; (ವಿವರ ನೀಡುವುದು)

(ಉ) ರದ್ದುಪಡಿಸುವ ಮುನ್ನ ನೀಡಿದ್ದ ಎಚ್ಚರಿಕೆಗಳನ್ನು ಸರಿಪಡಿಸಿಕೊಳ್ಳಲು ಸರ್ಕಾರವು ಮಾಡಿರುವ ಪ್ರಯತ್ನವೇನು? (ವಿವರ ನೀಡುವುದು)

## ಕೇಂದ್ರ ಮತ್ತು ರಾಜ್ಯ ಸರ್ಕಾರಿ ಶಿಕ್ಷಕ, ಉಪನ್ಯಾಸಕ ವೃಂದಗಳ ವೇತನದಲ್ಲಿ ತಾರತಮ್ಯ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೦೩೮ (೧೫೨೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಮತ್ತು ರಾಜ್ಯ ಸರ್ಕಾರ ಶಿಕ್ಷಕ, ಉಪನ್ಯಾಸಕ ವೃಂದಗಳ ಮಧ್ಯದ ವೇತನದಲ್ಲಿ ತಾರತಮ್ಯವಿರುವುದು ನಿಜವೇ; (ವಿವರ ನೀಡುವುದು)

(ಆ) ವೇತನ ತಾರತಮ್ಯವನ್ನು ಹೋಗಲಾಡಿಸಲು ಸರ್ಕಾರ ಮುಂದಾಗುವುದೇ;

(ಇ) ತಾರತಮ್ಯವನ್ನು ಪರಿಹರಿಸಿದ್ದಲ್ಲಿ, ಮೂಲವೇತನದಲ್ಲಿ ಪರಿಷ್ಕರಿಸಲಾಗುವುದೇ; ಅಥವಾ ಒಟ್ಟು ಮೊತ್ತದ ರೂಪದಲ್ಲಿ ಹೆಚ್ಚಿಸಲಾಗುವುದೋ; (ವಿವರ ನೀಡುವುದು)

(ಈ) ಇದಕ್ಕೆ ಬೇಕಾಗುವ ಕಾಲವಧಿ ಏನು?

## ವೈದ್ಯಕೀಯ ಮತ್ತು ದಂತ ವೈದ್ಯಕೀಯ ಸ್ನಾತಕೋತ್ತರ (PGET) ಕೋರ್ಸ್‌ಗಳ ಪ್ರವೇಶಾತಿ ಕುರಿತು

**ಶ್ರೀ ರಾಮಚಂದ್ರಗೌಡ ( ಪದವೀಧರರ ಕ್ಷೇತ್ರ) –**

೧೦೩೯ (೧೫೨೭) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಈ ಬಾರಿ ವೈದ್ಯಕೀಯ ಮತ್ತು ದಂತ ವೈದ್ಯಕೀಯದ ಸ್ನಾತಕೋತ್ತರ (PGET) ಕೋರ್ಸ್‌ಗಳ ಪ್ರವೇಶಾತಿಗೆ ನಡೆದ ಕೌನ್ಸಿಲಿಂಗ್‌ನಲ್ಲಿ ಮೀಸಲಾತಿ ಅನುಸರಿಸದಿರುವ ಬಗ್ಗೆ ಆರೋಪ ಬಂದಿರುವುದು ನಿಜವೇ;

(ಆ) ಸದರಿ ಕೋರ್ಸ್‌ಗಳ ಪ್ರವೇಶಾತಿಗೆ ಅಭ್ಯರ್ಥಿಗಳಿಗೆ ನಾಲ್ಕನೇ ಸುತ್ತಿನ ಕೌನ್ಸಿಲಿಂಗ್‌ನಲ್ಲಿ ಅವಕಾಶ ನೀಡಲಾಗಿದೆಯೇ; ಇಲ್ಲವಾದಲ್ಲಿ ಕಾರಣವೇನು;

(ಇ) ಈ ಸಂಬಂಧ ವಿದ್ಯಾರ್ಥಿ ಸಂಘಟನೆಗಳಿಂದ ಪ್ರತಿಭಟನೆ ನಡೆಸಿ ಬೇಡಿಕೆ ನೀಡಲಾಗಿದೆಯೇ; (ವಿವರ ನೀಡುವುದು)

(ಈ) ಕೆಲವು ವಿದ್ಯಾರ್ಥಿಗಳು ನ್ಯಾಯಾಲಯದ ಮೂಲಕ ಕೌನ್ಸಿಲಿಂಗ್‌ನಲ್ಲಿ ಪ್ರವೇಶ ಪಡೆದಿರುವುದು ನಿಜವೇ; ಪಡೆದಿದ್ದಲ್ಲಿ, ನ್ಯಾಯಾಲಯದ ಆದೇಶದಂತೆ ಉಳಿದವರಿಗೂ ಅವಕಾಶ ಕಲ್ಪಿಸಿಕೊಡಲಾಗುವುದೇ; ಇಲ್ಲವಾದಲ್ಲಿ ಕಾರಣವೇನು?

## ಪ್ರೊ. ವೈದ್ಯನಾಥನ್ ವರದಿ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೦೪೦ (೧೫೩೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೈಹಿಕ ಶಿಕ್ಷಣ ಸುಧಾರಣೆ ಸಂಬಂಧ ಪ್ರೊ. ವೈದ್ಯನಾಥನ್ ವರದಿಯನ್ನು ಜಾರಿಗೆ ತರಲು ಸರ್ಕಾರ ಒಪ್ಪಿಗೆ ನೀಡಿದೆಯೇ;

(ಆ) ನೀಡಿದ್ದಲ್ಲಿ, ಪ್ರೊ. ವೈದ್ಯನಾಥನ್ ವರದಿಯ ಮುಖ್ಯ ಅಂಶಗಳೇನು;

(ಇ) ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ವಿಳಂಬ ಉಂಟಾಗುತ್ತಿರಲು ಕಾರಣಗಳೇನು; ಯಾವ ಕಾಲಮಿತಿಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲಾಗುವುದು?

## ಕಾಲಮಿತಿ ವೇತನ ಬಡ್ತಿ, ಮುಂಬಡ್ತಿ ಹಾಗೂ ವರ್ಗಾವಣೆ ಪ್ರಕ್ರಿಯೆ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೦೪೧ (೧೫೩೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಿಂದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರಾಗಿ ಬಡ್ತಿ ಹೊಂದಿರುವ ಶಿಕ್ಷಕರುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಶಿಕ್ಷಕರುಗಳಿಗೆ ೧೦-೧೫-೨೦ ವರ್ಷಗಳ ಕಾಲಮಿತಿ ವೇತನ ಬಡ್ತಿ, ಮುಖ್ಯೋಪಾಧ್ಯಾಯರ ಹುದ್ದೆಗೆ ಮುಂಬಡ್ತಿ ಹಾಗೂ ವರ್ಗಾವಣೆ ಪ್ರಕ್ರಿಯೇಯಲ್ಲಿ ಆಗಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, ಈ ತೊಂದರೆಗಳನ್ನು ಹಾಗೂ ಅನ್ಯಾಯವನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು)

## ಗ್ರಾಮಾಂತರ ಪ್ರದೇಶಗಳಲ್ಲಿನ ಸರ್ಕಾರಿ ಶಾಲೆಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೦೪೨ (೧೫೩೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಸರ್ಕಾರಿ ಶಾಲೆಗಳು ಮುಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಗ್ರಾಮಾಂತರ ಪ್ರದೇಶಗಳಲ್ಲಿ ಎಷ್ಟು ಸರ್ಕಾರಿ ಶಾಲೆಗಳು ಹೊಸದಾಗಿ ಪ್ರಾರಂಭವಾಗಿವೆ;

(ಈ) ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಹಾಜರಾತಿ ಪ್ರಮಾಣ ಎಷ್ಟು;

(ಉ) ಯಾವ್ಯಾವ ಜಿಲ್ಲೆಗಳಲ್ಲಿ ಅತಿ ಹೆಚ್ಚು ಸರ್ಕಾರಿ ಶಾಲೆಗಳು ಮುಚ್ಚಿವೆ? (ಜಿಲ್ಲಾವಾರು ಮಾಹಿತಿ ನೀಡುವುದು)

## ಹೊಸ ವಿಶ್ವವಿದ್ಯಾಲಯ ಪ್ರಾರಂಭಿಸುವ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೦೪೩ (೧೫೨೯) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿಶ್ವವಿದ್ಯಾಲಯದ ವ್ಯಾಪ್ತಿಯೆಷ್ಟು; ಹಾಗೂ ಅದರಿಂದ ಸಂಯೋಜಿತಗೊಂಡಿರುವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಸೇರಿದ ಕಾಲೇಜುಗಳನ್ನು ಬೆಂಗಳೂರು ವಿಶ್ವವಿದ್ಯಾಲಯದಿಂದ ಬೇರ್ಪಡಿಸಿ ಹೊಸ ವಿಶ್ವವಿದ್ಯಾಲಯವನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ; ಇದ್ದರೆ ಅದರ ರೂಪುರೇಷೆಗಳೇನು;

(ಇ) ಯಾವಾಗಿನಿಂದ ಹೊಸ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲಾಗುವುದು?

## ರಾಜ್ಯದಲ್ಲಿ ಆಶ್ರಯ ಯೋಜನೆಯನ್ವಯ ಮನೆಗಳ ನೀಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೦೪೪ (೧೫೩೯) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪-೧೫ನೇ ಸಾಲಿನಲ್ಲಿ ರಾಜ್ಯದಲ್ಲಿ ಆಶ್ರಯ ಯೋಜನೆಯಡಿಯಲ್ಲಿ ರಾಜ್ಯಾದ್ಯಾಂತ ನೀಡಿದ ಮನೆಗಳ ಸಂಖ್ಯೆ ಎಷ್ಟು; ಬಿಡುಗಡೆ ಮಾಡಿದ ಅನುದಾನ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಗುಡಿಸಲುಗಳಲ್ಲಿ ವಾಸಿಸುತ್ತಿರುವ ಕುಟುಂಬಗಳ ಸಂಖ್ಯೆ ಎಷ್ಟು;(ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಪ್ರಸ್ತುತ ಮನೆ ನಿರ್ಮಾಣ ಮಾಡಿಕೊಳ್ಳಲು ಬಂದಿರುವ ಬೇಡಿಕೆ ಎಷ್ಟು; ಈ ಬೇಡಿಕೆ ಈಡೇರಿಸಲು ಸರ್ಕಾರದ ಮುಂದಿರುವ ಪ್ರಸ್ತಾವನೆಗಳಾವುವು?

## ಕೊಂಕಣಿ ಸಾಹಿತ್ಯ ಅಕಾಡೆಮಿಗೆ ಸ್ವಂತ ಕಟ್ಟಡ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೦೪೫ (೧೫೩೬) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಂಕಣಿ ಸಾಹಿತ್ಯ ಅಕಾಡೆಮಿಗೆ ಸ್ವಂತ ಕಟ್ಟಡ ಒದಗಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಈವರೆಗೆ ಯಾವ ಅಕಾಡೆಮಿಗಳಿಗೆ ಸ್ವಂತ ಕಟ್ಟಡವನ್ನು ಒದಗಿಸಿಕೊಡಲಾಗಿದೆ; ಇದಕ್ಕಾಗಿ ನೀಡಿರುವ ಅನುದಾನ ಎಷ್ಟು;

(ಆ) ಕೊಂಕಣಿ ಅಕಾಡೆಮಿಗೆ ಬೇರೆ ಅಕಾಡೆಮಿಗಳಂತೆ ಕೊಂಕಣಿ ಭವನ ಸ್ಥಾಪನೆಗೆ ಈ ಪ್ರಸ್ತುತ ವರ್ಷದಲ್ಲಿ ಹಣ ಬಿಡುಗಡೆಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಇ) ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ಕೊಂಕಣಿ ಸಾಹಿತ್ಯ ಅಕಾಡಮಿಯಿಂದ ಕೈಗೊಂಡ ವಿವಿಧ ಕಾರ್ಯಕ್ರಮಗಳು ಯಾವುವು; ಈ ಕಾರ್ಯಕ್ರಮಗಳಿಗೆ ಖರ್ಚು ಮಾಡಿದ ಅನುದಾನ ಎಷ್ಟು; (ವಿವರ ನೀಡುವುದು)

(ಈ) ಕೊಂಕಣಿ ಅಕಾಡೆಮಿ ಸದಸ್ಯರಿಗೆ ಗೌರವಧನ ನೀಡಲು ಇಲಾಖೆ ಕ್ರಮ ಕೈಗೊಳ್ಳುವುದೇ; ಪ್ರಸ್ತುತ ನೀಡುವ ಗೌರವಧನ ಎಷ್ಟು?

## ರಾಷ್ಟ್ರೀಯ ಮಾಧ್ಯಮ ಶಿಕ್ಷಣ ಅಭಿಯಾನ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೦೪೬ (೧೫೩೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :--

(ಅ) ೨೦೧೩--೧೪ನೇ ಸಾಲಿನಿಂದ ೨೦೧೪–೧೫ನೇ ಸಾಲಿನ ವರೆಗೆ ರಾಷ್ಟ್ರೀಯ ಮಾಧ್ಯಮ ಶಿಕ್ಷಣ ಅಭಿಯಾನ ಮೂಲಕ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಿಡುಗಡೆಗೊಂಡ ಒಟ್ಟು ಅನುದಾನ ಎಷ್ಟು;

(ಆ) ಈ ಜಿಲ್ಲೆಯಲ್ಲಿರುವ ರಾಷ್ಟ್ರೀಯ ಮಾಧ್ಯಮ ಶಿಕ್ಷಣ ಅಭಿಯಾನದ ಕಾಮಗಾರಿಗಳನ್ನು ನಿರ್ವಹಿಸಲು ಗುತ್ತಿಗೆ ಪಡೆದುಕೊಂಡ ಗುತ್ತಿಗೆದಾರರು ಯಾರು;

(ಇ) ರಾಷ್ಟ್ರೀಯ ಮಾಧ್ಯಮ ಶಿಕ್ಷಣ ಅಭಿಯಾನದ ಮೂಲಕ ಗುತ್ತಿಗೆ ವಹಿಸಿಕೊಂಡ ಗುತ್ತಿಗೆದಾರರು ಕಳೆದ ೩ ವರ್ಷಗಳಿಂದ ಯಾವುದೇ ಕಾಮಗಾರಿ ನಿರ್ವಹಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕಾಮಗಾರಿಗಳನ್ನು ಸ್ಥಳೀಯ ಜಿಲ್ಲಾ ಪಂಚಾಯತ್‌ಗಳ ಮೂಲಕ ನಿರ್ವಹಿಸಲು ಇರುವ ಅಡ್ಡಿ ಆತಂಕಗಳೇನು;

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾಮಗಾರಿಗಳನ್ನು ಕೈಗೊಳ್ಳದೆ ಇರುವ ಗುತ್ತಿಗೆದಾರರ ಮೇಲೆ ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ? (ಗುತ್ತಿಗೆದಾರರ ವಿವರ ಮತ್ತು ಮಂಜೂರು ಮಾಡಿದ ಅನುದಾನದ ವಿವರ ನೀಡುವುದು)

## ತುಳು ಮತ್ತು ಕೊಂಕಣಿ ಭಾಷೆಗಳಲ್ಲಿ ಐಚ್ಛಿಕ ವಿಷಯದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೦೪೭ (೧೫೪೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಳು ಮತ್ತು ಕೊಂಕಣಿ ಭಾಷೆಗಳಲ್ಲಿ ಐಚ್ಛಿಕ ವಿಷಯವಾಗಿ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಶಾಲಾವಾರು ವಿವರ ನೀಡುವುದು)

(ಆ) ತುಳು ಮತ್ತು ಕೊಂಕಣಿಗಳಲ್ಲಿ ಯಾವ ಯಾವ ಹಂತಗಳಲ್ಲಿ ಬೋಧನೆಗೆ ಅವಕಾಶ ನೀಡಲಾಗಿದೆ; ಪಿ.ಯು.ಸಿ. ಡಿಗ್ರಿ ವಿಭಾಗಗಳಲ್ಲಿ ತುಳು ಕೊಂಕಣಿ ಐಚ್ಛಿಕ ವಿಷಯವಾಗಿ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಕಾಲೇಜುವಾರು ವಿವರ ನೀಡುವುದು)

(ಇ) ತುಳು ಮತ್ತು ಕೊಂಕಣಿ ಬೋದಿಸಲು ಶಾಲಾ ಮಟ್ಟಗಳಲ್ಲಿ ಶಿಕ್ಷಕರನ್ನು ನೇಮಿಸಲು ಇಲಾಖೆ ಕ್ರಮ ಕೈಗೊಳ್ಳುವುದೇ; ಈ ಬಗ್ಗೆ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ·

(ಈ) ತುಳು ಅಕಾಡೆಮಿಯಿಂದ ೨೦೧೪–೧೫ನೇ ಸಾಲಿನಲ್ಲಿ ಏರ್ಪಾಡು ಮಾಡಿದ ಕಾರ್ಯಕ್ರಮಗಳಾವುವು; ಈ ಕಾರ್ಯ ಕ್ರಮಗಳಿಗಾಗಿ ಖರ್ಚು ಮಾಡಿದ ಹಣ ಎಷ್ಟು ; (ವಿವರ ನೀಡುವುದು)

(ಉ) ತುಳು ಅಕಾಡೆಮಿಗೆ ಖಾಯಂ ನೋಂದಣಾಧಿಕಾರಿ ಇಲ್ಲದೆ ಕಾರ್ಯಕ್ರಮ ನಿರ್ವಹಿಸಲು ಅಡ್ಡಿ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ನೋಂದಣಾಧಿಕಾರಿಯನ್ನು ನೇಮಿಸಲು ಕ್ರಮ ಕೈಗೊಳ್ಳುವುದೇ?

## ಜೈನ ಮಂದಿರಕ್ಕೆ ಯಾತ್ರಿ ನಿವಾಸ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೦೪೮ (೧೫೪೫) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೈಲಹೊಂಗಲ ತಾಲ್ಲೂಕಿನ ದೇವಲಾಪುರ ಗ್ರಾಮದಲ್ಲಿರುವ ಭಗವಾನ ಶ್ರೀ ೧೦೦೮ ನೇಮಿನಾಥ ತೀರ್ಥಂಕರ ದಿಗಂಬರ ಜೈನ ಮಂದಿರ ರಾಜ್ಯದಲ್ಲಿಯೇ ಏಕೈಕ ೫೨ ದೇವತೆಗಳನ್ನು ಹೊಂದಿದ ಮಂದಿರವಿದ್ದು, ಅಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಯಾತ್ರಿನಿವಾಸ ಕಟ್ಟುವ ಬಗ್ಗೆ ಸಂಬಂಧಪಟ್ಟ ಸಚಿವರು, ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು ಇವರಿಗೆ ಪತ್ರ ಬರೆದ ಸಂಗತಿ ನಿಜವೆ;

(ಆ) ರಾಜ್ಯದಲ್ಲಿಯೇ ಏಕೈಕ ಇಂಥ ಜೈನ ಬಸ್ತಿ ಇದ್ದು ಇದನ್ನು ನೋಡಲು ರಾಜ್ಯದ ಹಾಗೂ ಹೊರ ರಾಜ್ಯದ ಪ್ರವಾಸಿಗರು ಇಲ್ಲಿ ಬರುತ್ತಿದ್ದು, ಅವರಿಗೆ ಇಲ್ಲಿ ವಾಸ್ತವ್ಯ ಮಾಡಲು ತೊಂದರೆ ಆಗುತ್ತಿರುವುದರಿಂದ ಯಾತ್ರಿ ನಿವಾಸ ಕಟ್ಟಲು ಪರಿಶೀಲಿಸಲಾಗುವುದೆ;

(ಇ) ಈ ಪ್ರವಾಸಿ ಕೇಂದ್ರವನ್ನು ಪ್ರತ್ಯಕ್ಷ ನೋಡಿ ಸರ್ಕಾರಕ್ಕೆ ನೈಜ ವರದಿ ಸಲ್ಲಿಸಲು ರಾಜ್ಯದ ಒಬ್ಬ ಉನ್ನತ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಯನ್ನು ಕಳುಹಿಸಿ ಇಲ್ಲಿನ ವಸ್ತು ಸ್ಥಿತಿ ಅರಿಯಲು ಹಾಗೂ ಸ್ಥಳ ಪರಿಶೀಲನೆ ಮಾಡಿ, ಅವಶ್ಯವಿರುವುದನ್ನು ಮನಗಂಡು ಕಟ್ಟಡ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ?

# ಅನುದಾನ ರಹಿತ ಪ್ರಥಮ ದರ್ಜೆ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೦೪೯ (೧೫೪೧) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ, ಬೈಲಹೊಂಗಲ ನಗರದಲ್ಲಿ ಇರುವ SNVS ಸಂಸ್ಥೆಯ SGV Arts & Commerce College ಮೂರು ಸಾವಿರಮಠ, ಬೈಲಹೊಂಗಲ ಈ ಕಾಲೇಜು ಅನುದಾನ ಪಡೆಯಲು ಎಲ್ಲ ಅರ್ಹತೆಗಳನ್ನು ಹೊಂದಿದ್ದು, ಕೂಡಲೇ ಅದನ್ನು ಅನುದಾನಕ್ಕೆ ಒಳಪಡಿಸಲು ಕ್ರಮ ಕೈಗೊಳ್ಳಲಾಗುವುದೇ;

(ಆ) ರಾಜ್ಯದಲ್ಲಿ ದಿನಾಂಕ:೦೧-೦೬-೧೯೮೭ ರಿಂದ ೦೧-೦೩-೧೯೯೫ ರ ವರೆಗೆ ಪ್ರಾರಂಭವಾದ ಸಾಮಾನ್ಯ ಆಡಳಿತ ಮಂಡಳಿಗಳು ನಡೆಸುತ್ತಿರುವ ಅನುದಾನ ರಹಿತ ಪ್ರಥಮ ದರ್ಜೆ ಕಾಲೇಜುಗಳು ಎಷ್ಟು; ಈ ಕಾಲೇಜುಗಳ ಆಡಳಿತ ಮಂಡಳಿಯವರು ಈ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಲುವಾಗಿ ಸರ್ಕಾರಕ್ಕೆ ಮನವಿ ಸಲ್ಲಿಸಿದ ಸಂಗತಿ ನಿಜವೇ;

(ಇ) ಈ ಅವಧಿಯಲ್ಲಿ ಪ್ರಾರಂಭವಾಗಿರುವ ಸಾಮಾನ್ಯ ಆಡಳಿತಗಳು ನಡೆಸುತ್ತಿರುವ ಖಾಸಗಿ ಪ್ರಥಮ ದರ್ಜೆ ಕಾಲೇಜುಗಳ ಪೈಕಿ ಅನುದಾನ ಪಡೆಯಲು ೮೦ ಕಾಲೇಜುಗಳ ಆಡಳಿತ ಮಂಡಳಿಯವರು ಅವಶ್ಯವಿರುವ ಎಲ್ಲ ಮಾಹಿತಿ ಒದಗಿಸಿದ ಸಂಗತಿ ನಿಜವೇ; (ಆ ಕಾಲೇಜುಗಳ ಹೆಸರು ಹಾಗೂ ಆಡಳಿತ ಮಂಡಳಿಯ ಹೆಸರು ಒದಗಿಸುವುದು)

(ಈ) ಅನುದಾನ ರಹಿತ ೧೨೬ ಪ್ರಥಮ ದರ್ಜೆ ಕಾಲೇಜುಗಳ ಪೈಕಿ ೮೦ ಕಾಲೇಜುಗಳು ಮಾಹಿತಿ ಒದಗಿಸಿದ್ದು, ಮಾಹಿತಿ ಒದಗಿಸದೇ ಇರುವ ೪೬ ಕಾಲೇಜುಗಳು ಯಾವುವು; ಆ ಕಾಲೇಜುಗಳ ಹೆಸರು ಹಾಗೂ ಆಡಳಿತ ಮಂಡಳಿಯ ಹೆಸರು ಒದಗಿಸುವುದು;

(ಉ) ಅವಶ್ಯವಿರುವ ಎಲ್ಲ ಮಾಹಿತಿ ಒದಗಿಸಿದ ೮೦ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಿದಲ್ಲಿ ಸರ್ಕಾರದ ಮೇಲೆ ಪ್ರತಿವರ್ಷ ಎಷ್ಟು ಕೋಟಿ ರೂ. ಆರ್ಥಿಕ ಹೊರೆ ಬೀಳುವುದು;

(ಊ) ಈ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ (Grant-in-aid) ಕೇಂದ್ರ ಸರ್ಕಾರ ಏನಾದರೂ ಆರ್ಥಿಕ ನೆರವು ನೀಡುವುದೆ; ನೀಡುವುದಾದಲ್ಲಿ ಎಷ್ಟು ನೀಡುವುದು ಹಾಗೂ ಎಷ್ಟು ವರ್ಷಕ್ಕೆ ನೀಡುವುದು ; (ವಿವರ ಒದಗಿಸುವುದು) ಈ ೮೦ ಕಾಲೇಜುಗಳ ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ;

ಋ) ಮುಂದಿನ ವರ್ಷದ ಆಯವ್ಯಯದಲ್ಲಿ ಈ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಹಣ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ?

## ಯಾತ್ರಿ ನಿವಾಸ ಕಟ್ಟುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೦೫೦ (೧೫೪೩) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ, ಸವದತ್ತಿ ತಾಲ್ಲೂಕಿನ ಕೆಂಗೇರಿ–ಮುರಗೋಡದಲ್ಲಿ ಶ್ರೀ ಶಿವಚಿದಂಬರ ಮೂಲಪೀಠ ಮೂಲಮಹಾಕ್ಷೇತ್ರ ಸಂಸ್ಥಾನ

ಇದ್ದು, ಇದು ರಾಜ್ಯದಲ್ಲಿಯೇ ಮೂಲಕ್ಷೇತ್ರವಾಗಿದ್ದು, ಅಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಯಾತ್ರಿ ನಿವಾಸ ಕಟ್ಟಲು ಸಂಬಂಧಪಟ್ಟ ಸಚಿವರು, ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು ಇವರಿಗೆ ಪತ್ರ ಬರೆದ ಸಂಗತಿ ನಿಜವೇ;

(ಆ) ರಾಜ್ಯದಲ್ಲಿಯೇ ಏಕೈಕ ಇಂಥ ಮೂಲಸಂಸ್ಥಾನ ಪೀಠ ಇದ್ದು ಇದನ್ನು ನೋಡಲು ರಾಜ್ಯದ ಹಾಗೂ ಹೊರ ರಾಜ್ಯದ ಪ್ರವಾಸಿಗರು ಇಲ್ಲಿ ಬರುತ್ತಿದ್ದು, ಅವರಿಗೆ ಇಲ್ಲಿ ವಾಸ್ತವ್ಯ ಮಾಡಲು ತೊಂದರೆ ಆಗುತ್ತಿರುವುದರಿಂದ ಯಾತ್ರಿ ನಿವಾಸ ಕಟ್ಟಲು ಪರಿಶೀಲಿಸಲಾಗುವುದೇ;

(ಇ) ಈ ಪ್ರವಾಸಿ ಕೇಂದ್ರವನ್ನು ಪ್ರತ್ಯಕ್ಷ ನೋಡಿ ಸರ್ಕಾರಕ್ಕೆ ನೈಜ ವರದಿ ಸಲ್ಲಿಸಲು ರಾಜ್ಯದ ಒಬ್ಬ ಉನ್ನತ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಯನ್ನು ಕಳುಹಿಸಿ ಇಲ್ಲಿನ ವಸ್ತು ಸ್ಥಿತಿ ಅರಿಯಲು ಹಾಗೂ ಸ್ಥಳ ಪರಿಶೀಲನೆ ಮಾಡಿ, ಅವಶ್ಯವಿರುವುದನ್ನು ಮನಗಂಡು ಕಟ್ಟಡ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ?

## ಯು.ಜಿ.ಸಿ.ಯಿಂದ ಮುಕ್ತ ವಿಶ್ವವಿದ್ಯಾಲಯದ ರದ್ದತಿ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೦೫೧ (೧೫೪೪) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯು.ಜಿ.ಸಿಯಿಂದ ನವೀಕರಣ ಪಡೆಯದ ಪರಿಣಾಮ ಮುಕ್ತ ವಿಶ್ವವಿದ್ಯಾಲಯದ ಎಲ್ಲ ಕೋರ್ಸ್‌ಗಳ ಮಾನ್ಯತೆ ರದ್ದುಪಡಿಸಿರುವ ಕಾರಣ ಕೆ.ಎಸ್.ಓ.ಯು.ದಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು; ಯಾಕೆ ರದ್ದು ಪಡಿಸಲಾಗಿದೆ; ಇದಕ್ಕೆ ಯಾರು ಜವಾಬ್ದಾರರು; (ವಿವರ ನೀಡುವುದು)

(ಆ) ತಪ್ಪಿತಸ್ಥರ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು?

## ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಪ್ರೌಢ ಶಾಲೆಗಳಲ್ಲಿ ಮೂಲಭೂತ ಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೦೫೨ (೧೫೪೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ, ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿ ಇರುವ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪ್ರೌಢ ಶಾಲೆಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ; (ತಾಲ್ಲೂಕುವಾರು ಶಾಲೆಯ ಹೆಸರು, ವಿಳಾಸ ಒದಗಿಸುವುದು)

(ಆ) ಈ ಎಲ್ಲ ಶಾಲೆಗಳಲ್ಲಿ ಖಾಯಂ ಆಗಿ ಮುಖ್ಯೋಪಾಧ್ಯಾಯರು ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯೋಪಾಧ್ಯಾಯರ ಹೆಸರು, ವಿಳಾಸ, ದೂರವಾಣಿ ಸಂಖ್ಯೆ ಒದಗಿಸುವುದು;

(ಈ) ಖಾಯಂ ಆದ ಮುಖ್ಯೋಪಾಧ್ಯಾಯರು ಇಲ್ಲದೆ ಇದ್ದರೂ ಸರ್ಕಾರಕ್ಕೆ ತಪ್ಪು ಮಾಹಿತಿ ಒದಗಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

## ೨೦೧೨–೧೩ ಮತ್ತು ೨೦೧೩–೧೪ರ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಫಲಿತಾಂಶದಿಂದ ಆತ್ಮಹತ್ಯೆಗೆ ಶರಣಾದವರ ಬಗ್ಗೆ

**ಶ್ರೀ ಆರ್.ಕೆ. ಸಿದ್ದರಾಮಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೫೩ (೧೫೪೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಶೈಕ್ಷಣಿಕ ವರ್ಷ ಅಂದರೆ ೨೦೧೨-೧೩, ೨೦೧೩-೧೪ ಮತ್ತು ೨೦೧೪-೧೫ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತಿಯ ಪಿ.ಯು.ಸಿ. ಫಲಿತಾಂಶದ ನಂತರ ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ವಿವರ ನೀಡುವುದು;

(ಆ) ಇಲಾಖೆ ವತಿಯಿಂದ ನಡೆಯುವ ಪರೀಕ್ಷಾ ಮೌಲ್ಯ ಮಾಪನವು ಸಮರ್ಪಕವಾಗಿ ಮತ್ತು ನ್ಯಾಯಯುತವಾಗಿ ನಡೆಯದೆ ಇರುವ ಕಾರಣದಿಂದ ರಾಜ್ಯದಲ್ಲಿ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಆತ್ಮಹತ್ಯೆಗೆ ಶರಣಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಸರ್ಕಾರ ಈವರೆಗೂ ಕೈಗೊಂಡ ಕ್ರಮಗಳೇನು?

## ಸ್ಮಶಾನ ಅಭಿವೃದ್ಧಿ/ರುದ್ರಭೂಮಿ ಅಭಿವೃದ್ಧಿ ಪಡಿಸುವ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) –**

೧೦೫೪ (೧೫೫೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ ವತಿಯಿಂದ ಸ್ಮಶಾನ ಅಭಿವೃದ್ಧಿ/ರುದ್ರಭೂಮಿ ಅಭಿವೃದ್ಧಿ ಪಡಿಸಲು ಸುವರ್ಣ ಗ್ರಾಮೋದಯ ಯೋಜನೆ ಅಡಿಯಲ್ಲಿ ಅನುದಾನ ನಿಗದಿಗೊಳಿಸಲಾಗಿದ್ದು ಸದರಿ ಯೋಜನೆಯನ್ನು ಸದುಪಯೋಗ ಪಡಿಸಿಕೊಂಡಿರುವ ಬಗ್ಗೆ ಬಾಗಲಕೋಟೆ, ವಿಜಯಪುರ ಜಿಲ್ಲೆಗಳ ಪಂಚಾಯಿತಿವಾರು ವಿವರ ನೀಡುವುದು;

(ಆ) ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ [illegible]ಲ್ಲಿ ಗ್ರಾಮೀಣ ಯುವಕರ [illegible]ಡೆ ಹಾಗೂ

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಆಟದ ಮೈದಾನಗಳನ್ನು ಅಭಿವೃದ್ಧಿ ಪಡಿಸುವ ಕಾರ್ಯವನ್ನು ಸರ್ಕಾರವು ಕೈಗೊಂಡಿದ್ದು, ವಿಜಯಪುರ, ಬಾಗಲಕೋಟೆ ಜಿಲ್ಲೆಗಳಲ್ಲಿ ಎಷ್ಟು ಆಟದ ಮೈದಾನ ಅಭಿವೃದ್ಧಿಪಡಿಸಲಾಗಿದೆ? (ಪೂರ್ಣ ವಿವರ ನೀಡುವುದು)

## ಉತ್ತರ ಕರ್ನಾಟಕದ ಗ್ರಾಮಗಳಿಗೆ ಉತ್ತಮ ರಸ್ತೆ ಮತ್ತು ಚರಂಡಿ ವ್ಯವಸ್ಥೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) –**

೧೦೫೫ (೧೫೫೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಭಿವೃದ್ಧಿ ವಂಚಿತ ಉತ್ತರ ಕರ್ನಾಟಕದ ಗ್ರಾಮಗಳಲ್ಲಿ ಉತ್ತಮ ರಸ್ತೆ ಮತ್ತು ಚರಂಡಿ ವ್ಯವಸ್ಥೆಯನ್ನು ಒದಗಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು;

(ಆ) ಗ್ರಾಮ ನೈರ್ಮಲ್ಯ ಕಾಪಾಡುವ ದಿಸೆಯಲ್ಲಿ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;

(ಇ) ಗ್ರಾಮೀಣ ಪ್ರದೇಶದಲ್ಲಿ ಶೌಚಾಲಯ ಮತ್ತು ನೈರ್ಮಲ್ಯ ಕಾಪಾಡುವ ಬಗ್ಗೆ ಜನರಿಗೆ ಅರಿವು ಮೂಡಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು?

## ದೇವರ ದಾಸಿಮಯ್ಯನವರ ಹುಟ್ಟೂರಾದ ಮುದನೂರು ಹೊಸಬಡಾವಣೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) –**

೧೦೫೬ (೧೫೪೮) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ಜಿಲ್ಲೆ, ಸುರಪುರ ತಾಲ್ಲೂಕು, ಮುದನೂರು ಗ್ರಾಮದಲ್ಲಿ ಶ್ರೀ ದೇವರ ದಾಸಿಮಯ್ಯ ದೇವಸ್ಥಾನಕ್ಕೆ ಹೊಂದಿಕೊಂಡಿರುವ ಮನೆಗಳ ಸ್ಥಳಾಂತರ ಕಾರ್ಯ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈಗಾಗಲೇ ಜಿಲ್ಲಾಧಿಕಾರಿಗಳಿಂದ ಗುರುತಿಸಿರುವ ಜಾಗವನ್ನು ವಸತಿ ಇಲಾಖೆಗೆ ವರ್ಗಾಯಿಸಲಾಗಿದೆಯೇ;

(ಇ) ಹಲವಾರು ವರ್ಷಗಳಾದರೂ, ಇದುವರೆವಿಗೂ ಶ್ರೀ ದೇವರದಾಸಿಮಯ್ಯ ಬಡಾವಣೆ ನಿರ್ಮಾಣ ಮಾಡದಿರಲು ಕಾರಣವೇನು; ಅಗತ್ಯ ಹಣ ಬಿಡುಗಡೆ ಮಾಡಲಾಗಿದೆಯೇ;

(ಈ) ಗುರುತಿಸಿರುವ ಸುಮಾರು ೧೬೩ ಮನೆಗಳಿಗೆ ಈ ಬಡಾವಣೆಯಲ್ಲಿ ಮನೆ ನಿರ್ಮಾಣ ಮಾಡಿ ಎಷ್ಟು ದಿನಗಳಲ್ಲಿ ನೀಡಲಾಗುವುದು?

## ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿ ಉನ್ನತ ಹುದ್ದೆಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) –**

೧೦೫೭ (೧೫೫೦) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು;

(ಆ) ಈ ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ಕುಲಪತಿಗಳ, ಕುಲಸಚಿವರ ಹಾಗೂ ಹಣಕಾಸು ಅಧಿಕಾರಿಗಳ ಹುದ್ದೆಗಳ ಸಂಖ್ಯೆ ಎಷ್ಟು; (ಪೂರ್ಣ ವಿವರ ನೀಡುವುದು)

(ಇ) ಈ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು?

# ತುಮಕೂರು ಜಿಲ್ಲೆಯ ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) –**

೧೦೫೮ (೧೫೪೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯತ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಪ್ರತಿ ಗ್ರಾಮ ಪಂಚಾಯಿತಿಗಳಿಗೆ ಬಂದಿರುವ ಅನುದಾನದ ಮೊತ್ತ ಎಷ್ಟು; (ವಿವರ ನೀಡುವುದು)

(ಇ) ತುರುವೇಕೆರೆ ಕ್ಷೇತ್ರದ ಪ್ರತಿ ಗ್ರಾಮ ಪಂಚಾಯಿತಿಗೆ ಎಷ್ಟು ಗ್ರಾಮಗಳು ಸೇರುವವು; (ಆ ಗ್ರಾಮಗಳ ಹೆಸರುಗಳೊಂದಿಗೆ ವಿವರ ನೀಡುವುದು)

(ಈ) ತುರುವೇಕೆರೆ ಕ್ಷೇತ್ರದ ಪಂಚಾಯತಿಗಳಲ್ಲಿ ಸುಮಾರು ಎರಡು ವರ್ಷಗಳಿಂದ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಕೈಗೊಂಡಿದ್ದಲ್ಲಿ, ಕಾಮಗಾರಿಗಳಿಗೆ ತಗಲಿದ ವೆಚ್ಚ ಎಷ್ಟು? (ಕಾಮಗಾರಿಗಳು ಪೂರ್ಣಗೊಂಡಿದ್ದಲ್ಲಿ ಅವುಗಳ ಅಂದಾಜು ಪಟ್ಟಿಯ ಪ್ರತಿ, ಕಾಮಗಾರಿ ನಿರ್ವಹಿಸಿದ ದಿನಾಂಕ ಹಾಗೂ ಗುತ್ತಿಗೆದಾರರ ಹೆಸರು ಅಂಕಿ ಅಂಶಗಳೊಂದಿಗೆ ಗ್ರಾಮ ಪಂಚಾಯತ್‌ಗಳವಾರು ಮಾಹಿತಿ ನೀಡುವುದು)

## ೨೦೧೪-೧೫ನೇ ಸಾಲಿನಲ್ಲಿ ಅಂಗನವಾಡಿಗಳನ್ನು ಮಂಜೂರು ಮಾಡಿರುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ) ಮತ್ತು**

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೫೯ (೧೨೧೬+೧೨೧೪) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ೨೦೧೪-೧೫ನೇ ಸಾಲಿಗೆ ಸರ್ಕಾರ ಅನುಮೋದನೆ ನೀಡಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆಗಳೆಷ್ಟು; ಇವುಗಳಲ್ಲಿ ಕನ್ನಡ ಮತ್ತು ಉರ್ದು ಕೇಂದ್ರಗಳೆಷ್ಟು; (ಜಿಲ್ಲಾ ಹಾಗೂ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸ್ವಂತ ಕಟ್ಟಡಗಳಲ್ಲಿ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ನಡೆಯುವ ಅಂಗನವಾಡಿಗಳ ಸಂಖ್ಯೆಗಳೆಷ್ಟು; (ಜಿಲ್ಲಾ ಹಾಗೂ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸ್ವಂತ ಕಟ್ಟಡಗಳು ಇಲ್ಲದಿರುವ ಅಂಗನವಾಡಿ ಕೇಂದ್ರಗಳಿಗೆ ಸರ್ಕಾರ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ಚಿಂತಿಸಿದೆಯೇ? (ವಿವರಿಸುವುದು)

## ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಬೋಧಕರ ಕೊರತೆ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೧೦೬೦ (೧೨೪೮) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣವೇನು; ಭರ್ತಿ ಮಾಡಿದ್ದರೆ ಮಾಹಿತಿ ನೀಡುವುದು?

## ಸರ್ವ ಶಿಕ್ಷಣ ಅಭಿಯಾನ ಅಡಿ ಶೇ ೧೫%ರಷ್ಟು ಹಣ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ನೀಡುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೧೦೬೧ (೧೨೧೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ನೇ ಸಾಲಿನಿಂದ ೨೦೧೪–೧೫ನೇ ಸಾಲಿನವರೆಗೆ ಕರ್ನಾಟಕ ರಾಜ್ಯದಲ್ಲಿ ಸರ್ವ ಶಿಕ್ಷಣ ಅಭಿಯಾನಕ್ಕೆ ಶೇ ೧೫ರಷ್ಟು ಹಣವನ್ನು ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಕೇಂದ್ರ ಸರ್ಕಾರ ಹಣ ಬಿಡುಗಡೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಯಾವ ಯಾವ ಜಿಲ್ಲೆಗಳಿಗೆ ಎಷ್ಟೆಷ್ಟು ಹಣ ಮಂಜೂರು ಮಾಡಲಾಗಿದೆ ಹಾಗೂ ಖರ್ಚು ಮಾಡಿದ ಹಣದ ಮಾಹಿತಿ ನೀಡುವುದು?

## ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಹುದ್ದೆ ನೇಮಕಾತಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೦೬೨ (೧೨೦೭) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ಮಾಡಬೇಕೆಂದು ಆದೇಶ ಹೊರಡಿಸಲಾಗಿದೆಯೇ ;

(ಆ) ಈ ಆದೇಶದನ್ವಯ ಖಾಲಿ ಇರುವ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸರ್ಕಾರಿ ಹಾಗೂ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಒಟ್ಟು ಪ್ರಾಂಶುಪಾಲರ ಹುದ್ದೆಗಳೆಷ್ಟು ;

(ಈ) ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ?

## ಅರೆಕಾಲಿಕ ಪ್ರೌಢಶಾಲೆ ಶಿಕ್ಷಕರಿಗೆ ಹಳೆ ನಿವೃತ್ತಿ ವೇತನ ನೀಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೦೬೩ (೧೨೦೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅರೆಕಾಲಿಕ ಪ್ರೌಢಶಾಲಾ ಶಿಕ್ಷಕರನ್ನು ವಿಲೀನಗೊಳಿಸಲು ಸಚಿವ ಸಂಪುಟವು ಯಾವ ದಿನಾಂಕದಂದು ನಿರ್ಧರಿಸಲಾಯಿತು;

(ಆ) ಕರ್ನಾಟಕ ರಾಜ್ಯ ಪತ್ರದಲ್ಲಿ ವಿಲೀನಗೊಳಿಸುವ ಬಗ್ಗೆ ಕರಡು ಅಧಿಸೂಚನೆಯನ್ನು ಯಾವ ದಿನಾಂಕದಂದು ಪ್ರಕಟಿಸಲಾಯಿತು ;

(ಇ) ಅರೆಕಾಲಿಕ ಪ್ರೌಢಶಾಲಾ ಶಿಕ್ಷಕರನ್ನು ಅಂತಿಮವಾಗಿ ಯಾವ ದಿನಾಂಕದಂದು ಸರ್ಕಾರಿ ಸೇವೆಯಲ್ಲಿ ವಿಲೀನಗೊಳಿಸಿ ಆದೇಶ ಹೊರಡಿಸಲಾಯಿತು ;

(ಈ) ದಿನಾಂಕ: ೦೧.೦೪.೨೦೦೬ಕ್ಕಿಂತ ಮೊದಲೇ ಅರೆಕಾಲಿಕ ಪ್ರೌಢಶಾಲಾ ಶಿಕ್ಷಕರ ವಿಲೀನಕ್ಕೆ ಸಂಬಂಧಿಸಿದಂತೆ ಸಚಿವ ಸಂಪುಟದಲ್ಲಿ ನಿರ್ಣಯವಾಗಿ ಕರಡು ಅಧಿಸೂಚನೆ ಪ್ರಕಟವಾಗಿರುವುದರಿಂದ ಈ ಶಿಕ್ಷಕರಿಗೆ ಹಳೆಯ ಪಿಂಚಣಿ ಯೋಜನೆ ಜಾರಿಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಉ) ಹಾಗಿದ್ದಲ್ಲಿ, ಸರ್ಕಾರ ಯಾವ ದಿನಾಂಕದಂದು ಆದೇಶ ಹೊರಡಿಸಲಾಗಿದೆ ?

## ಜಿಲ್ಲಾ ಪಂಚಾಯತ್ ಸಿಬ್ಬಂದಿಗಳಿಗೆ ಸಮಾನ ಸೌಲಭ್ಯಗಳನ್ನು ನೀಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೦೬೪ (೧೨೦೫) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾ ಪಂಚಾಯತ್‌ನಲ್ಲಿ ಹಿಂದಿನ ಲೋಕಲ್ ಬೋರ್ಡ್ ಹಾಗೂ ಡಿ.ಎ.ಆರ್.ಡಿ.ಎಸ್.ಗಳಿಂದ ವಿಲೀನಗೊಂಡ ಸಿಬ್ಬಂದಿ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಗ್ರಾಮ ಪಂಚಾಯತ್/ತಾಲ್ಲೂಕು ಪಂಚಾಯತ್/ಜಿಲ್ಲಾ ಪಂಚಾಯತ್‌ಗಳಿಂದ ನೇಮಕಗೊಂಡು ವಿಲೀನಗೊಂಡ ಸಿಬ್ಬಂದಿ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಗ್ರಾಮ ಪಂಚಾಯತ್/ತಾಲ್ಲೂಕು ಪಂಚಾಯತ್/ಜಿಲ್ಲಾ ಪಂಚಾಯತ್‌ಗಳಲ್ಲಿ ಕೆಲಸ ಮಾಡಲು ರಾಜ್ಯ ಸರ್ಕಾರ ನೇಮಿಸಿಕೊಂಡ ಸಿಬ್ಬಂದಿ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಎಲ್ಲ ಸಿಬ್ಬಂದಿಗಳಿಗೆ ಒಂದೇ ರೀತಿಯ ಸೌಲಭ್ಯಗಳು ಅಂದರೆ ಸರ್ಕಾರಿ ನೌಕರರಿಗೆ ಸಿಗುವ ಎಲ್ಲಾ ಸೌಲಭ್ಯಗಳನ್ನು ಕೊಡಲಾಗುತ್ತಿದೆಯೇ ; (ಸೌಲಭ್ಯಗಳ ವಿವರವನ್ನು ನೀಡುವುದು)

(ಉ) ಒಂದು ವೇಳೆ ಎಲ್ಲಾ ಸೌಲಭ್ಯಗಳನ್ನು ನೌಕರರೆಲ್ಲರಿಗೂ ವಿಸ್ತರಿಸಿದ್ದರೆ ಒಂದೇ ವ್ಯವಸ್ಥೆಯಡಿ ಕೆಲಸ ಮಾಡುವ ನೌಕರರಲ್ಲಿ ಸರ್ಕಾರ ತಾರತಮ್ಯ ಮಾಡಿದಂತಾಗುವುದಿಲ್ಲವೇ ;

(ಊ) ಈ ತಾರತಮ್ಯವನ್ನು ಹೋಗಲಾಡಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ಸ್ಥಳೀಯ ಸಂಸ್ಥೆಗಳಲ್ಲಿನ ಕರಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೦೬೫ (೧೨೦೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವೃತ್ತಿ ಶಿಕ್ಷಣವನ್ನು ರದ್ದುಪಡಿಸಿದಾಗ ಕೌನ್ಸಿಲಿಂಗ್ ಮೂಲಕ ಹಾಜರಾದ ಸಿಬ್ಬಂದಿಗೆ ಮೊದಲಿನ ಶಿಕ್ಷಣ ಸಂಸ್ಥೆಯಿಂದ ಬಿಡುಗಡೆ ಹೊಂದಿದ ದಿನಾಂಕದಿಂದ ಸಂಬಳ ಬಟವಾಡೆ ಮಾಡಲಾಗುತ್ತಿರುವುದು ನಿಜವೇ ;

(ಆ) ನಂತರ ಎರಡು ಹಾಗೂ ಮೂರನೇ ಹಂತದಲ್ಲಿ ಸ್ಥಳಾವಕಾಶ ಪಡೆದ ಸಿಬ್ಬಂದಿಗೆ ಅವರು ಮೂಲ ಶಿಕ್ಷಣ ಸಂಸ್ಥೆಯಿಂದ ಬಿಡುಗಡೆಯಾದ ದಿನಾಂಕದಿಂದ ಸಂಬಳ ನೀಡುತ್ತಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವೃತ್ತಿ ಶಿಕ್ಷಣ ವಿಭಾಗ ಸಿಬ್ಬಂದಿಗಳ ವೇತನ ಬಟವಾಡೆಯಲ್ಲಿ ಸರ್ಕಾರ ತಾರತಮ್ಯ ನೀತಿಯನ್ನು ಅನುಸರಿಸಲು ಕಾರಣಗಳೇನು ;

(ಈ) ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

**ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಸೌಲಭ್ಯ ನೀಡುವ ಬಗ್ಗೆ**

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೦೬೬ (೧೨೦೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ನೌಕರರಿಗೆ ಸಿಗುತ್ತಿರುವ ಎಲ್ಲ ಸೌಲಭ್ಯಗಳು ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಸಿಗುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ಸೌಲಭ್ಯಗಳು ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಸಿಗುತ್ತಿಲ್ಲ ;

(ಇ) ಈ ತಾರತಮ್ಯವನ್ನು ಹೋಗಲಾಡಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ;

(ಈ) ಈ ಎಲ್ಲಾ ಸೌಲಭ್ಯಗಳನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ವಿಸ್ತರಿಸಲು ಸರ್ಕಾರ ಕಾಲಮಿತಿ ಹಾಕಿಕೊಂಡಿದೆಯೇ ?

**ಕಲಬುರಗಿ ಜಿಲ್ಲೆಯ ಉರ್ದು ಅಂಗನವಾಡಿ ಕೇಂದ್ರಗಳು**

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ) –**

೧೦೬೭ (೧೧೫೭) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಾದ್ಯಂತ ಇರುವ ಉರ್ದು ಅಂಗನವಾಡಿ ಕೇಂದ್ರಗಳೆಷ್ಟು; (ವಿವರ ಒದಗಿಸುವುದು)

(ಆ) ಇವುಗಳಲ್ಲಿ ಸ್ವಂತ ಕಟ್ಟಡಗಳನ್ನು ಹೊಂದಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಇ) ೨೦೧೩-೧೪ನೇ ಸಾಲಿನಲ್ಲಿ ಜಿಲ್ಲೆಗೆ ಹೊಸದಾಗಿ ಉರ್ದು ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡಲಾಗಿದೆಯೇ? (ವಿವರ ಒದಗಿಸುವುದು)

## "ಕಣಜ" ಕನ್ನಡ ವಿಕಿಪೀಡಿಯಾ ಜಾಲ ತಾಣದ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ನಾಮನಿರ್ದೇಶನ) –**

೧೦೬೮ (೧೧೬೭) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಕಿಪೀಡಿಯಾ ಮಾದರಿಯಲ್ಲಿ "ಕಣಜ" ಕನ್ನಡ ವಿಕಿಪೀಡಿಯಾ ಆರಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) "ಕಣಜ" ಆರಂಭವಾದಾಗಿನಿಂದ, ಇದರ ಜಾಲತಾಣವನ್ನು ಯಾರು ನಿರ್ವಹಿಸುತ್ತಿದ್ದರು ಮತ್ತು ಎಷ್ಟು ಮಾಹಿತಿಯನ್ನು ಜಾಲತಾಣಕ್ಕೆ ಸೇರಿಸಲಾಗಿದೆ; (ಪೂರ್ಣ ವಿವರ ನೀಡುವುದು)

(ಇ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಪ್ರಸ್ತುತ "ಕಣಜ" ಜಾಲತಾಣದ ನಿರ್ವಹಣೆಯನ್ನು ವಹಿಸಿಕೊಡಲು ಕಾರಣವೇನು?

## ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳ ವಿದೇಶ ಪ್ರವಾಸದ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ನಾಮನಿರ್ದೇಶನ) –**

೧೦೬೯ (೧೧೯೯) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(a) the no. of foreign trips the bureaucrats in the tourism department have undertaken in the last two years ; the names of the officials, the countries they have visited ; the duration of their visit and the purpose of their visit ; (may be furnished)

(b) money has been spet on each of the officials who went on foreign trips in the last two years mention the names of the officials and break-up of the amount ; (may be furnished)

(c) whether these officials have travelled in economy class or business ; how many have upgraded from ecomony class to business class during travel ; (give reasons)

(d) the major achievements of the tourism department from the foreign trips ; the no. of foreign investments have been routed into the State through the tourism department following these trips ;

(e) the lessons learnt from the foreign trips have been replicated/implemented in the State ;

(f) the no. of officials have undertaken foreign jaunts sponsored by private companies in the last two years ? (names of the officials and their sponsors to be mentioned)

## ಗ್ರಾಮ ಪಂಚಾಯಿತಿಗಳ ಸಂಖ್ಯೆ ಹೆಚ್ಚಿಸಿರುವ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೭೦ (೧೧೭೫) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳ ಸಂಖ್ಯೆಯನ್ನು ಹೆಚ್ಚಿಸಲಾಗಿದೆಯೇ; ಹಾಗಿದ್ದಲ್ಲಿ, ಹೆಚ್ಚಿಸಲಾಗಿರುವ ಗ್ರಾಮ ಪಂಚಾಯಿತಿಗಳ ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು;

(ಆ) ಹೆಚ್ಚಿಸಲಾಗಿರುವ ಗ್ರಾಮ ಪಂಚಾಯಿತಿಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ನೀಡುವ ಅನುದಾನ; (ವಿವರ ನೀಡುವುದು)

(ಇ) ಹೆಚ್ಚಿಗೆ ಮಾಡಿರುವ ಗ್ರಾಮ ಪಂಚಾಯಿತಿಗಳ ಬಗ್ಗೆ ಸರ್ಕಾರ ಹೊರಡಿಸಿರುವ ಆದೇಶ/ಅಧಿಸೂಚನೆ ಇತರೆ ಆದೇಶಗಳ ಪ್ರತಿ ಒದಗಿಸುವುದು?

## ಚಾಮರಾಜನಗರ ರೈಲು ನಿಲ್ದಾಣದ ಆವರಣ ಮತ್ತು ರಸ್ತೆಯ ಅಭಿವೃದ್ಧಿ ಕುರಿತು

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೭೧ (೧೧೮೧) ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಾಮರಾಜನಗರ–ಮೈಸೂರು ಮುಖ್ಯರಸ್ತೆಯಿಂದ, ಚಾಮರಾಜನಗರ ರೈಲು ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯು ರೈಲ್ವೆ ಇಲಾಖೆಗೆ ಸೇರಿದ್ದು ಈ ರಸ್ತೆಯ ಅಭಿವೃದ್ಧಿಗೆ ಅನುದಾನ ಮಂಜೂರಾಗಿದ್ದರೂ ಈ ರಸ್ತೆಯ ಅಭಿವೃದ್ಧಿ ಮಾಡದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆ ಆಗಿದ್ದು, ಈ ರಸ್ತೆಯನ್ನು ಅಭಿವೃದ್ಧಿಪಡಿಸುವಂತೆ ರೈಲ್ವೆ ಇಲಾಖೆಗೆ ಸೂಚಿಸಲಾಗುವುದೇ;

(ಆ) ಚಾಮರಾಜನಗರ ರೈಲು ನಿಲ್ದಾಣದ ಮುಂಭಾಗದಲ್ಲಿ ವಾಹನ ನಿಲುಗಡೆ ಸ್ಥಳದಲ್ಲಿ ಡಾಂಬರೀಕರಣ ಮಾಡದೇ ಮಳೆ ಬಂದಾಗ

ಈ ಜಾಗದಲ್ಲಿ ನೀರು ನಿಂತು ಅವ್ಯವಸ್ಥೆಯಾಗಿ ಪ್ರಯಾಣಿಕರು ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದರಿಂದ ಈ ಆವರಣದ ಅಭಿವೃದ್ಧಿಗೆ ರೈಲ್ವೆ ಇಲಾಖೆಗೆ ಸೂಚನೆ ನೀಡಲಾಗುವುದೇ?

## ಶಾಲಾ ಮಕ್ಕಳ ಬುದ್ಧಿಮತ್ತೆ ಹೆಚ್ಚಿಸುವ ಖಾಸಗಿ ಸಂಸ್ಥೆಯ ಕಾರ್ಯಗಾರ ಕುರಿತು

**ಶ್ರೀ ಎಂ. ಶ್ರೀನಿವಾಸ್ (ವಿಧಾನ ಸಭೆಯಿಂದ ಚುನಾಯಿತರಾದವರು) –**

೧೦೭೨ (೧೧೭೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಕ್ಕಳ ಬುದ್ಧಿಮತ್ತೆ (ಬುದ್ಧಿವಂತಿಕೆ), ಜ್ಞಾಪಕ ಶಕ್ತಿಯನ್ನು ಹೆಚ್ಚಿಸುವಂತಹ ವಿವಿಧ ಕಾರ್ಯಕ್ರಮಗಳನ್ನು ಖಾಸಗೀ ಸಂಸ್ಥೆಗಳು ಆಯೋಜಿಸಿ ನಡೆಸುತ್ತಿರುವುದನ್ನು ಸರ್ಕಾರವು ಗಮನಿಸಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ, ವಿದೇಶಿ ಸಂಸ್ಥೆಗಳ ವಿವರ ಒದಗಿಸುವುದು;

(ಆ) ಇಂತಹ ಸಂಸ್ಥೆಗಳು ಕಾರ್ಯಕ್ರಮದ ಹೆಸರಿನಲ್ಲಿ ಸಾವಿರಾರು, ಲಕ್ಷಾಂತರ ರೂಪಾಯಿಗಳನ್ನು ಶುಲ್ಕದ ಹೆಸರಿನಲ್ಲಿ ಸಂಗ್ರಹಿಸುತ್ತಿರುವ ಅಂಶವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ, ಸರ್ಕಾರವು ಈ ನಿಟ್ಟಿನಲ್ಲಿ ಅನುಸರಿಸುತ್ತಿರುವ ಮಾನದಂಡವೇನು; (ಪೂರ್ಣ ಮಾಹಿತಿ ಒದಗಿಸುವುದು)

(ಇ) ಮಕ್ಕಳನ್ನು ನಿಗದಿತ ಪಠ್ಯ ಚಟುವಟಿಕೆಗಳ ಜೊತೆಗೆ ಪಠ್ಯೇತರ ಮತ್ತು ಅಂತರಾಷ್ಟ್ರೀಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸುವಂತೆ ಉತ್ತೇಜಿಸುವ ಸಲುವಾಗಿ ಕಾರ್ಯಕ್ರಮಗಳು, ಅನುದಾನ, ಚಿಂತನೆ ಸರ್ಕಾರದ ಮುಂದೆ ಇದೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ಒದಗಿಸುವುದು?

## ಸರ್ಕಾರಿ ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಕರ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) –**

೧೦೭೩ (೧೧೯೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಶಿಕ್ಷಣ ನೀಡಲು ಇಲಾಖೆಯಿಂದ ನಿಗದಿ ಮಾಡಿರುವ ಹಣವೆಷ್ಟು; ನಿಗದಿಯಾಗಿದ್ದರೆ, ಜಿಲ್ಲಾವಾರು ವಿವರ ನೀಡುವುದು;

(ಆ) ಯಾವ ವರ್ಷದಿಂದ ಪ್ರಾರಂಭವಾಗಿದೆ; ಇದರಿಂದ ಶಿಕ್ಷಣ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಕಳೆದ ಮೂರು ವರ್ಷಗಳ ಮಾಹಿತಿಯನ್ನು ನೀಡುವುದು)

(ಇ) ಐ.ಸಿ.ಟಿ ಯೋಜನೆಯಡಿಯಲ್ಲಿ ರಾಜ್ಯ ಪ್ರೌಢ ಶಿಕ್ಷಣ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಶಿಕ್ಷಣ ನೀಡಲು ಕೇಂದ್ರ ಸರ್ಕಾರ ಸಹಾಯಧನ ನೀಡುತ್ತಿದೆಯೇ; ನೀಡುತ್ತಿದ್ದರೆ, ವಿವರವನ್ನು ನೀಡುವುದು;

(ಈ) ಸರ್ಕಾರಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಕ್ರೀಡಾ ಚಟುವಟಿಕೆ ಹಾಗೂ ಸಾಂಸ್ಕೃತಿಕ ಶಿಕ್ಷಣ ನೀಡಲು ರಾಜ್ಯದಲ್ಲಿರುವ ದೈಹಿಕ ಶಿಕ್ಷಕರ ಸಂಖ್ಯೆ ಎಷ್ಟು; ಎಷ್ಟು ಶಾಲೆಗಳಲ್ಲಿ ಶಿಕ್ಷಕರು ಇದ್ದಾರೆ; ದೈಹಿಕ ಶಿಕ್ಷಕರು ಇಲ್ಲದ ಶಾಲೆಗಳು ಎಷ್ಟು;

(ಉ) ಅನುದಾನಿತ ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಕರು ಇರುವರೇ, ಇದ್ದರೆ, ಎಷ್ಟು ಶಾಲೆಗಳಲ್ಲಿ ಇದ್ದಾರೆ, ಇಲ್ಲದ ಶಾಲೆಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು